ಸಂಪುಟ: 13 Volume ಸಂಚಿಕೆ: 207 Issue ಪುಟಗಳು: 08 Pages
ಮಂಗಳವಾರ 30 ಸೆಪ್ಟೆಂಬರ್ 2025 ₹2
RNINO:KARKAN/2011/48371
BDR/054/2026-2027
mallammanudi@gmail.com
www.mallammanudi.in
9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

### ಬೆಳಗು

ಜೀವನದಲ್ಲಿ ಗೆಲುವು ಎಂದಿಗೂ ಸುಲಭವಾಗಿ ಸಿಗುವುದಿಲ್ಲ. ಅದಕ್ಕೆ ಸದಾ ಹೋರಾಟ ಮಾಡಬೇಕು. ನಿಂದನೆಯೇ ಅಸ್ತ್ರ, ವಿರೋಧಿ ಗಳ ಕುಹಕ ಮಾತುಗಳೇ ಸ್ಪೂರ್ತಿ ಅಗಿ ತೆಗೆದುಕೊಂಡು ಬೆಳೆಯ ಬೇಕು.

-ಡಾ.ಬಿಆರ್.ಅಂಬೇಡ್ಕರ್



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ಹಾಗೂ ರಾಜ್ಯದ ಇತರೆಕಡೆಗಳಲ್ಲಿ ನಿರ್ಮಿಸಿರುವ ಕಟ್ಟಡಗಳಿಗೆ ವಿದ್ಯುತ್ ಮತ್ತು ನೀರಿನ ಸಂಪರ್ಕ ಕಲ್ಪಿಸುವಲ್ಲಿ ಇರುವ ತೊಡಕುಗಳ ಕುರಿತಂತೆ ನಗರಾಭಿವೃದ್ಧಿ, ಪೌರಾಡಳಿತ ಇಲಾಖೆ, ಬೆಂಗಳೂರು ಜಲಮಂಡಳಿ, ಕೆಪಿಟಿಸಿಎಲ್, ಬೆಸ್ಕಾಂನ ಹಿರಿಯ ಅಧಿಕಾರಿಗಳ ಜೊತೆ ಗೃಹ ಕಚೇರಿ ಕೃಷ್ಣದಲ್ಲಿ ಸಭೆ ನಡೆಸಿದರು. ಸಭೆಯಲ್ಲಿ ಬಹುಕಾಲದಿಂದ ಇರುವ ಸಮಸ್ಯೆಗಳು ಮತ್ತು ಇವಕ್ಕೆ ಪರಿಹಾರ ಮಾರ್ಗೋಪಾಯಗಳ ಬಗ್ಗೆ ಚರ್ಚಿಸಿದರು. ಇಂಧನ ಸಚಿವರಾದ ಕೆ.ಜೆ.ಜಾರ್ಜ್, ನಗರಾಭಿವೃದ್ಧಿ ಸಚಿವರಾದ ಬೈರತಿ ಸುರೇಶ್, ಪೌರಾಡಳಿತ ಸಚಿವರಾದ ರಹೀಂಖಾನ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಸರ್ಕಾರದ ಮುಖ್ಯಕಾರ್ಯದರ್ಶಿಗಳಾದ ಡಾ.ಶಾಲಿನಿ ರಜನೀಶ್ ಸೇರಿದಂತೆ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಗುಂಡಿನ ದಾಳಿಗೆ ನಾಲ್ಕು ಸಾವು

**ವಾಷಿಂಗ್ಟನ್:** ಅಮೆರಿಕದ ಮಿಷಿಗನ್ನ ಮಾರ್ಮನ್ ಚರ್ಚ್‌ವೊಂದಕ್ಕೆ ಕಾರು ನುಗ್ಗಿಸಿದ ದುಷ್ಕರ್ಮಿಯೊಬ್ಬ, ಅಸಾಲ್ಟ್ ರೈಫಲ್ನಿಂದ ಮನಬಂದಂತೆ ಗುಂಡು ಹಾರಿಸಿ, ಬಳಿಕ ಚರ್ಚ್‌ಗೆ ಬೆಂಕಿ ಹಚ್ಚಿದ್ದಾನೆ. ಈ ಭೀಕರ ಘಟನೆಯಲ್ಲಿ ಕನಿಷ್ಠ ನಾಲ್ಕು ಜನರು ಮೃತಪಟ್ಟಿದ್ದು, ಎಂಟು ಮಂದಿ ತೀವ್ರವಾಗಿ ಗಾಯಗೊಂಡಿದ್ದಾರೆ.



ದಾಳಿ ನಡೆಸಿದ ವ್ಯಕ್ತಿಯನ್ನು 40 ವರ್ಷದ ಥಾಮಸ್ ಜೇಕಬ್ ಸ್ಯಾನ್ಪೋರ್ಡ್ ಎಂದು ಪೊಲೀಸರು ಗುರುತಿಸಿದ್ದಾರೆ. ಈತ ಅಮೆರಿಕದ ಮಾಜಿ ಸೈನಿಕನಾಗಿದ್ದು, 2004 ರಿಂದ 2008 ರವರೆಗೆ ಇರಾಕ್ ಯುದ್ಧದಲ್ಲಿ ಸೇವೆಯನ್ನು ಸಲ್ಲಿಸಿದ್ದ. ಘಟನೆಯ ನಂತರ ಪೊಲೀಸರೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ ಈತ ಹತನಾಗಿದ್ದಾನೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

## ಉರುಳಿ ಬಿದ್ದ ಕಂಟೈನರ್

**ನೆಲಮಂಗಲ:** ಚಾಲಕನ ನಿಯಂತ್ರಣ ತಪ್ಪಿದ ಕಂಟೈನರ್ ರಸ್ತೆಗೆ ಅಡ್ಡಲಾಗಿ ಉರುಳಿಬಿದ್ದ ಘಟನೆ ನೆಲಮಂಗಲ ಟೋಲ್ ಬಳಿ ನಡೆದಿದೆ. ತುಮಕೂರು ಕಡೆಯಿಂದ ಬೆಂಗಳೂರಿಗೆ ಬರುತ್ತಿದ್ದ ಕಂಟೈನರ್ ಲಾರಿ ಟೋಲ್ ಬಳಿ ಚಾಲಕನ ನಿಯಂತ್ರಣ ಕಳೆದುಕೊಂಡು ರಸ್ತೆಗೆ ಅಡ್ಡಲಾಗಿ ಉರುಳಿಬಿದ್ದಿದೆ. ಅದೃಷ್ಟವಶಾತ್ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಒಂದು ವೇಳೆ ಹಿಂದಿನಿಂದ ವೇಗವಾಗಿ ವಾಹನಗಳು ಬಂದಿದ್ದರೆ ಭಾರೀ



ಅನಾಹುತವೇ ಸಂಭವಿಸುತ್ತಿತ್ತು. ಮುಂಜಾನೆಯಾದ್ದರಿಂದ ವಾಹನಗಳ ಸಂಖ್ಯೆ ಕಡಿಮೆಯಿದ್ದುದರಿಂದ ಅನಾಹುತ ಸಂಭವಿಸಿಲ್ಲ. ಅಪಘಾತದಿಂದ ಕಿಲೋಮೀಟರ್ ಗಟ್ಟಲೆ ವಾಹನಗಳು ಸಾಲುಗಟ್ಟಿ ನಿಂತಿದ್ದವು. ಸಂಚಾರಿ ಠಾಣೆ ಸಿಬ್ಬಂದಿಯು ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟಿದ್ದಾರೆ.

## ಜಂಬೂಸವಾರಿಯ ತಾಲೀಮು

**ಮೈಸೂರು:** ನಾಡಹಬ್ಬ ದಸರಾದ ಆಕರ್ಷಣೀಯವಾದ ಜಂಬೂಸವಾರಿ ಮೆರವಣಿಗೆ ಹಿನ್ನೆಲೆಯಲ್ಲಿ ಅರಮನೆ ಆವರಣದಲ್ಲಿಂದು ತಾಲೀಮು ನಡೆಸಲಾಯಿತು. ವಿಜಯದಶಮಿ ದಿನ ನಾಡ ಅಧಿದೇವತಿ ಚಾಮುಂಡೇಶ್ವರಿ ತಾಯಿಯನ್ನು ಚಿನ್ನದ ಅಂಬಾರಿಯಲ್ಲಿ ಕುಳ್ಳಿರಿಸಿ ಕ್ಯಾಪ್ಟನ್ ಅಭಿಮನ್ಯು ಹೆಜ್ಜೆ ಹಾಕಲಿದ್ದಾನೆ. ಈ ಹಿನ್ನೆಲೆಯಲ್ಲಿ ಅಭಿಮನ್ಯು ಆನಂದ್, ಪೊಲೀಸ್ ಬ್ಯಾಂಡ್ ಅಶ್ವಾರೂಢ ದಳ ಹಾಗೂ ಪೊಲೀಸ್ ಪಡೆಯೊಂದಿಗೆ ಮೆರವಣಿಗೆ ನಡೆಸುವ ಮೂಲಕ ತಾಲೀಮು ನಡೆಸಲಾಯಿತು. ಜಂಬೂ ಸವಾರಿಗೆ ಈಗಾಗಲೇ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು, ಗಜಪಡೆಗಳಿಗೆ ಅಂತಿಮ ಹಂತದ ತಾಲೀಮು ನಡೆಸಲಾಗುತ್ತಿದೆ. ಕಳೆದ ವರ್ಷ 8 ದಿನಗಳಲ್ಲಿ 4 ಲಕ್ಷ ಪ್ರವಾಸಿಗರು ಭೇಟಿ ನೀಡಿದ್ದರು. ಈ ಬಾರಿ 7 ದಿನಗಳಲ್ಲಿ 4 ಲಕ್ಷ ಪ್ರವಾಸಿಗರು ಭೇಟಿ ನೀಡಿ ದಾಖಲೆ ನಿರ್ಮಿಸಿದ್ದಾರೆ. ದಸರಾ ವೈಭವವನ್ನು ವೀಕ್ಷಿಸಲು ರಾಜ್ಯ ಹಾಗೂ ಹೊರರಾಜ್ಯಗಳಿಂದ ನಿರೀಕ್ಷೆಗೂ ಮೀರಿ ಪ್ರವಾಸಿಗರು ಆಗಮಿಸುತ್ತಿದ್ದಾರೆ. ಮುಂದಿನ ನಾಲ್ಕು ದಿನಗಳಲ್ಲಿ ಪ್ರವಾಸಿಗರ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ಸಾಧ್ಯತೆಯಿದೆ. ಎಲ್ಲಾ ಹೋಟೆಲ್‌ಗಳು, ರೂಂಗಳು ಭರ್ತಿಯಾಗಿವೆ.

ಮಲ್ಲಮ್ಮ ನುಡಿಯ ರಾಜ್ಯಮಟ್ಟದ ಆವೃತ್ತಿ ಲೋಕಾರ್ಪಣೆ ವೇಳೆ ನಡೆದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು...



## ಭಕ್ತರನ್ನು ತಡೆಯಲು ಸಂಚು

**ಮಂಗಳೂರು:** ಧರ್ಮಸ್ಥಳಕ್ಕೆ ಭಕ್ತರು ಭೇಟಿ ನೀಡುವುದನ್ನು ತಡೆಯುವ ಸಂಚು ಕೋರರ ಉದ್ದೇಶ ಎಸ್ಐಟಿಯಿಂದ ಬಹಿರಂಗವಾಗಿದೆ ಎಂದು ಧರ್ಮಸ್ಥಳದ ಧರ್ಮಾಧಿಕಾರಿ ಡಾ. ವೀರೇಂದ್ರ ಹೆಗ್ಗಡೆ ಭಾನುವಾರ ಹೇಳಿದ್ದಾರೆ.



ಧರ್ಮಸ್ಥಳದಲ್ಲಿ ಚಂಡಿಕಾ ಹೋಮ ನಡೆಸಿದ ನಂತರ ಬೆಳ್ತಂಗಡಿ ತಾಲ್ಲೂಕಿನ 81 ಗ್ರಾಮಸ್ಥರು ಆಯೋಜಿಸಿದ್ದ ಸತ್ಯ ದರ್ಶನ ಸಮಾವೇಶದಲ್ಲಿ ಭಕ್ತರನ್ನು ಉದ್ದೇಶಿಸಿ ಮಾತನಾಡಿದ ಅವರು, ಎಸ್ಐಟಿ ರಚಿಸಿದ್ದಕ್ಕಾಗಿ ರಾಜ್ಯ ಸರ್ಕಾರಕ್ಕೆ ನಾನು ಧನ್ಯವಾದ ಹೇಳುತ್ತೇನೆ. ಎಸ್ಐಟಿ ರಚನೆಯಾಗಿರದಿದ್ದರೆ, ಸತ್ಯ ಹೊರಬರುತ್ತಿರಲಿಲ್ಲ. ಮೊದಲ ದಿನವೇ ಎಸ್ಐಟಿ ರಚನೆಯನ್ನು ನಾವು ಸ್ವಾಗತಿಸಿದ್ದೆವು. ಇದೀಗ ಸಂಚು ಕೋರರು ಯಾರು ಎಂಬುದು ಬಹಿರಂಗವಾಗಿದೆ ಎಂದಿದ್ದಾರೆ.

ಧರ್ಮಸ್ಥಳಕ್ಕೆ ಭಕ್ತರು ಭೇಟಿ ನೀಡುವುದನ್ನು ನಿಲ್ಲಿಸಿ, ಕ್ಷೇತ್ರವನ್ನು ನಾಶಪಡಿಸುವುದು ಅವರ (ಪಿತೂರಿಗಾರರ) ಉದ್ದೇಶವಾಗಿತ್ತು. ಭಕ್ತರು ಕ್ಷೇತ್ರಕ್ಕೆ ಭೇಟಿ ನೀಡುವುದನ್ನು ಯಾರೂ ತಡೆಯಲು ಸಾಧ್ಯವಿಲ್ಲ. ಮಂಜುನಾಥ ಸ್ವಾಮಿ ಮತ್ತು ಅಣ್ಣಪ್ಪ ಸ್ವಾಮಿಯಿಂದ ಮಾತ್ರ ಸಾಧ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ.

# ತಪ್ಪಿನ ತಾಂತ್ರಿಕ ಮಂತ್ರ..!


## ನಿಗಮ ಮಂಡಳಿ ನೇಮಕ ವಿಚಾರ | ಸರ್ಕಾರದ ಸಣ್ಣ ತಪ್ಪು | ಧುರೀಣರಿಗೆ ಕಸಿವಿಸಿ

**ಬೆಂಗಳೂರು:** ರಾಜ್ಯ ಸರ್ಕಾರದ ಒಂದಿಲ್ಲೊಂದು ಯಡವಟ್ಟುಗಳು ಸದಾ ಸುದ್ದಿಯಾಗುತ್ತಿವೆ..! ಇತ್ತೀಚೆಗೆ ನಿಗಮ ಮಂಡಳಿ ನೇಮಕ ವಿಚಾರವಾಗಿ ರಾಜ್ಯ ಸರ್ಕಾರದ ಸಣ್ಣ ತಪ್ಪಿನಿಂದಾಗಿ ಗೊಂದಲದ ವಾತಾವರಣ ನಿರ್ಮಾಣವಾಗಿದೆ.

**ಮತ್ತೊಂದು ಉಪ್ರದವ:** ಕೆಲವು ದಿನಗಳ ಹಿಂದೆ ರಾಜು ಕಾಗೆ ಅಧ್ಯಕ್ಷರಾಗಿದ್ದ ನಿಗಮಕ್ಕೆ ಮತ್ತೊಬ್ಬರ ಹೆಸರು ನಮೂದಾಗಿತ್ತು. ತಾಂತ್ರಿಕ ತಪ್ಪಿನಿಂದಾಗಿ ಹೀಗಾಗಿದೆ ಎಂದು ಸರ್ಕಾರ ಬಳಿಕ ಸ್ಪಷ್ಟನೆ ನೀಡಿತ್ತು. ಆದರೆ ಇದೀಗ ಮತ್ತೊಮ್ಮೆ ಇಂತಹ ಉಪದ್ರವ ಮಾಡಿರುವುದು ಬೆಳಕಿಗೆ ಬಂದಿದೆ.

**ನೇಮಕಗೊಂಡವರ ಗೊಂದಲ:** ನಿಗಮ ಮಂಡಳಿಗಳಲ್ಲಿ ಅಧ್ಯಕ್ಷರಾಗಿ ನೇಮಕವಾಗಿದ್ದರಿಗೆ ಉಪಾಧ್ಯಕ್ಷ ಸ್ಥಾನ ನೀಡಲಾಗಿದೆ. ಉಪಾಧ್ಯಕ್ಷರಾಗಿ ನೇಮಕ ಆದವರಿಗೆ ಅಧ್ಯಕ್ಷ ಸ್ಥಾನದ ಮರು ಹಂಚಿಕೆ ಮಾಡಲಾಗಿದೆ. ದಿಢೀರ್ ಆಗಿ ಸ್ಥಾನದಲ್ಲಿ ಆದ ಪಲ್ಲಟದಿಂದಾಗಿ ನೇಮಕಗೊಂಡವರು ಗೊಂದಲಕ್ಕೆ ಒಳಗಾಗಿದ್ದಾರೆ.

- ರಾಜ್ಯ ಸರ್ಕಾರ ನಿಗಮ ಮಂಡಳಿಗಳ ಅಧ್ಯಕ್ಷರ ನೇಮಕಾತಿ ಪಟ್ಟಿ ಇತ್ತೀಚೆಗಷ್ಟೇ ಬಿಡುಗಡೆಯಾಯಿತು. ಸೆ. 29ರಂದು ಆ ಅಧ್ಯಕ್ಷರ ಪದಗ್ರಹಣವೂ ನಡೆದಿದೆ.
- ಈಗ ನಿಗಮ ಮಂಡಳಿಗಳಿಗೆ ಉಪಾಧ್ಯಕ್ಷರ ಪಟ್ಟಿ ಬಿಡುಗಡೆಯಾಗಿದ್ದು ಅದು ಕೆಲವರಲ್ಲಿ ಅಸಮಾಧಾನಕ್ಕೆ ಕಾರಣವಾಗಿದೆ.
- ಈಗಾಗಲೇ ನಿಗಮ, ಮಂಡಳಿಗಳಿಗೆ ಅಧ್ಯಕ್ಷರಾಗಿದ್ದವರಿಗೆ ಉಪಾಧ್ಯಕ್ಷರನ್ನಾಗಿಸಿರುವುದು ಇದಕ್ಕೆ ಕಾರಣ.



### ಸ್ಥಾನಬದಲಾವಣೆಯ ಕರಾಮತ್ತು..!


ಬಿಎಂಟಿಸಿ ಅಧ್ಯಕ್ಷರಾಗಿ ನಿಕೇತ್ ರಾಜ್ ಮೌರ್ಯ ಅವರನ್ನು ನೇಮಕ ಮಾಡಲಾಗಿತ್ತು. ನಿಕೇತ್ ರಾಜ್ ಅಧಿಕಾರ ಸ್ವೀಕಾರ ಮಾಡಿ ಸರ್ಕಾರಕ್ಕೆ ಧನ್ಯವಾದ ಸಲ್ಲಿಸಿದ್ದರು. ಆದರೆ ಇದೀಗ ದಿಢೀರ್ ಬದಲಾವಣೆ ಆಗಿದೆ. ಬಿಎಂಟಿಸಿ ಅಧ್ಯಕ್ಷರಾಗಿ ವಿ ಎಸ್ ಆರಾಧ್ಯ ನೇಮಕ ಮಾಡಲಾಗಿದೆ. ಅಧ್ಯಕ್ಷರಾಗಿದ್ದ ನಿಕೇತ್ ರಾಜ್ ಮೌರ್ಯಗೆ ಬಿಎಂಟಿಸಿ ಉಪಾಧ್ಯಕ್ಷ ಸ್ಥಾನ ನೀಡಲಾಗಿದೆ. ಬಾಕಿ ಉಳಿದ 5 ನಿಗಮ ಮಂಡಳಿಗಳಿಗೂ ಅಧ್ಯಕ್ಷರ ನೇಮಕ ಮಾಡಲಾಗಿದೆ.

### ಯಾರ್ಯಾರಿಗೆ ಯಾವ ನಿಗಮದ ಪಟ್ಟ..?

ಸೈಯದ್ ಮೆಹಮೂದ್ ಚಿಸ್ಟಿ- ಅಧ್ಯಕ್ಷರು- ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿ, ಕರ್ನಾಟಕ ತೊಗರಿ ಅಭಿವೃದ್ಧಿ ಮಂಡಳಿ ನೀಡಲಾಗಿದೆ. ಇನ್ನು ಶರಣಪ್ಪ ಸಲಾದ್ ಪುರ್ ಅವರನ್ನು ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ. ಆಂಜನಪ್ಪ- ಅಧ್ಯಕ್ಷರು ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮಿತ, ನೀಲಕಂಠರಾವ್ ಎಸ್ ಮೂಲಗೆ- ಅಧ್ಯಕ್ಷರು- ಕರ್ನಾಟಕ ರಾಜ್ಯ ಸಾಂಬಾರು ಅಭಿವೃದ್ಧಿ ಮಂಡಳಿ, ಅನಿಲ್ ಕುಮಾರ್ ಜಮಾದಾರ್- ಉಪಾಧ್ಯಕ್ಷ- ಜವಾಹರ ಬಾಲಭವನ ಸೊಸೈಟಿಗೆ ನೇಮಕ ಮಾಡಲಾಗಿದೆ.

### ನಿಗಮ: ಗಾಬರಿಗೊಂಡಿದ್ದರು ರಾಜು ಕಾಗೆ..!

ಶಾಸಕ ರಾಜು ಕಾಗೆ ಅವರಿಗೆ ವಾಯುವ್ಯ ಕರ್ನಾಟಕ ಸಾರಿಗೆ ನಿಗಮದ ಅಧ್ಯಕ್ಷ ಸ್ಥಾನ ನೀಡಲಾಗಿತ್ತು. ಆದರೆ ನಿಗಮ ಮಂಡಳಿ ಎಐಸಿಸಿ ಪಟ್ಟಿಯಲ್ಲಿ ರಾಜು ಕಾಗೆ ಬದಲಾಗಿ ಅರುಣ್ ಕುಮಾರ್ ಪಾಟೀಲ್ ಹೆಸರು ನಮೂದಾಗಿತ್ತು. ಇದರಿಂದ ಬೇಸರಗೊಂಡಿದ್ದ ಕಾಗೆ ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿ ಆಗಿದ್ದರು. ಬಳಿಕ ಇದನ್ನು ಬದಲಾವಣೆ ಮಾಡಲಾಯಿತು. ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷ ಸ್ಥಾನವನ್ನು ಅರುಣ್ ಕುಮಾರ್ ಪಾಟೀಲ್ ಅವರಿಗೆ ನೀಡಲಾಯಿತು.




ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಹಿರಿಯ ನಿವೃತ್ತ ಪೊಲೀಸ್ ಅಧಿಕಾರಿ ಬಸವರಾಜ್ ಮಾಲಗತ್ತಿ, ಖ್ಯಾತ ನಟ, ನಿರ್ದೇಶಕ ಎಸ್.ನಾರಾಯಣ್ ಮತ್ತಿತರ ಗಣ್ಯರು ಮಲ್ಲಮ್ಮ ನುಡಿಯ ರಾಜ್ಯಮಟ್ಟದ ಆವೃತ್ತಿ ಮತ್ತು ನಮ್ಮೂರ ಸುದ್ದಿ ಸ್ಟೇಟ್ ಡಿಜಿಟಲ್ ವೆಬ್ ಚಾನೆಲ್ ಅನ್ನು ಸೋಮವಾರ ಲೋಕಾರ್ಪಣೆ ಗೊಳಿಸಿದ್ದಾರೆ. ಸಂಪಾದಕ ಡಾ.ಎಂ.ಮಹ್ಮದ್ ಬಾಷ ಗೂಳ್ಯಂ, ಸಿಇಒ ಚರಣ್ ರಾಜ್ ಸೇರಿ ಹಲವಾರು ಗಣ್ಯರು ಹಾಜರಿದ್ದರು.

## ಐ ಲವ್ ಯು ಇಂಡಿಯಾ..!



**ದುಬೈ:** ದುಬೈ ಮತ್ತು ಅಬುದಾಬಿಯಲ್ಲಿ ನಡೆದ ಏಷ್ಯಾ ಕಪ್ 2025 ಕ್ರೀಡಾಕೂಟ ಮುಕ್ತಾಯಗೊಂಡಿದೆ. ಸಾಂಪ್ರದಾಯಿಕ ಎದುರಾಳಿಗಳಾದ ಭಾರತ ಮತ್ತು ಪಾಕಿಸ್ತಾನದ ನಡುವಿನ ಪಂದ್ಯವನ್ನು ಇಡೀ ಕ್ರಿಕೆಟ್ ಜಗತ್ತು ಕುತೂಹಲದಿಂದ ನೋಡುತ್ತಿತ್ತು. ಕ್ರೀಡಾಕೂಟದ ಮೂರೂ ಪಂದ್ಯಗಳಲ್ಲಿ ಪಾಕಿಸ್ತಾನ, ಭಾರತದ ವಿರುದ್ಧ ಮಂಡಿಯೂರಿದೆ.

ಕ್ರಿಕೆಟ್ ಜೊತೆಗೆ, ಭಾರತದ ನೆಲದಲ್ಲಿನ ಪಾಕಿಸ್ತಾನ ಕೃಪಾಪೋಷಿತ ಭಯೋತ್ಪಾದನಾ ಕೃತ್ಯದಿಂದಾಗಿ, ಟೀಂ ಇಂಡಿಯಾ ಅವರ ವಿರುದ್ಧ ಆಡಲೇ ಬಾರದು ಎನ್ನುವುದು ಹೆಚ್ಚಿನ ಭಾರತೀಯರ ನಿರೀಕ್ಷೆಯಾಗಿತ್ತು. ಆದರೆ, ಮೊದಲ ಪಂದ್ಯದಲ್ಲೇ ಅವರಿಗೆ ಹ್ಯಾಂಡ್ ಶೇಕ್ ಮಾಡದೇ ಭಾರತ ಅಂತರವನ್ನು ಕಾಯ್ದುಕೊಂಡಿತು. ಜೊತೆಗೆ, ಮೊದಲ ಪಂದ್ಯದ ಗೆಲುವನ್ನು ಪಹಲ್ಗಾಮ್ ನಲ್ಲಿ ಮೃತ ಪಟ್ಟವರಿಗೆ ಸೂರ್ಯ ಕುಮಾರ್ ಯಾದವ್ ಅರ್ಪಿಸಿದ್ದರು.


ಭಾರತದ ವಿರುದ್ಧ ಪಂದ್ಯ ಸೋತರೆ ಉರಿದು ಬೀಳುವ ಪಾಕಿಸ್ತಾನದ ಕ್ರಿಕೆಟ್ ಅಭಿಮಾನಿಗಳಿಗೆ, ಮೂರು ಮೂರು ಪಂದ್ಯ ಸೋತರೆ ಹೇಗಿರಬೇಡ? ಫೈನಲ್ ಪಂದ್ಯದಲ್ಲಿ ಭಾರತದ ವಿರುದ್ಧ ಸೋತ ನಂತರ, ಪಾಕಿಸ್ತಾನಿಗಳ ಆಕ್ರೋಶದ ಕಟ್ಟೆ ಒಡೆದು ಹೋಗಿದೆ. ಅದರಲ್ಲಿ ಒಂದು ವೈರಲ್ ವಿಡಿಯೋದಲ್ಲಿ, ಪಾಕಿಸ್ತಾನದ ಕ್ರಿಕೆಟ್ ಅಭಿಮಾನಿಯೊಬ್ಬ, ನಾವು ಭಾರತೀಯರ ಚಪ್ಪಲಿಗೂ ಸಮನಲ್ಲ, ನಿಜವಾದ ಆಟ ನಿಮ್ಮದು, ಐ ಲವ್ ಯು ಇಂಡಿಯಾ ಎಂದು ಹೊಗಳಿದ್ದಾನೆ.

## ಎಂಎಲ್ಸಿ ಭೇಟಿ, ಬೆಳೆ ಪರಿಶೀಲನೆ

**ಹುಮನಾಬಾದ್:** ಕಳೆದ ಕೆಲ ದಿನಗಳಿಂದ ಸುರಿಯುತ್ತಿರುವ ಧಾರಕಾರ ಮಳೆಗೆ ಜನ ಜೀವನ ಅಸ್ತವ್ಯಸ್ತಗೊಂಡ ಹಿನ್ನಲೆ ತಾಲೂಕಿನ ನಾನಾ ಗ್ರಾಮಗಳಿಗೆ ಭಾನುವಾರ ವಿಧಾನ ಪರಿಷತ್ ಸದಸ್ಯರಾದ ಡಾ. ಚಂದ್ರಶೇಖರ ಪಾಟೀಲ್ ಹಾಗೂ ಭೀಮರಾವ ಪಾಟೀಲ್ ಭೇಟಿ ನೀಡಿ ಬೆಳೆ ಹಾನಿ ಕುರಿತು ಪರಿಶೀಲನೆ ನಡೆಸಿದರು.

ತಾಲೂಕು ವಮಟ್ಟದ ಅಧಿಕಾರಗಳ ತಂಡದೊಂದಿಗೆ ಧುಮ್ಮನಸೂರ, ಕನಕಟ್ಟಾ, ಘಾಟಬೋರಳ, ಸೇವಾ ನಗರ ತಾಂಡಾ, ಮಾಣಿಕ ನಗರ, ಹುಡಗಿ ರೈತರ ಹೊಲಗಳು ಸೇರಿದಂತೆ ಗ್ರಾಮಗಳ ಬೀದಿ, ಬೀದಿಗಳಲ್ಲಿ ಸುತ್ತಾಡಿ ಹಾನಿಗೀಡಾದ ಬೆಳೆ, ಮನೆಗಳು ವೀಕ್ಷಿಸಿದ, ಬಳಿಕ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿ, ಸಮಸ್ಯೆಗಳನ್ನು ಬಗೆಹರಿಸುವುದಾಗಿ ಭರವಸೆ ನೀಡಿದರು. ವಿಧಾನ ಪರಿಷತ್ ಸದಸ್ಯರಾದ ಶ್ರೀ ಡಾ. ಚಂದ್ರಶೇಖರ ಪಾಟೀಲ್ ಮಾತನಾಡಿ, ನಿರಂತರ ಸುರಿದ ಮಳೆಯ ನೀರು ಸಾರ್ವಜನಿಕರ ಮನೆಗಳಿಗೆ ನುಗ್ಗಿ ಪಟ್ಟಣ ಸೇರಿದಂತೆ ಗ್ರಾಮೀಣ ಭಾಗದ ಜನರ ಜೀವನ ಅಸ್ತವ್ಯಸ್ತವಾಗಿದೆ. ಹೀಗಾಗಿ ಸಂಬಂಧಿಸಿದ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಂಡು ಅಗತ್ಯ ಸೌಲಭ್ಯ ಕಲ್ಪಿಸಿಕೊಡಬೇಕು. ಹುಡಗಿ ಗ್ರಾಮದಿಂದ ನಂದಗಾಂವ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಸೇತುವೆ ಮೇಲೆ ಬಿರುಕುಗಳು ಬಿಟ್ಟಿದ್ದು ಸುಗಮ ಸಂಚಾರಕ್ಕೆ ತೊಂದರೆ ಆಗುತ್ತಿದೆ. ಆದ್ದರಿಂದ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಕ್ರಮ ಕೈಗೊಂಡು ಸೇತುವೆ ದುರಸ್ತಿ ಮಾಡಬೇಕು ಎಂದು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ಶ್ರೀ ಭೀಮರಾವಾ ಪಾಟೀಲ್, ತಹಸೀಲ್ದಾರ್ ಶ್ರೀಮತಿ ಅಂಜುಮ್ ತಬಸುಮ್ ಇನ್ನಿತರರಿದ್ದರು.




## ಕುಟುಂಬ ಮುಗಿಸಲು ಪಿತೂರಿ


**ಬೆಂಗಳೂರು:** ನನ್ನ ಕುಟುಂಬವನ್ನು ಮುಗಿಸಲು ಡಿಕೆ.ಶಿವಕುಮಾರ್ ಪಿತೂರಿ ನಡೆಸಿದ್ದು, ರೈತರು ಮತ್ತು ದೇವರು ನಮ್ಮೊಂದಿಗಿದ್ದು ಜೆಡಿಎಸ್ ಮುಗಿಸಲು ಸಾಧ್ಯವಿಲ್ಲ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ವಾಗ್ದಾಳಿ ನಡೆಸಿದ್ದಾರೆ.

ಬಿಡದಿ ಟೌನ್ಶಿಪ್ ವಿರೋಧಿಸಿ ಆಯೋಜಿಸಲಾದ ರೈತರ ರ‍್ಯಾಲಿಯನ್ನು ಉದ್ದೇಶಿಸಿ ಮಾತನಾಡಿ, ಬಿಡದಿ ಟೌನ್ ಶಿಪ್ ದೇವೇಗೌಡರ ಪುತ್ರನ ಕೂಸು ಎಂದು ಸುಳ್ಳು ಪ್ರಚಾರ ನಡೆಸುತ್ತಿರುವ ಡಿಸಿಎಂ ಡಿ.ಕೆ. ಶಿವಕುಮಾರ್ ವಿರುದ್ಧ ತೀವ್ರವಾಗಿ ಕಿಡಿಕಾರಿದರು. ಇದೇ ವೇಳೆ ಟೌನ್ಶಿಪ್ಗಾಗಿ ರೈತರ ಒಂದು ಇಂಚು ಭೂಮಿಯನ್ನು ಕೂಡ ಸ್ವಾಧೀನಪಡಿಸಿಕೊಳ್ಳಲು ಬಿಡುವುದಿಲ್ಲ ಎಂದು ಶಪಥಮಾಡಿದ್ದಾರೆ.

ಬಡವರು, ರೈತರ ಭೂಮಿಯನ್ನು ಲೂಟಿ ಹೊಡೆಯುತ್ತಿರುವ ವ್ಯಕ್ತಿ ನನ್ನ ಬಗ್ಗೆ ಲಘುವಾಗಿ ಮಾತನಾಡುತ್ತಿರುವುದು ನನ್ನ ಗಮನಕ್ಕೆ ಬಂದಿದೆ. ನಾನು ಒಬ್ಬ ರೈತನಾಗಿ ಬಿಡದಿಯಲ್ಲಿ ಜೀವನ ಕಟ್ಟಿಕೊಂಡಿದ್ದೇನೆ. ಆತನಂತೆ ಕೊಳ್ಳೆ ಹೊಡೆದ ಬಡವರ ಭೂಮಿಯಲ್ಲಿ ಶಾಲೆ, ಕಾಲೇಜು, ಮುಗಿಲೆತ್ತರದ ಕಟ್ಟಡಗಳನ್ನು ಸೇರಿ ಕೋಟೆ ಕೊತ್ತಲಗಳನ್ನು ಕಟ್ಟಿಕೊಂಡಿಲ್ಲ. ಎಲ್ಲವೂ ಹೊರಬರುತ್ತೆ, ನಿಮ್ಮ ಕಷ್ಟದ ದಿನಗಳು ಆರಂಭವಾಗಿವೆ ಎಂದು ಕಿಡಿಕಾರಿದ್ದಾರೆ. 20 ವರ್ಷದ ಮೇಲೆ ಆಯಿತು. ರಸ್ತೆ ನಿರ್ಮಾಣ ಮಾಡಿದರಾ? ಆ ಭೂಮಿಯನ್ನು ನುಂಗಲು ಹೊರಟಿದ್ದಾರೆ. ಆದರೆ, ಕೇವಲ ಎರಡು ಮೂರು ವರ್ಷದಲ್ಲಿ ಬೆಂಗಳೂರು-ಮೈಸೂರು ನೂತನ ಹೆದ್ದಾರಿ ನಿರ್ಮಾಣ ವಾಯಿತು ಎಂದಿದ್ದಾರೆ.



## ಅಧಿಕಾರಿಗಳ ತುರ್ತು ಸಭೆ



**ಇಂಡಿ:** ಮಳೆ ಹಾಗೂ ಭೀಮಾನದಿ ಪ್ರವಾಹದಿಂದ ಹಾನಿ ಹಾಗೂ ಸಮಸ್ಯೆಗಳ ಕುರಿತು ತಾಲೂಕಾ ಮಟ್ಟದ ಅಧಿಕಾರಿಗಳ ತುರ್ತು ಸಭೆ ಶಾಸಕ ಯಶವಂತರಾಯಗೌಡ ವ್ಹಿ ಪಾಟೀಲ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ನಿರಂತರ ಮಳೆ ಹಾಗೂ ಪ್ರವಾಹದಿಂದ ಜನ.ಜಾನುವಾರಗಳಿಗೆ ತೊಂದರೆಯಾಗಿದ್ದರೆ ಮತ್ತು ಆಸ್ತಿ, ಪ್ರಾಣ ಹಾನಿಯಾದ ಬಗ್ಗೆ ಸಂಪೂರ್ಣ ವಾಸ್ತವಿಕ ಸತ್ಯಾಂಶ ಒದಗಿಸಬೇಕು ಎಂದು ತಾಲೂಕಾ ಅಧಿಕಾರಿಗಳಿಂದ ಶಾಸಕರು ಮಾಹಿತಿ ಕೇಳಿದ ಅವರು ಕೆಲ ಗ್ರಾಮಗಳಲ್ಲಿ ವಿನಾಕಾರಣ ಸುಳ್ಳು ಸೃಷ್ಠಿ ಮಾಡುವ ಜನರಿದ್ದಾರೆ ಅಧಿಕಾರಿಗಳು ತಲೆಕೆಡಿಸಿಕೊಳ್ಳಬೇಡಿ. ಹಳ್ಳಿಗಳ ಜೀವನ ಭೀಮಾನದಿ ಪಾತ್ರದ ಜನ ಜೀವನ ನನಗೆ ಗೊತ್ತು ನಾನು ಕೂಡಾ ಅದೇ ಭಾಗದಲ್ಲಿ ಜನಿಸಿರುವೆ. ಇದು ಇಂದು ನಿನ್ನೇಯದೇನಿಲ್ಲ ಕೆಲ ಹಳ್ಳಿಗಳು ಭೀಮಾನದಿಯಿಂದ ತೊಂದರೆ ತಪ್ಪಿಸಲು ಅನೇಕ ನದಿ ಪಾತ್ರದ ಗ್ರಾಮಗಳು ಬೇರೆ ಕಡೆ ಸ್ಥಳಾಂತರಿಸಿ ನಿವೇಶನ ನೀಡಲಗಿದೆ ಆದರೆ ರೈತರ ಜಮೀನುಗಳು ನದಿ ದಡದಲ್ಲಿ ಇರುವದರಿಂದ್ದ ಮತ್ತೆ ಅಲ್ಲಿಯೇ ವಾಸವಾಗಿದ್ದಾರೆ ಆದಷ್ಟು ಬಡವರಿಗೆ, ನಿರ್ಗತಿಕರಿಗೆ ,ದುಡಿಯುವ ವರ್ಗಕ್ಕೆ ತೊಂದರೆಯಾಗಿದ್ದರೆ ಸಹಾಯ ಮಾಡಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಸಂಧರ್ಬದಲ್ಲಿ ಭೀಮಾನದಿಯ ಪ್ರವಾಹ ಇಳಿಮುಖವಾಗಿದ್ದು ಭೀಮಾನದಿ ಪಾತ್ರದ ಯಾವುದೇ ಗ್ರಾಮಗಳು ಹೇಳಿಕೊಳ್ಳುವಷ್ಟು ತೊಂದರೆಯಲ್ಲಿ ಇಲ್ಲ, ಮಳೆಯಿಂದ ಕೆಲ ಗ್ರಾಮಗಳಲ್ಲಿ ಮನೆಗಳು ಬಿದ್ದಿರುವುದು ಸರ್ವೆ ಮಾಡಲಾಗಿದ್ದು ಮಳೆಯಿಂದ ಮನೆಗಳು ಸೋರುತ್ತಿರುವ ಕುಟುಂಬಗಳನ್ನು ಗುರುತಿಸಿ ಕಾಳಜಿ ಕೇಂದ್ರಗಳಲ್ಲಿ ವಾಸ್ತವ್ಯ ಮಾಡಲಾಗಿದೆ ಎಂದು ತಹಶೀಲ್ದಾರ ಬಿ.ಎಸ್ ಕಡಕಭಾವಿ ಸಭೆಯಲ್ಲಿ ಮಾಹಿತಿ ನೀಡಿದ್ದಾರೆ.

● ಮೇರಿ ಕೋಮ್: ಆರು ವಿಶ್ವ ಚಾಂಪಿಯನ್ಶಿಪ್ಗಳಲ್ಲಿ ಪದಕ ಗೆದ್ದ ಏಕೈಕ ಮಹಿಳಾ ಬಾಕ್ಸರ್. 2014ರ ಏಷ್ಯನ್ ಕ್ರೀಡಾಕೂಟದಲ್ಲಿ ಚಿನ್ನದ ಪದಕ ಗೆದ್ದ ಮೊದಲ ಭಾರತೀಯ ಮಹಿಳಾ ಬಾಕ್ಸರ್

# ಪ್ರಧಾನಿ ಜನ್ಮದಿನ: ಇಂದು ಠಾಣಾ ಕುಶನೂರ್‌ನಲ್ಲಿ ರಕ್ತದಾನ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ಔರಾಧ:ಸೆ.29:ದೇಶದ ಹೆಮ್ಮೆಯ ಪ್ರಧಾನಿಗಳಾದನರೇಂದ್ರಮೋದಿಯವರ ಜನ್ಮದಿನದ ನಿಮಿತ್ತ ಸೇವಾ ಪಾಕ್ಷಿಕ ಅಭಿಯಾನದಅಡಿಯಲ್ಲಿಭಾರತೀಯ ಜನತಾ ಪಕ್ಷಔರಾದ(ಬಿ)ಮಂಡಲದ ವತಿಯಿಂದ ಸೆ.30ರ ಬೆಳಗ್ಗೆ 10 ಗಂಟೆಗೆ ಕಮಲನಗರ ತಾಲ್ಲೂಕಿನ ಠಾಣಾ ಕುಶನೂರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ರಕ್ತದಾನ ಶಿಬಿರ ಏರ್ಪಡಿಸಲಾಗಿದೆ.

ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ರಕ್ತದಾನ ಶಿಬಿರಕ್ಕೆ ಚಾಲನೆ ನೀಡುವರು. ರಕ್ತದ ಕೊರತೆಯಿಂದಾಗಿ ದೇಶದಲ್ಲಿ ಪ್ರತಿದಿನ ಸಾಕಷ್ಟು ಸಾವು-ನೋವುಗಳು ಸಂಭವಿಸುತ್ತವೆ. ರಕ್ತದಾನವು ಇಂಥವುಗಳನ್ನು ತಡೆದು ಸಾವಿನ ದವಡೆಯಲ್ಲಿರುವ ರೋಗಿಗಳನ್ನು ಉಳಿಸಲು ನೆರವಾಗುತ್ತದೆ. ಪ್ರಧಾನಿ ನರೇಂದ್ರಮೋದಿಜಿಯವರಜನ್ಮದಿನದ ನಿಮಿತ್ತಹಮ್ಮಿಕೊಳ್ಳಲಾಗಿರುವರಕ್ತದಾನ ಶಿಬಿರದಲ್ಲಿ ಪಕ್ಷದ ಮುಖಂಡರು, ಕಾರ್ಯಕರ್ತರು,ಸಾರ್ವಜನಿಕರು ಹಾಗೂಪ್ರಧಾನಿಯವರಅಭಿಮಾನಿಗಳು ಸ್ವಯಂ ಪ್ರೇರಿತವಾಗಿ ಆಗಮಿಸಿ ರಕ್ತದಾನದಲ್ಲಿಭಾಗವಹಿಸಬೇಕೆಂದು ಶಾಸಕರಾದ ಪ್ರಭು.ಬಿ ಚವ್ಹಾಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಂಭಾಪುರಿ ಶ್ರೀಗಳ ಹೇಳಿಕೆಗೆ ಭಾಲ್ಕಿ ಶ್ರೀಗಳ ಖಂಡನೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಸೆ.29:ಬಸವಕಲ್ಯಾಣದಲ್ಲಿ ನಡೆಯುತ್ತಿರುವ ರಂಭಾಪುರಿ ಶ್ರೀಗಳ ದಸರಾ ದರ್ಬಾರ ಕಾರ್ಯಕ್ರಮದಲ್ಲಿ ಶ್ರೀಗಳು ತ್ರಿಪುರಾಂತಕ ಕೆರೆಯ ಹೆಸರನ್ನು ಬದಲಾಯಿಸಬೇಕು ಎಂಬ ಹೇಳಿಕೆಗೆ ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ವಿರೋಧ ವ್ಯಕ್ತಪಡಿಸಿದ್ದಾರೆ.

ತ್ರಿಪುರಾಂತಕ ಕೆರೆ 12ನೇ ಶತಮಾನದ ಬಸವಾದಿ ಶರಣರ ಚರಿತ್ರೆಯಲ್ಲಿ ವಚನಗಳಲ್ಲಿ ಅತ್ಯಂತ ಮಹತ್ವ ಪಡೆದಿದೆ. ಕೆಲವು ಶರಣರ ವಚನಗಳ ಹಾಗೂ ವಚನಾಂಕಿತಗಳಲ್ಲಿ ತ್ರಿಪುರಾಂತಕ ಕೆರೆಯ ಹೆಸರನ್ನು ಉಲ್ಲೇಖಿಸಲಾಗಿದೆ. ಶರಣರ ಚರಿತ್ರೆಗೆ ತ್ರಿಪುರಾಂತಕ ಕೆರೆಗೆ ಅವಿನಾಭಾವ ಸಂಬಂಧವಿದೆ. ಹೀಗಿರುವಾಗ ರಂಭಾಪುರಿ ಶ್ರೀಗಳು ತ್ರಿಪುರಾಂತಕ ಕೆರೆಯ ಹೆಸರು ಬದಲಾಯಿಸುವ ಸಲಹೆ ನೀಡುವ ಮೂಲಕ ಶರಣರ ನಿಜಚರಿತ್ರೆಯನ್ನು ತಿರುಚುವ ಹುನ್ನಾರ ನಡೆಸುತ್ತಿರುವುದು ವಿಷಾದನೀಯ ಸಂಗತಿಯಾಗಿದೆ. ಶರಣರ ಇತಿಹಾಸ ತಿರುಚುವ ಕಾರ್ಯಗಳನ್ನು ಯಾರೂ ಮಾಡಬಾರದು. ಶರಣರ ಸತ್ಯ ಚರಿತ್ರಗೆ ಯಾರಾದರೂ ಕೈ ಹಾಕಿದರೆ ಅದರ ಪ್ರತಿಫಲವನ್ನು ಅವರೇ ಅನುಭವಿಸುತ್ತಾರೆ ಎಂಬುದು ಮರೆಯಬಾರದು.

**ಲಿಂಗಾಯತ ಧರ್ಮ, ವೀರಶೈವ ಪಂಗಡ**

ರಂಭಾಪುರಿ ಶ್ರೀಗಳು ವೀರಶೈವ ಲಿಂಗಾಯತ ಎರಡು ಒಂದೇ ಎಂದು ಹೇಳುತ್ತಾ ಪ್ರತ್ಯೇಕ ಧರ್ಮದ ಪ್ರತಿಪಾದನೆ ಮಾಡುತ್ತಿರುವವರನ್ನು ಅರೇಜ್ಞಾನ ಇದೆ ಎಂದು ನುಡಿದಿರುವುದು ಖಂಡನೀಯವಾದದ್ದು. ಬಸವಾದಿ ಶರಣರ ವಚನಗಳನ್ನು ಆಳವಾಗಿ ಅಧ್ಯಯನ ಮಾಡಿರುವ ಅನೇಕ ಸಾಹಿತಿಗಳು, ಸಂಶೋಧಕರು, ಮಠಾಧೀಶರು ಹಾಗೂ ಸರ್ಕಾರದ ದಾಖಲೆಗಳನ್ನು ಲಿಂಗಾಯತ ಪ್ರತ್ಯೇಕ ಧರ್ಮವೆಂದು ಸಾಕ್ಷಿ ನೀಡುತ್ತವೆ. ಎರಡೂ ಒಂದೇ ಎನ್ನುವ ಶ್ರೀಗಳು ಪ್ರತ್ಯೇಕ ಧರ್ಮದ ಹೋರಾಟವನ್ನು ಬೆಂಬಲಿಸಬೇಕೇ ವಿನಃ ಅದನ್ನು ವಿರೋಧಿಸಬಾರದು. ವೀರಶೈವ ಲಿಂಗಾಯತ ಧರ್ಮದ ಒಂದು ಉಪಪಂಗಡ. ಹಾಗಾಗಿ ಲಿಂಗಾಯತರಲ್ಲಿ ವೀರಶೈವ ಇದೆ. ಆದರೆ ವೀರಶೈವವೇ ಪ್ರಧಾನವಲ್ಲವೆಂಬುದು ಪೂಜ್ಯರು ಗಮನಿಸಬೇಕು. ಈ ಮುಂಚೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ ಕೇಂದ್ರ ಸರಕಾರ-ಕ್ಕೆ ಸಲ್ಲಿಸಿದ ಪ್ರತ್ಯೇಕ ಧರ್ಮದ ಬೇಡಿಕೆಯನ್ನು ಯಾಕೆ ತಿರಸ್ಕೃತ ಮಾಡಿದೆ ಎಂಬುದು ಶ್ರೀಗಳು ತಿಳಿದುಕೊಳ್ಳಬೇಕು. ಲಿಂಗಾಯತ ಸಮಾಜದ ಅಖಂಡತೆಗಾಗಿ ಮತ್ತು ಈ ಸಮುದಾಯದ ಮಕ್ಕಳ ಭವಿಷ್ಯಕ್ಕಾಗಿ ಲಿಂಗಾಯತ ಧರ್ಮ ಅಲ್ಪಸಂಖ್ಯಾತ ಮಾನ್ಯತೆಯ ಹೋರಾಟವನ್ನು ಬೆಂಬಲಿಸಬೇಕೆಂದು ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

# ಮಳೆ ಹಾನಿ ಬೆಳೆಗಳಿಗೆ 15 ದಿನದೊಳಗಾಗಿ ಪರಿಹಾರ ಒದಗಿಸಲು ಕ್ರಮ: ಸಚಿವ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ ಬೀದರ, ಸೆ.29: ಜಿಲ್ಲೆಯಾದ್ಯಂತ ಸತತವಾಗಿ ಸುರಿಯುತ್ತಿರುವ ಮಳೆಯಿಂದ ಹಾನಿಯಾದ ಬೆಳೆಗಳ ಜಂಟಿ ಸಮೀಕ್ಷೆಯನ್ನು ಶೀಘ್ರವೇ ಪೂರ್ಣಗೊಳಿಸಿ, ಪರಿಹಾರವನ್ನು 15 ದಿನದೊಳಗಾಗಿ ಒದಗಿಸಲು ಅಗತ್ಯ ಕ್ರಮಕೈಗೊಳ್ಳುವುದಾಗಿ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ಬಿಡುಗಡೆ ಮಾಡಿರುವ ಅವರು, ಜಿಲ್ಲೆಯ ವಿವಿಧ ಪ್ರದೇಶಗಳಲ್ಲಿ ಭಾರಿ ಮಳೆಯಿಂದ, ಮಾನವ ಜೀವ ಹಾನಿ, ಪ್ರಾಣಿ ಜೀವ ಹಾನಿ, ಮನೆ ಹಾನಿ, ಬೆಳೆ ಹಾನಿ, ಮೂಲಭೂತ ಸೌಕರ್ಯಗಳಾದ ರಸ್ತೆ, ಬ್ರಿಡ್ಜ್, ಶಾಲಾ ಹಾಗೂ ಅಂಗನವಾಡಿ ಕೊಠಡಿಗಳು, ವಿದ್ಯುತ್ ಸಂಪರ್ಕ, ಕೆರೆ, ಆರೋಗ್ಯ ಕೇಂದ್ರಗಳು ಹಾನಿಗೊಳಗಾಗಿರುತ್ತವೆ. ಈ ಬಗ್ಗೆ ಪರಿಹಾರ ಕ್ರಮಗಳ ಕುರಿತು ಜಿಲ್ಲಾಡಳಿತದೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ತುರ್ತು ಕ್ರಮಗಳನ್ನು ಕೈಗೊಳ್ಳುವ ಮೂಲಕ ಅತಿವಷ್ಟಿಯಿಂದ ಆಗಬಹುದಾದ ಅನಾಹುತಗಳನ್ನು ಕಡಿಮೆಗೊಳಿಸಲು ಸೂಚಿಸಿದ್ದೇನೆಂದು ಸಚಿವರು ಸೂಚಿಸಿದ್ದಾರೆ. ಅತಿವೃಷ್ಠಿ ನಿರ್ವಹಣೆ ಮಾಡುವ ದೃಷ್ಟಿಯಿಂದ ಎಲ್ಲಾ ಅಧಿಕಾರಿಗಳು ಕೇಂದ್ರಸ್ಥಾನದಲ್ಲಿದ್ದು, ಕಾರ್ಯನಿರ್ವಹಿಸಲು ಹಾಗೂ ಅನಿವಾರ್ಯ ಸಂದರ್ಭಗಳನ್ನು ಹೊರತುಪಡಿಸಿ ರಜೆಯನ್ನು ಮಂಜೂರು ಮಾಡದಿರಲು ಸೂಚಿಸಲಾಗಿದೆ. ಪ್ರವಾಹ ಪರಿಸ್ಥಿತಿಯನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಎನ್‌ಡಿಆರ್‌ಎಫ್ ಮತ್ತು ಎಸ್‌ಡಿಆರ್‌ಎಫ್ ಗಳನ್ನು ಕಾರ್ಯಸನ್ನದಗೊಳಿಸಿ ವಿಳಂಭಕ್ಕೆ ಅವಕಾಶವಿಲ್ಲದಂತೆ ಪರಿಹಾರ ಕ್ರಮಕೈಗೊಳ್ಳಲಾಗವುದು. ಅತಿವೃಷ್ಠಿಯಾದ ಪ್ರದೇಶಗಳಗೆ ಸಂಬಂಧಿಸಿದ ಉಪ ವಿಭಾಗಾಧಿಕಾರಿಗಳು ಕಡ್ಡಾಯವಾಗಿ ಭೇಟಿ ನೀಡತಕ್ಕದ್ದು, ಹೆಚ್ಚು ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಸಂಬಂಧಿಸಿದ ಇಲಾಖೆಗಳನ್ನೊಳಗೊಂಡ ತಂಡವು ಪರಿಸ್ಥಿತಿ ನಿಯಂತ್ರಿಸಲು ಖುದ್ದು ಮೊಕ್ಕಾಂ ಹೂಡಲು ಕ್ರಮವಹಿಸಲು ಸೂಚನೆ ನೀಡಲಾಗಿದೆ. ಹಾನಿಗೊಳಗಾದ ಎಲ್ಲಾ ಬೆಳೆಗಳ ಪ್ರದೇಶಗಳಿಗೆ ಭೇಟಿ ನೀಡಿ ಜಂಟಿ ಸಮೀಕ್ಷೆ ಶೀಘ್ರವಾಗಿ ಮುಗಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಅವರು ತಿಳಿಸಿದ್ದಾರೆ. ಪ್ರವಾಹ ಸಂತ್ರಸ್ತರ ಸಮಸ್ಯೆಗಳನ್ನು ಆಲಿಸಲು ಸರ್ಕಾರ ಬದ್ಧವಾಗಿದ್ದು, ರೈತರೊಂದಿಗೆ ತಾವು ಮತ್ತು ಸರ್ಕಾರ ಸದಾ ಬೆಂಬಲಕ್ಕೆ ಇರುತ್ತದೆ. ಯಾರೂ ಆತಂಕಕ್ಕೆ ಒಳಗಾಗಬಾರದೆಂದು ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಮಳೆಯಿಂದಾದ ಹಾನಿ ಹಾಗೂ ಪ್ರವಾಹ ನಿರ್ವಹಣೆ ಕುರಿತು ಚರ್ಚಿಸಿ ಪರಾಮರ್ಶನೆ ನಡೆಸಲು ಜಿಲ್ಲಾಡಳಿತ ಹಾಗೂ ಜಿಲ್ಲೆಯ ಅಧಿಕಾರಿಗಳೊಂದಿಗೆ ದಿನಾಂಕ: 30-09-2025 ರಂದು ಸಭೆಯನ್ನು ಆಯೋಜಿಸಲಾಗಿದೆ ಎಂದು ಸಹ ಅವರು ತಿಳಿಸಿದ್ದಾರೆ.

## ಬದಗಲ್ : ನಾಯಿ ಹಾವಳಿ ತಡೆಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ.ಬೀದರ, ಸೆ.29: ಇತ್ತೀಚಿಗೆ ಬೀದರ ತಾಲ್ಲೂಕಿನ ಬದಗಲ್ ಗ್ರಾಮದಲ್ಲಿ 7 ವರ್ಷದ ಬಾಲಕಿ ಮೇಲೆ ಬೀದಿನಾಯಿ ದಾಳಿ ಮಾಡಿ ಗಂಭೀರ ಗಾಯ ಉಂಟು ಮಾಡಿರುವುದು ವರದಿಯಾಗಿದೆ. ಈ ಬಾಲಕಿಗೆ ಜಿಲ್ಲಾಡಳಿತದಿಂದ ಸೂಕ್ತ ಚಿಕಿತ್ಸೆಯನ್ನು ಖಚಿತಪಡಿಸುವುದರೊಂದಿಗೆ ಇಂತಹ ಪ್ರಕರಣಗಳು ಮರುಕಳಿಸದಂತೆ ಅಗತ್ಯ ನಿಯಂತ್ರಣ ಕ್ರಮ ಜಾರಿಗೊಳಿಸಲು ಜಿಲ್ಲೆಯ ಎಲ್ಲಾ ಸ್ಥಳೀಯ ಸಂಸ್ಥೆಗಳಿಗೆ ಅಗತ್ಯ ಮಾರ್ಗಸೂಚಿಗಳನ್ನು ಹೊರಡಿಸುವಂತೆ ಜಿಲ್ಲಾಧಿಕಾರಿಗಳಿಗೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಹಾರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಸೂಚನೆ ನೀಡಿದ್ದಾರೆ.

ಬೀದಿನಾಯಿಗಳಿಂದ ಸಾರ್ವಜನಿಕರ ಮೇಲೆ ದಾಳಿಯಾಗುತ್ತಿರುವ ಪ್ರಕರಣಗಲು ಪದೇ ಪದೇ ವರದಿಯಾಗುತ್ತಿದ್ದು, ಇತ್ತೀಚಿಗೆ ನ್ಯಾಯಾಲಯಗಳು ಕೂಡ ತೀವ್ರ ಕ್ರಮವಹಿಸಲು ನಿರ್ದೇಶನ ನೀಡಿರುವುದನ್ನು ಗಮನಿಸಲಾಗಿದೆ

# ಸಮಸ್ಯೆಗೆ ಸ್ಪಂದಿಸದ ಪಿಡಿಓ: ತಾ.ಪಂ.ಅಧಿಕಾರಿಗೆ ದೂರು



ಔರಾದ:ಸೆ.29:ಬಾದಲಗಾಂವ ಗ್ರಾಮ ಪಂಚಾಯತ ವ್ಯಾಪ್ತಿಯ ನಾರಾಯಣಪುರ ಗ್ರಾಮದ ನಾಲಿ,ಚರಂಡಿಗಳು ಸಿ.ಸಿ ರಸ್ತೆಗಳು ಒಡೆದು ಸಂಪೂರ್ಣವಾಗಿ ಹದಗೆಟ್ಟಿ ಅಸ್ತವ್ಯಸ್ತವಾಗಿವೆ.

ಈ ಸಮಸ್ಯೆಗಳಿಂದ ಗ್ರಾಮಸ್ಥರು ತೀವ್ರ ಸಂಕಷ್ಟವನ್ನು ಎದುರಿಸುತ್ತಿದ್ದಾರೆ ರಸ್ತೆ, ಚರಂಡಿ ವ್ಯವಸ್ಥೆಗಳು ಸರಿಯಾಗಿ ಇಲ್ಲದೆ ಇದ್ದ ಕಾರಣದಿಂದ ಕಾಲ್ನಡಿಗೆಯಿಂದ ಓಡಾಡುವವರು ಮತ್ತು ದ್ವಿಚಕ್ರ ವಾಹನ ಪ್ರಯಾಣಿಕರು ಹಲವು ಸಾರ್ವಜನಿಕರು ಬಿದ್ದು ಗಾಯಗೊಂಡಿದ್ದಾರೆ. ಬಿದ್ದು ಗಾಯಗೊಂಡವರ ಪೈಕಿ "ಸ್ವರ್ಗೀಯ ದೇವಿದಾಸ ಗುಂಡಪ್ಪ ಸಿರಂಜೆ, ಮನ್ಮಥ ಕಸ್ತೂರೆ, ಮಹಾದೇವ ಉಮಾಕಾಂತ ಗೋದಮಗಾವೆ, ರೇವಣ್ಣೆಪ್ಪ ಅಂಬರೀಶ್ ಬಿರಾದಾರ, ಅಂಬರೀಶ್ ನಾಗಶೆಟ್ಟಿ ಬಿರಾದಾರ, ವೀರಶೆಟ್ಟಿ ಗುಣವಂತ ಹುಗ್ಗೆ, ದೇವಿದಾಸ ವೈಜಿನಾಥ ಬಿರಾದಾರ, ತನೀಶ್ ಗಣಪತಿ ಕಾಡ್ಲಾಬಾದ, ತೇಜಮ್ಮ ಮೇತ್ರೆ ಸೇರಿದಂತೆ ಹಲವು ಜನ ಗ್ರಾಮಸ್ಥರು ಬಿದ್ದಿದ್ದಾರೆ.

ಈ ಕುರಿತು ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳ ಗಮನಕ್ಕೆ ತಂದರು ಕೂಡ ಇದುವರೆಗೆ ಯಾವುದೇ ಪ್ರಯೋಜನವಾಗಿಲ್ಲ ಮನವಿ ಸ್ಪಂದಿಸಿಲ್ಲ.ಇದೇ ವೇಳೆ ಗ್ರಾಮದ ಯುವ ಮುಖಂಡ ರಾಹುಲ ಜಾಧವ ರವರು ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳ ಜೊತೆ ಮಾತನಾಡಿ ಕೆಲವೇ ದಿನಗಳಲ್ಲಿ ಅದಷ್ಟು ಬೇಗನೆ ಈ ಸಮಸ್ಯೆಗಳು ಬಗಿಹರಿಸಬೇಕು 15 ದಿವಸಗಳ ವರೆಗೆ ಸಮಸ್ಯೆಗಳಿಗೆ ಪರಿಹಾರ ನೀಡುವಂತೆ ಗ್ರಾಮಸ್ಥರು ಮನವಿ ಮಾಡಿದ್ದಾರೆ.

ಗ್ರಾಮದ ಸಾಗರ ಗೋದಮಗಾವೇ, ವಿಶಾಲ ಶಿರಂಜೆ, ಮನೋಜ ಮಾನಕರೆ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಒಂದು ದಿನದ ರೈತರ ತರಬೇತಿ ಕಾರ್ಯಕ್ರಮ ಆಯೋಜನೆ

ಮಲ್ಲಮ್ಮ ನುಡಿ ವಾರ್ತೆ.ಬೀದರ. ಸೆ. 29 : ಪ್ರಸ್ತುತ ವಿಷಯಕ್ಕೆ ಸಂಬಂಧಿಸಿದಂತೆ, ಬೀದರನ ಪಶುವೈದ್ಯಕೀಯ ಮಹಾವಿದ್ಯಾಲಯದ ಜಾನುವಾರು ಉತ್ಪಾದನೆ ಮತ್ತು ನಿರ್ವಹಣೆ ವಿಭಾಗದ ವತಿಯಿಂದ ದಿನಾಂಕ 30-10-2025 ರಂದು ನಂದಿನಗರ ಆವರಣದಲ್ಲಿ "ಜಾನುವಾರು ಉತ್ಪಾದನೆ ಮತ್ತು ವೈಜ್ಞಾನಿಕವಾಗಿ ಆಡು ಸಾಕಾಣಿಕೆ" ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ದಿನಾಂಕ 20-10-2025 ಸಂಜೆ 5.00 ಗಂಟೆ ಒಳಗಾಗಿ ಕೆಲವ 30 ರೈತರಿಗೆ ಮಾತ್ರ ತರಬೇತಿಯಲ್ಲಿ ಅವಕಾಶ ಇವರುವುದರಿಂದ ಮೊದಲು ಕರೆ ಮಾಡಿ ನೊಂದಣೆ ಮಾಡಿದವರಿಗೆ ಆದ್ಯತೆ ನೀಡಲಾಗುವುದು.

ನೊಂದಣಿ ಮಾಡಿಕೊಳ್ಳಲು ಮೊಬೈಲ್ ಸಂಖ್ಯೆ 9986673594 ಅಥವಾ 6361911137.

ಮುಂದುವರೆದು, ತರಬೇತಿಗೆ ಹಾಜರಾಗುವ ರೈತರಿಗೆ ಯಾವುದೇ ರೀತಿಯ ಭತ್ಯೆಗೆ ನೀಡಲಾಗುವುದಿಲ್ಲ ಎಂದು ಮಾಹಿತಿಸಲಾಗಿದೆ.

## ರಾಜ್ಯದ ಕಂದಾಯ ಸಚಿವರ ಪ್ರವಾಸ

ಮಲ್ಲಮ್ಮನುಡಿವಾರ್ತೆ ಕಲಬುರಗಿ,ಸೆ.29- ರಾಜ್ಯದ ಕಂದಾಯ ಸಚಿವರಾದ ಕೃಷ್ಣ ಭೈರೇಗೌಡ ಅವರು ಮಾನ್ಯ ಮುಖ್ಯಮಂತ್ರಿಗಳೊಂದಿಗೆ ವಿಶೇಷ ವಿಮಾನದ ಮೂಲಕ ಸೆಪ್ಟೆಂಬರ್ 30 ರಂದು ಮಂಗಳವಾರ ಬೆಳಿಗ್ಗೆ 10.40 ಗಂಟೆಗೆ ಕಲಬುರಗಿಗೆ ಆಗಮಿಸುವರು. ನಂತರ ಬೆಳಿಗ್ಗೆ 10.40 ರಿಂದ ಮಧ್ಯಾಹ್ನ 12.30 ಗಂಟೆಯವರೆಗೆ ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಅಧಿಕಾರಿಗಳೊಂದಿಗೆ ನಡೆಸುವ ಚರ್ಚೆ /ಸಭೆಯಲ್ಲಿ ಭಾಗವಹಿಸುವರು. ಮಧ್ಯಾಹ್ನ 12.30 ಗಂಟೆಗೆ ಮಾನ್ಯ ಮುಖ್ಯಮಂತ್ರಿಗಳೊಂದಿಗೆ ಕಲಬುರಗಿ ಜಿಲ್ಲೆ ಸೇರಿದಂತೆ ಮಳೆಯಿಂದ ಹಾನಿಗೊಳಗಾದ ಪ್ರದೇಶಗಳ ವೈಮಾನಿಕ ಸಮೀಕ್ಷೆಯಲ್ಲಿ ಭಾಗ ವಹಿಸುವರು. ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಳೆಹಾನಿ ಪ್ರದೇಶಗಳಲ್ಲಿ ಕೈಗೊಂಡಿರುವ ಪರಿಹಾರ ಕಾರ್ಯಗಳ ಕುರಿತು ಪ್ರಗತಿ ಪರಿಶೀಲನಾ ಸಭೆ ಹಾಗೂ ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸುವರು. ಸಂಜೆ 4.25 ಗಂಟೆಗೆ ಮಾನ್ಯ ಮುಖ್ಯಮಂತ್ರಿಗಳೊಂದಿಗೆ ಕಲಬುರಗಿಯಿಂದ ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ

## ರಾಜ್ಯದ ಕೃಷಿ ಸಚಿವರ ಪ್ರವಾಸ

ಮಲ್ಲಮ್ಮನುಡಿವಾರ್ತೆ ಕಲಬುರಗಿ,ಸೆ.29- ರಾಜ್ಯದ ಕೃಷಿ ಸಚಿವರಾದ ಎನ್. ಚಲುವರಾಯಸ್ವಾಮಿ ಅವರು ಮಾನ್ಯ ಮುಖ್ಯಮಂತ್ರಿಗಳೊಂದಿಗೆ ವಿಶೇಷ ವಿಮಾನದ ಮೂಲಕ ಸೆಪ್ಟೆಂಬರ್ 30 ರಂದು ಮಂಗಳವಾರ ಬೆಳಿಗ್ಗೆ 10.40 ಗಂಟೆಗೆ ಕಲಬುರಗಿಗೆ ಆಗಮಿಸುವರು. ಅಂದು ಬೆಳಿಗ್ಗೆ 10.40 ಗಂ-ಟೆಗೆ ಮಾನ್ಯ ಮುಖ್ಯಮಂತ್ರಿಗಳು ಅಧಿಕಾರಿಗಳೊಂದಿಗೆ ನಡೆಸುವ ಚರ್ಚೆ /ಸಭೆಯಲ್ಲಿ ಭಾಗವಹಿಸುವರು. ಮಧ್ಯಾಹ್ನ 12.30 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಕಲಬುರಗಿ ಜಿಲ್ಲೆ ಸೇರಿದಂತೆ ಮಳೆಯಿಂದ ಹಾನಿಗೊಳಗಾದ ಪ್ರದೇಶಗಳ ವೈಮಾನಿಕ ಸಮೀಕ್ಷೆಯಲ್ಲಿ ಭಾಗವಹಿಸುವರು.

ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಳೆಹಾನಿ ಪ್ರದೇಶಗಳಲ್ಲಿ ಕೈಗೊಂಡಿರುವ ಪರಿಹಾರ ಕಾರ್ಯಗಳ ಕುರಿತು ಪ್ರಗತಿ ಪರಿಶೀಲನಾ ಸಭೆ ಹಾಗೂ ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸುವರು. ಸಂಜೆ 4.25 ಗಂಟೆಗೆ ಮಾನ್ಯ ಮುಖ್ಯಮಂತ್ರಿಗಳೊಂದಿಗೆ ಕಲಬುರಗಿಯಿಂದ ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

# ಜಲಾವೃತ ಸೇತುವೆ, ಬೆಳೆಹಾನಿ ವೀಕ್ಷಣೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಸೆ.29:ತಾಲೂಕಿನ ವಿವಿಧೆಡೆ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದ ಹಾನಗೀಡಾದ ಪ್ರದೇಶಗಳಿಗೆ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ ಭೇಟಿ ನೀಡಿ ಪರಿಶೀಲಿಸಿದರು. ಗಡಿಭಾಗದ ಲಂಜವಾಡ ಗ್ರಾಮ ಪಂಚಾಯತಿ ವ್ಯಾಪ್ತಿಯ ಕಾಕನಾಳ ಸೇರಿದಂತೆ ಮುಂತಾದ ಕಡೆಗಳಿಗೆ ಭೇಟಿ ನೀಡಿದ ಅವರು ಸೋಯಾ ಅವರೆ, ತೊಗರಿ ಸೇರಿ ಮತ್ತಿತರ ಬೆಳೆಹಾನಿ ವೀಕ್ಷಿಸಿ ರೈತರ ಸಂಕಷ್ಟ ಆಲಿಸಿದರು.

ನಂತರ ಜಲಾವೃತಗೊಂಡ ಲಖಣಗಾಂವ ಮತ್ತು ಇಂಚೂರ ಸೇತುವೆಗೆ ಭೇಟಿ ನೀಡಿ ಸೇತುವೆ ಮೇಲಿಂದ ನೀರು ಹರಿಯುತ್ತಿರುವುದನ್ನು ವೀಕ್ಷಿಸಿದರು.

**ಸಮೀಕ್ಷೆ ಪರಿಶೀಲನೆ :**

ಮಳೆಹಾನಿ ಮಾಹಿತಿ ಪಡೆಯುವುದರ ಜತೆಗೆ ಲಖಣಗಾಂವ ಗ್ರಾಮಕ್ಕೆ ಜಿಪಂ ಸಿಇಒ ಡಾ.ಗಿರೀಶ್ ಬದೋಲೆ ಭೇಟಿ ನೀಡಿ ಸಮೀಕ್ಷೆದಾರರು ಕೈಗೊಳ್ಳುತ್ತಿದ್ದ ಸಾಮಾಜಿಕ ಮತ್ತು ಶೈಕ್ಷಣಿಕ ಗಣತಿ ಸಮೀಕ್ಷೆ ಪರಿಶೀಲಿಸಿ, ಸಮೀಕ್ಷೆದಾರರಿಂದ ತಾಂತ್ರಿಕ ತೊಡಕು ಆಗುತ್ತಿರುವ ಬಗ್ಗೆ ಮಾಹಿತಿ ಪಡೆದು ಕೊಂಡರು.

ಈ ಸಂದರ್ಭದಲ್ಲಿ ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರಿ, ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ,

ಲೋಕೋಪಯೋಗಿ ಇಲಾಖೆಯ ಎಇಇ ಅಲ್ತಾಫ್, ಪಿಡಿಒ ಬಲಭೀಮ, ಭಾತಂಬ್ರಾ ಗ್ರಾಪಂ ಅಧ್ಯಕ್ಷರು, ಅಧಿಕಾರಿಗಳು, ಇಂಚೂರ ಹಾಗೂ ಲಂಜವಾಡ ಗ್ರಾಪಂ ಸಿಬ್ಬಂದಿ ಹಾಗೂ ಗ್ರಾಮಸ್ಥರು ಇದ್ದರು.

## ಅ. 5ರಂದು ಬೆಂಗಳೂರಿನಲ್ಲಿ ಬ.ಸಂ.ಅಭಿಯಾನ ಸಮಾರೋಪ



ಮಲ್ಲಮ್ಮ ನುಡಿ ವಾರ್ತೆ ಬೀದರ. ಸೆ. 29: ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಬಸವ ಸಂಸ್ಕೃತಿ ಅಭಿಯಾನ ಯಶಸ್ವಿಯಾಗಿ ಜರುಗಿದ್ದು, ಅ. 5ರಂದು ಬೆಂಗಳೂರಿನ ಅರಮನೆ ಮೈದಾನದ ಗೇಟ್ ಸಂ. 4ರ ಗಾಯತ್ರಿ ವಿಹಾರದಲ್ಲಿ ಸಮಾರೋಪ ಸಮಾರಂಭ ಜರುಗಲಿದೆ. ಸುಮಾರು 500ಕ್ಕೂ ಅಧಿಕ ಬಸವಪರ ಮಠಾಧೀಶರು, ಲಕ್ಷದ ತೊಂಭತ್ತಾರು ಸಾವಿರ ಬಸವ ಭಕ್ತರು ಪಾಲ್ಗೊಳ್ಳುವ ನಿರೀಕ್ಷೆಯಿದೆ ಎಂದು ಜಾಗತಿಕ ಲಿಂಗಾಯತ ಮಹಾಸಭೆಯ ರಾಜ್ಯ ಉಪಾಧ್ಯಕ್ಷ ಬಸವರಾಜ ಧನ್ನೂರ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸೋಮವಾರ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ವಿಶ್ವಗುರು ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿ, ಎಲ್ಲಾ ಶಾಲಾ ಕಾಲೇಜುಗಳಲ್ಲಿ, ಸರ್ಕಾರಿ ಕಚೇರಿಗಳಲ್ಲಿ ಬಸವೇಶ್ವರರ ಭಾವಚಿತ್ರ ಅಳವಡಿಸಬೇಕೆಂದು ಆದೇಶಿಸಿ ಒಂದು ವರ್ಷ ಪೂರೈಸಿದೆ. ಮುಂದಿನ ಪೀಳಿಗೆಗೆ ಬಸವಣ್ಣನವರ ಜೀವನ ಸಾಧನೆ ಪರಿಚಯಿಸುವುದು ನಮ್ಮ ಆದ್ಯ ಕರ್ತವ್ಯ. ಈ ಪ್ರಯುಕ್ತ ಈ ಅಭಿಯಾನ ಜರುಗಿದ್ದು, ಲಿಂಗಾಯತ ಮಠಾಧಿಪತಿಗಳ ಒಕ್ಕೂಟ, ಜಾಗತಿಕ ಲಿಂಗಾಯತ ಮಹಾಸಭೆ ಸೇರಿದಂತೆ ಹತ್ತಾರು ಬಸವಪರ ಸಂಘಟನೆಗಳ ವತಿಯಿಂದ ಅ. 5ರಂದು ಬೆಂಗಳೂರಿನಲ್ಲಿ ಸಿಎಂ ಸಿದ್ಧರಾಮಯ್ಯನವರಿಗೆ ಅಭಿನಂದನೆ ಸಲ್ಲಿಸಲಾಗುತ್ತಿದೆ ಎಂದರು.

ಬೀದರನಿಂದ ಸುಮಾರು 10 ಸಾವಿರಕ್ಕೂ ಹೆಚ್ಚು ಬಸವ ಭಕ್ತರು ಅಭಿಯಾನದಲ್ಲಿ ಪಾಲ್ಗೊಳ್ಳಲಿದ್ದು, ಪ್ರತಿಯೊಬ್ಬರೂ ಬಿಳಿ ಧೋತಿ ಮತ್ತು ಇಳಕಲ್ ಸೀರೆ ಧರಿಸತಕ್ಕದ್ದು. ಬೆಂಗಳೂರಿಗೆ ಹೋಗಲು ವಿಶೇಷ ರೈಲಿನ ವ್ಯವಸ್ಥೆಗಾಗಿ ಈಗಾಗಲೇ ಸಂಸದ ಸಾಗರ ಖಂಡ್ರೆ ಹಾಗೂ ಕೇಂದ್ರದ ರಾಜ್ಯ ರೈಲ್ವೆ ಖಾತೆಯ ಸಚಿವ ವಿ.ಸೋಮಣ್ಣ ಅವರಿಗೆ ಮನವಿ ಸಲ್ಲಿಸಲಾಗಿದೆ. ಸಕಾರಾತ್ಮಕವಾಗಿ ಸ್ಪಂದನೆ ಮಾಡಿದ್ದಾರೆ ಎಂದು ಧನ್ನೂರ ತಿಳಿಸಿದರು.

ತ್ರಿಪುರಾಂತ ಕೆರೆಗೆ ರೇವಣಸಿದ್ಧರ ಹೆಸರಿಡಬೇಕು. ಬಸವಕಲ್ಯಾಣದಲ್ಲಿ ರೇಣುಕಾಚಾರ್ಯರ ವೃತ್ತ ಸ್ಥಾಪಿಸಬೇಕೆಂಬ ಹೇಳಿಕೆ ನೀಡಿರುವ ಪೂಜ್ಯ ರಂಭಾಪುರಿ ಶ್ರೀಗಳು ತಮ್ಮ ಹೇಳಿಕೆ ಹಿಂಪಡೆಯಬೇಕು. ನಾವು ಯಾವುದೇ ಕಾರಣಕ್ಕೂ ಇದಕ್ಕೆ ಅವಕಾಶ ಕೊಡುವುದಿಲ್ಲ. ಹಾಗೇನಾದರೂ ಪ್ರಯತ್ನಗಳು ನಡೆದರೆ ಉಗ್ರಹೋರಾಟ ಮಾಡುತ್ತೇವೆ ಎಂದು ಬಸವರಾಜ ಧನ್ನೂರ ತಿಳಿಸಿದರು. ಬಸವಣ್ಣ ಧರ್ಮಗುರು ಎಂದು ರಂಭಾಪುರಿ ಶ್ರೀಗಳು ಸೇರಿದಂತೆ ಪಂಚ ಪೀಠಾಧೀಶರು ಒಪ್ಪಲಿ. ಅವರಿಗೆ ಸಾಷ್ಟಾಂಗ ನಮಸ್ಕಾರ ಹಾಕುತ್ತೇವೆ ಎಂದರು.

ಸರ್ಕಾರಿ ಬಸ್ ವ್ಯವಸ್ಥೆ ಕೂಡಾ ಮಾಡಲಾಗಿದೆ. ಒಬ್ಬರಿಗೆ ಹೋಗಿ ಬರಲು 2 ಸಾವಿರ ಮತ್ತು ಸ್ಲೀಪರ್ ಕೋಚ್ ಬಸ್ಸಿಗೆ ಹೋಗಿ ಬರಲು ಒಬ್ಬರಿಗೆ 3 ಸಾವಿರ ಹಣ ನಿಗದಿಪಡಿಸಲಾಗಿದೆ. ನಾಲ್ಕು ಚಕ್ರದ ವಾಹನದಲ್ಲಿ ಹೋಗುವವರು ಅ. 4ರಂದು ಸಾ. 6 ಗಂಟೆಗೆ ನೌಬಾದ ಬಸವೇಶ್ವರ ವೃತ್ತದ ಹತ್ತಿರ ಸೇರಬೇಕೆಂದು ತಿಳಿಸಿದರು. ಹೆಚ್ಚಿನ ಮಾಹಿತಿಗಾಗಿ ಸುರೇಶ ಸ್ವಾಮಿ (9448262614), ಯೋಗೇಶ ಶ್ರೀಗಿರಿ (9449821117), ವಿಲಾಸ ಪಾಟೀಲ (9535076555), ವೀರಶೆಟ್ಟಿ ಪಾಟೀಲ (9845455630), ಯೋಗೇಂದ್ರ ಯದಲಾಪುರೆ (7019071385) ಗೆ ಸಂಪರ್ಕಿಸಬಹುದು.

ಬೆಂಗಳೂರಿನ ಅಭಿಯಾನಕ್ಕೆ ಬರುವ ಶರಣರಿಗಾಗಿ ತುಮಕೂರಿನ ಸಿದ್ಧಗಂಗಾ ಮಠದಲ್ಲಿ ಸ್ನಾನ, ಪೂಜೆ, ಪ್ರಸಾದದ ವ್ಯವಸ್ಥೆ ಮಾಡಿಸಲಾಗಿದೆ. ಶ್ರೀಮಠದ ಪಿಆರ್‌ಓ ನಾಗರಾಜ (9448899233) ಇವರನ್ನು ಸಂಪರ್ಕಿಸಬಹುದಾಗಿದೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಪ್ರಮುಖರಾದ ರಾಜೇಂದ್ರ ಜೊನ್ನಿಕೇರಿ, ಜೈರಾಜ ಖಂಡ್ರೆ, ವೀರಭದ್ರಪ್ಪ ಬುಯ್ಯಾ, ಯೋಗೇಂದ್ರ ಯದಲಾಪುರ ಹಾಜರಿದ್ದರು.

ಲಿಂಗಾಯತ ಧರ್ಮ ಅಲ್ಲ ಎಂದು ಕೆಲವು ರಾಜಕಾರಣಿಗಳು ಹೇಳಿಕೆ ನೀಡುತ್ತಿದ್ದಾರೆ. ಅವರ ಹೇಳಿಕೆಯೇ ಒಂದು ಧರ್ಮದ್ರೋಹವಾಗಿದೆ. "ಎಮಗೂ ನಿಮಗೂ ಬಸವಣ್ಣನವ ಧರ್ಮವಯ್ಯಾ' ಎಂದು ಕಾಯಕಯೋಗಿ ಸಿದ್ಧರಾಮೇಶ್ವರರು ಹೇಳಿರುವಾಗ ಇವರೆಲ್ಲರೂ ಬಸವಾದಿ ಶರಣರಿಗಿಂತ ದೊಡ್ಡವರೇ? ಎಂದು ಬಸವರಾಜ ಧನ್ನೂರ ಪ್ರಶ್ನೆ ಮಾಡಿದ್ದಾರೆ. ಕೆಲವರು ಲಿಂಗಾಯತ ಧರ್ಮಕ್ಕೆ ಮಾನ್ಯತೆ ಸಿಕ್ಕಿಲ್ಲ. ಹಾಗಾಗಿ ಹಿಂದೂ ಎಂದು ಬರೆಸಿ ಎನ್ನುತ್ತಿದ್ದಾರೆ. ಚಿನ್ನಕ್ಕೆ ಸರ್ಕಾರಿ ಮೊಹರು ಇಲ್ಲದಿದ್ದರೆ ಅದು ತನ್ನ ಬೆಲೆ ಕಳೆದುಕೊಳ್ಳುವುದೇ? ಹಾಗೆಯೇ ಮಾನ್ಯತೆ ಸದ್ಯ ಸಿಗದಿದ್ದರೂ ಬಸವಣ್ಣನವರು ಕೊಟ್ಟ ಪರಿಪೂರ್ಣ, ಸಾಂವಿಧಾನಿಕ ಧರ್ಮ 'ಲಿಂಗಾಯತ ಧರ್ಮ'ವೇ ಆಗಿದೆ. ಯಾರಾದರೂ ಲಿಂಗಾಯತ ಧರ್ಮ ಅಲ್ಲ ಎಂದು ಸಾಬೀತುಪಡಿಸಿದರೆ ನಾನು '

ಮೂಗ ಕೊಯ್ದುಕೊಳ್ಳುವೆ ಎಂದರು.

# ಗುರುವಿಗೆ ಮೀರಿಸಿದ ಶಿಷ್ಯ ಶ್ರೇಷ್ಠ : ಡಾ. ಹಾಲಪ್ಪ ಪೃಥ್ವಿರಾಜ್




ಮಲ್ಲಮ್ಮ ನುಡಿ ವಾರ್ತೆ ಬೀದರ. ಸೆ. 29: ಶಿಷ್ಯ ಗುರುವಿನ ಮಾರ್ಗದರ್ಶನವನ್ನು ಪಡೆದು ಗುರುವನ್ನು ಮೀರಿಸಿ ಉನ್ನತ ಸ್ಥಾನ ಹೊಂದಿದಾಗ ಬೋಧನೆ ಮಾಡಿದ ಗುರುವಿಗೆ ಮರೆಯಲಾಗದ ಗುರುದಕ್ಷಿಣೆ ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹ ಪ್ರಾಧ್ಯಾಪಕರಾದ ಡಾ. ಹಾಲಪ್ಪ ಪೃಥ್ವಿ-ರಾಜ ಅಭಿಪ್ರಾಯ ಪಟ್ಟರು. ಪಟ್ಟಣದ ತಹಸೀಲ್ ಕಚೇರಿ ಪಕ್ಕದಲ್ಲಿರುವ ಪುರಭವನದಲ್ಲಿ ವಿದ್ಯಾಚೇತನ ಪದವಿ ಮಹಾವಿದ್ಯಾಲಯದ ಪ್ರಥಮ ವರ್ಷದ ಬಿ. ಕಾಂ. ಹಾಗೂ ಬಿ. ಎಸ್. ಸಿ. ವಿದ್ಯಾರ್ಥಿಗಳಿಗೆ ಸ್ವಾಗತ ಸಮಾರಂಭ ಹಾಗೂ ಶಿಕ್ಷಕರ ದಿನಾಚರಣೆ ಪ್ರಯುಕ್ತ ಮಾತನಾಡಿ ಪರಿಶ್ರಮವೇ ಯಶಸ್ಸಿನ ಕೀಲಿ ಕೈ ಎಂದು ಹೇಳಿದರು.

ಇತಿಹಾಸ ವಿಭಾಗದ ಸಹಾಯಕ ಸಹ ಪ್ರಾಧ್ಯಾಪಕರಾದ ದಶವಂತ ಬಂಡೆ ಮಾತನಾಡಿ ಶಿಕ್ಷಕ ದೇಶದ ಶಿಲ್ಪಿ, ಗೌರವಾನ್ವಿತ ರಾಧಾಕೃಷ್ಣನ್ ಅವರ ಹುಟ್ಟುಹಬ್ಬದ ಪ್ರಯುಕ್ತ ಶಿಕ್ಷಕ ದಿನಾಚರಣೆಯನ್ನು ಆಚರಿಸಲಾಗುತ್ತದೆ. ರಾಧಾಕೃಷ್ಣನ್ ಅವರಿಗೆ ವರ್ಗಾವಣೆಯಾದ ಸಂದರ್ಭದಲ್ಲಿ ವಿದ್ಯಾರ್ಥಿಗಳೆಲ್ಲರೂ ಸೇರಿ ಅವರನ್ನು ಸಾರೋಟದಲ್ಲಿ ಕೂಡಿಸಿ ಕುದುರೆಗಳ ಬದಲಾಗಿ ತಾವೇ ಸ್ವತಹ ರೈಲ್ವೆ ನಿಲ್ದಾಣದವರೆಗೆ ತೆಗೆದುಕೊಂಡು ಒಯ್ದದ್ದು ಇಲ್ಲಿ ಸ್ಮರಿಸುವಂತದ್ದು ಹಾಗೂ ಸಂಪೂರ್ಣ ರೈಲ್ವೆ ನಿಲ್ದಾಣವನ್ನು ಅವರು ಪ್ರಯಾಣಿಸುವ ರೈಲನ್ನು ಹೂವಿನಿಂದ ಅಲಂಕಾರ ಮಾಡಿ ಆನಂದ ಭಾಷ್ಪಗಳೊಂದಿಗೆ ಗುರುವಿಗೆ ಬೀಳ್ಕೊಟ್ಟಿರುವುದು ಇವತ್ತಿನ ವಿದ್ಯಾರ್ಥಿಗಳಿಗೆ ಪ್ರೇರಣೆ ಎಂದರು.

ಜಯ ಕರ್ನಾಟಕ ಜನಪರ ವೇದಿಕೆಯ ಅಧ್ಯಕ್ಷರಾದ ಸಂತೋಷ್ ಬಿ.ಜಿ. ಪಾಟೀಲ್ ಮಾತನಾಡಿ ಭಾರತ ದೇಶದಲ್ಲಿ ಮಹಿಳೆಯರಿಗೆ ಅತ್ಯಂತ ಗೌರವಾನ್ವಿತ ಸ್ಥಾನವಿದೆ. ಅದಕ್ಕಾಗಿಯೇ ನಮ್ಮ ಭೂಮಿಯನ್ನು ನಮ್ಮ ನದಿಗಳನ್ನು ನಾವು ಮಾತೆಯರ ಹೆಸರುಗಳಿಂದ ಸಂಭೋಧಿಸುತ್ತೇವೆ. ಕೆಸರಲ್ಲಿ ಹುಟ್ಟಿದಂತಹ ಕಮಲ ಕೆಸರಲ್ಲೇ ಬೆಳೆದು ಸುಂದರ ರೂಪದೊಂದಿಗೆ ಭಗವಂತನ ಪಾದ ಸೇರುವುದು. ಆ ಹೂವಿನಂತೆ ಬಡ ಹಾಗೂ ಮಧ್ಯಮ ಕುಟುಂಬದಲ್ಲಿ ಜನಿಸಿದ ತಾವೆಲ್ಲ ವಿದ್ಯಾರ್ಥಿಗಳು ಕಠಿಣ ವಿದ್ಯಾರ್ಜನೆಯಿಂದ ಗುರುಗಳ ಮಾರ್ಗದರ್ಶನ ಪಡೆದು ನಿಶ್ಚಿತ ಗುರಿ ತಲುಪಬೇಕು ಎಂದರು.


ಕಾಲೇಜಿನ ಪ್ರಾಂಶುಪಾಲರಾದ ಸಂಜುಕುಮಾರ್ ಮಾಶೆಟ್ಟಿ ಮಾತನಾಡಿ ನಮ್ಮ ಶಿಕ್ಷಣ ಸಂಸ್ಥೆಯು ಬಡ ವಿದ್ಯಾರ್ಥಿಗಳಿಗಾಗಿ ಅತ್ಯಂತ ಕಡಿಮೆ ಶುಲ್ಕದೊಂದಿಗೆ ನುರಿತ ಉಪನ್ಯಾಸಕರಿಂದ ಬೋಧನೆ ಮಾಡಿಸಲಾಗುತ್ತಿದ್ದು 2018ರಲ್ಲಿ 40 ವಿದ್ಯಾರ್ಥಿಗಳಿಂದ ಪ್ರಾರಂಭಗೊಂಡ ನಮ್ಮ ಕಾಲೇಜು ಇವತ್ತು 336 ವಿದ್ಯಾರ್ಥಿಗಳನ್ನು ಹೊಂದಿದೆ ನಮ್ಮಲ್ಲಿನ ಉಪನ್ಯಾಸಕರಾದ ನಸಿರಮಿಯ್ಯಾ ಪ್ರೀ. ಪಿ. ಎಚ್. ಡಿ. ವಾಣಿಜ್ಯ ವಿಭಾಗಕ್ಕೆ ಆಯ್ಕೆಯಾಗಿದ್ದಾರೆ. ಅದೇ ರೀತಿ ಆರತಿ ಅರ್ಜುನ್‌ರಾವ್ ನಮ್ಮ ಕಾಲೇಜಿನ ಬಿ.ಎಸ್.ಸಿ 4ನೇ ಸೆಮಿಸ್ಟರ ವಿದ್ಯಾರ್ಥಿನಿ ಸಿ.ಎ. ಫೌಂಡೇಶನ್ ಉತ್ತೀರಣರಾಗಿರುವುದು ಹೆಮ್ಮೆ ತಂದಿದೆ ಎಂದರು. ಕಾರ್ಯಕ್ರಮದಲ್ಲಿ ದತ್ತಾತ್ರಿ ಹಳ್ಳೆ, ಸಪ್ನಾ ದೇಶಮುಖ, ಹೇಮಲತಾ ಪಾಟೀಲ, ರಾಣಿ ಹಳ್ಳೆ, ಅಂಜಲಿ, ಮಾಲಾಶ್ರೀ, ಮಾಧವರಾವ ಮೋರೆ, ಲಕ್ಷ ಣ ಇನ್ನಿತರರು ಹಾಗೂ ಕಾಲೇಜಿನ ಸಿಬ್ಬಂದಿ ಉಪಸ್ಥಿತರಿದ್ದರು. ಸಾಕ್ಷಿ ಮತ್ತು ಪ್ರಜ್ಞಾ ನಿರೂಪಿಸಿದರು, ಸಂಸ್ಥೆಯ ಆಡಳಿತ ಅಧಿಕಾರಿ ಲಿಂಗರಾಜ ಕೋಟೆ ವಂದಿಸಿದರು.

## ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪಡೆದವರಿಗೆ ಸನ್ಮಾನ



**ಮಲ್ಲಮ್ಮ ನುಡಿ ವಾರ್ತೆ**

(ವರದಿ.ಡಿ.ಕೆ.ಪ್ರಹ್ಲಾದ.) ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ :- ಸೆ 29 ಇಲ್ಲಿನ ಹರಳಯ್ಯನವರ ಗವಿಯಲ್ಲಿ ಹಮ್ಮಿಕೊಂಡ ಶರಣ ವಿಜಯೋತ್ಸವ ನಾಡಹಬ್ಬ. ಹುತಾತ್ಮ ದಿನಾಚರಣೆಯ 7 ನೇ ದಿನದಂದು ಹಮ್ಮಿಕೊಂಡ ಲಿಂಗಾಯತ ಸ್ವ-ಂತತ್ರ ಧರ್ಮ ಎಂಬ ವಿಚಾರ ಗೋಷ್ಠಿಯ ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪಡೆದ ನಾಗಪ್ಪಾ ನಿಣ್ಣೆ. ಧನರಾಜ ಮಾನೆ. ಶರಣಪ್ಪಾ ವಾಡೇಕರ. ರೇಣುಕಾ ಸಜ್ಜನಶೆಟ್ಟಿ. ಭಾಗ್ಯಜ್ಯೋತಿ ಅವರನ್ನು ಹರಳಯ್ಯಗವಿಯ ಪೂಜ್ಯ ಶ್ರೀ ಡಾ.ಗಂಗಾಂಬಿಕಾ ಅಕ್ಕನವರು ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಪೂಜ್ಯ ಶ್ರೀ ಸಿದ್ರಾಮ ಶರಣರು ಬೆಲ್ದಾಳ. ರಾಜ್ಯ ಸರಕಾರಿ ನೌಕರ ಸಂಘದ ಮಾಜಿ ಉಪಾಧ್ಯಕ್ಷರಾದ ರಾಜೇಂದ್ರ ಕುಮಾರ ಗಂದಗೆ. ಚಂದ್ರಕಾಂತ ಮೇತ್ರೆ. ಕಂಟೆಪ್ಪಾ ಗಂಧಿ ಗುಡಿ. ವೀರಶೆಟ್ಟಿ ಪಾಟೀಲ. ಶಿವರಾಜ ನೀಲಕಂಠೆ. ದಾಸೋಹಿಗಳಾದ ನಿವೃತ ಶಿಕ್ಷಕರಾದ ಶಿವಕುಮಾರ ಬಿರಾದಾರ ಸೇರಿದಂತೆ ಅನೇಕರು ಉಪಸ್ಥಿತರಿದರು.




ಬಸವಕಲ್ಯಾಣ :- ಇಲ್ಲಿನ ಹರಳಯ್ಯ ಗವಿಯಲ್ಲಿ ಆಯೋಜಿಸಿದ್ದ ಯುವ ಸಮಾವೇಶದಲ್ಲಿ ಇಸ್ರೋದ ಎಂ. ವಿ. ರೂಪಾ ಅವರಿಗೆ ಶರಣ ವಿಜ್ಞಾನಿ ಪುರಸ್ಕಾರ ನೀಡಿ ಗೌರವಿಸಲಾಯಿತು. ಹರಳಯ್ಯಗವಿಯ ಪೂಜ್ಯ ಶ್ರೀ ಡಾ. ಗಂಗಾಂಬಿಕಾ ಅಕ್ಕ. ಪ್ರೊ. ಬಿ. ಎಸ್. ಬಿರಾದಾರ. ಡಾ. ಅಮರನಾಥ ಸೋಲಪುರೆ. ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿಯ ಅಧ್ಯಕ್ಷರಾದ ಬಸವರಾಜ ಕೊರಕೆ. ಡಾ. ಬಸವರಾಜ ಯವಳೆ. ಡಾ. ರಂಜನಾ ಪಾಟೀಲ. ಡಾ. ಅಶೋಕ ಕುಮಾರ ವಣಗೇರೆ. ಚನ್ನಬಸವ ಬಳತೆ. ಕಲ್ಪನಾ ಚಪಾತೆ. ಶಾಂತಕುಮಾರ ಯಲಾಲ. ಚಂದ್ರಕಾಂತ ಅಕ್ಕಣ್ಣ. ಶಾಲಿವಾನ ಜೋತೆಪ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)



ಸೈದಾಪುರ: ಕಳೆದೆರಡು ದಿನಗಳಿಂದ ಸತತವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಜನಜೀವನ ಸಂಪೂರ್ಣ ಅಸ್ತವ್ಯಸ್ತವಾಗಿದೆ. ಸಮೀಪದ ಗೂಡೂರು ಗ್ರಾಮದ ಹತ್ತಿರದ ಭೀಮಾನದಿಗೆ ಅಡ್ಡಲಾಗಿ ನಿರ್ಮಿಸಿರುವ ಬ್ರಿಜ್ ಕಂ ಬ್ಯಾರೇಜ್ ಸಂಪೂರ್ಣ ಭರ್ತಿಯಾಗಿ ರಸ್ತೆ ಮೇಲೆ ನೀರು ಹರಿಯುತ್ತಿರುವುದನ್ನು ಕಾಣಬಹುದು. (ಮಲ್ಲಮ್ಮ ನುಡಿ ಚಿತ್ರ)

## ನವರಾತ್ರಿ ಮಹೋತ್ಸವ:ವಾಸವಿ ದೇವಿ ಅಲಂಕಾರ ಪೂಜೆ



**ಮಲ್ಲಮ್ಮ ನುಡಿ ವಾರ್ತೆ**

ಕಲಬುರಗಿ,ಸೆ.29-ನಗರದ ಶಹಾಬಜಾರ ಜಗದಂಬಾ ಮಂದಿರದಲ್ಲಿ ಸೋಮವಂಶ ಸಹಸ್ತಾರ್ಜುನ ಕ್ಷತ್ರಿಯ ಸಮಾಜದ ವತಿಯಿಂದ ನವರಾತ್ರಿ ಮಹೋತ್ಸವದ ಅಂಗವಾಗಿ ಭಾನುವಾರ ವಾಸವಿದೇವಿ ಅಲಂಕಾರ ಪೂಜೆ ಮಾಡಲಾಯಿತು.

ವಿಧಾನ ಪರಿಷತ ಮಾಜಿ ಸದಸ್ಯ ಅಮರನಾಥ್ ಪಾಟೀಲ್ ಹಾಗೂ ಉತ್ತಮ ಬಜಾಜ್ ದೀಪೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದರು.

ನಂತರ ಮಕ್ಕಳಿಂದ ದಾಂಡಿಯಾ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ನಡೆದವು.

ಸಮಾಜದ ಅಧ್ಯಕ್ಷ ಶ್ರೀರಾಮ ಡಿ. ಪವಾರ, ಉಪಾಧ್ಯಕ್ಷರಾದ ಡಾ.ಯಶವಂತರಾವ ಎನ್. ಮೇಂಗಜಿ, ಕಾರ್ಯದರ್ಶಿ ವಿಷ್ಣುಸಾ ಎಲ್. ಬಾರಾಡ, ಸಹ ಕಾರ್ಯದರ್ಶಿ ರಮಾಕಾಂತ ಎಸ್. ಚವ್ಹಾನ, ಪ್ರಮುಖರಾದ ನಾಗೇಂದ್ರ ವಿ. ಚುಡಾಮಣಿ, ನಾರಾಯಣರಾವ ಡಿ.ಹಬೀಬ, ನರಸಿಂಗ ಸಿ. ಮೇಂಗಜಿ, ಶ್ರೀರಾಮ್, ನರಸಿಂಗಸಾ, ಗಂಗಾರಾಮಸಾ ಪವಾರ, ರಾಜೇಂದ್ರ ಕೆ. ಹಬೀಬ, ಅನಿಲ್ ಮೆಂಗಜಿ, ಚಂದಕಾರ್ಂತ್ ಚವಾಣ್, ಮುಕುಂದ್ ಚವ್ಹಾಣ್, ರವೀಂದ್ರಕುಮಾರ ವಿ. ಮೇಂಗಜಿ ಉಪಸ್ಥಿತರಿದ್ದರು.

## ಬಂಜಾರ ಸಮಾಜ ಸೌಜನ್ಯತೆಯ ಪ್ರತೀಕ ಹಾರಕೂಡ ಶ್ರೀ.



**ಮಲ್ಲಮ್ಮ ನುಡಿ ವಾರ್ತೆ**

ಬಸವಕಲ್ಯಾಣ :- ಸೆ 29- ವಿನಯ, ಸೌಜನ್ಯತೆ, ದೈವಿಭಕ್ತಿಯ ಪ್ರತೀಕವಾಗಿರುವ ಬಂಜಾರ ಸಮಾಜ ನಮ್ಮ ನಾಡು ಹಾಗೂ ರಾಷ್ಟದಲ್ಲಿಯೇ ಆದರ್ಶ ಪರಂಪರೆಯನ್ನು ಹೊಂದಿದೆ ಎಂದು ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹತ್ಯಾಳ ತಾಂಡದಲ್ಲಿ ನವರಾತ್ರಿ ಪ್ರಯುಕ್ತ ಆಯೋಜಿಸಿದ ಲಿಂಗೋತ್ರಣ ಮರಿಯಮ್ಮದೇವಿ ಆರಾಧನಾ ಮಹೋತ್ಸವ ಧರ್ಮ ಸಭೆಯ ಸಾನಿಧ್ಯವಹಿಸಿ ಮಾತನಾಡಿದ ಶ್ರೀಗಳು, ಸಂತ ಸೇವಾಲಾಲ ಮಹಾರಾಜರ ಆಶೀರ್ವಾದದ ನೆರಳಲ್ಲಿ ದೇವಿ ಆರಾಧಕರಾಗಿರುವ ಬಂಜಾರ ಸಮಾಜ ತನ್ನದೇ ಆದ ವಿಶಿಷ್ಟ ಧರ್ಮ ಸಂಸ್ಕೃತಿಯನ್ನು ಹೊಂದಿರುವ ಸಮಾಜವಾಗಿದೆ.

ದೇವಿಯ ನಾಮ, ರೂಪ ಬೇರೆ ಬೇರೆಯಾದರೂ ಆದಿಶಕ್ತಿ ಜಗನ್ಮಾತೆಯೇ ಎಲ್ಲರ ತಾಯಿ ಎನ್ನುವುದನ್ನು ಅರಿತು, ಒಬ್ಬರಿಗೊಬ್ಬರು ಪ್ರೀತಿ ವಿಶ್ವಾಸದಿಂದ ನಡೆದು-ಕೊಂಡರೆ ಅಂತಹ ಸಮಾಜ ಶಾಂತಿ ಸೌಹಾರ್ದತೆಯ ನೆಲೆ ಬೀಡಾಗುತ್ತದೆ ಎಂದು ನುಡಿದರು.

ಮಳೆಯಲ್ಲಿಯೂ ಭಕ್ತಿಶ್ರದ್ಧೆಯಿಂದ ಮರಿಯಮ್ಮ ದೇವಿಯ ಜಾತ್ರಾ ಮಹೋತ್ಸವ ಆಯೋಜಿಸಿದ ಹತ್ಯಾಳ ತಾಂಡ ಜನತೆಯ ದೇವಿನಿಷ್ಠೆ ಶ್ಲಾಘನೀಯವಾಗಿದ್ದು ಎಲ್ಲರಿಗೂ ಹಾರಕೂಡಧೀಶ ಹಾಗೂ ಜಗನ್ಮಾತೆ ಮರಿಯಮ್ಮದೇವಿಯು ಸನ್ಮಂಗಳವನ್ನುಂಟು ಮಾಡಲಿ ಎಂದು ಶುಭ ಹಾರೈಸಿದರು. ಈ ಸಂದರ್ಭದಲ್ಲಿ

ಆನಂದರಾವ ಝುಳಕೆ, ರೋಹಿದಾಸ ಅಡೆ, ಧನಸಿಂಗ ಹೀರಾಡೆ, ಧನಸಿಂಗ ರಾಮಾಡೆ, ಬಳಿರಾಮ ಜಾಧವ, ರೂಪಸಿಂಗ ಚೌಹಣ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. ಜಗನ್ನಾಥ ಅಡೆ ಸ್ವಾಗತಿಸಿ ನಿರೂಪಿಸಿದರು.

ಕಾರ್ತಿಕ ಸ್ವಾಮಿ ಯಲ್ಲದಗುಂಡಿ ಪ್ರಾರ್ಥನಾ ಗೀತೆ ಹಾಡಿದರು.

## ಬಿಗ್ ಬಾಸ್‌ಗೆ ಕನ್ನೆಳ್ಳಿ ಗ್ರಾಮದ ಮಲ್ಲಮ್ಮ ಆಯ್ಕೆಗೆ ನಂದಕುಮಾರ್ ಬಾಂಬೆಕರ್ ಹರ್ಷ

**ಮಲ್ಲಮ್ಮ ನುಡಿ ವಾರ್ತೆ**

ಸುರಪುರ:- ಪ್ರತಿಷ್ಠಿತ ರಿಯಾಲಿಟಿ ಶೋ ಗಳಲ್ಲಿ ಒಂದಾದ ಖಾಸಗಿ ವಾಹಿನಿಯ ಬಿಗ್ ಬಾಸ್ ಸೀಸನ್-12 ರ ಮನೆಗೆ ಅಪ್ಪಟ ಹಳ್ಳಿ ಮಹಿಳೆ ಸುರಪುರ ವಿಧಾನಸಭಾ ಕ್ಷೇತ್ರದ ಕನ್ನೆಳ್ಳಿ ಗ್ರಾಮದ ಮಲ್ಲಮ್ಮ (50) ಆಯ್ಕೆಯಾಗಿ ಹೋಗುವ ಮೂಲಕ ನಾಡಿನ ಜನರ ಗಮನ ಸೆಳೆದಿದ್ದಾಳೆ. ಶ್ರಮಜೀವಿಯಾಗಿರುವ ಮಲ್ಲಮ್ಮ ಬಾವಿ ಕಳೆದ ಸುಮಾರು 20 ವರ್ಷಗಳ ಹಿಂದೆಯೇ ಪತಿ ತೀರಿಹೋಗಿದ್ದು, ಇಬ್ಬರು ಚಿಕ್ಕ ಮಕ್ಕಳನ್ನು ತಾನೇ ದುಡಿದು ಮಕ್ಕಳನ್ನು ಸಾಕಿ ಗ್ರಾಮದಲ್ಲಿ ಬಟ್ಟೆ ಹೊಲಿಗೆ ಮಾಡುತ್ತ ಮನೆ ನಡೆಸಿಕೊಂಡು ಹೋಗಿರುವ ಇವರು, ಕಳೆದ ಕೆಲವು ವರ್ಷಗಳಿಂದ ಬೆಂಗಳೂರಿನಲ್ಲಿ ಮಕ್ಕಳೊಂದಿಗೆ ವಾಸವಾಗಿದ್ದು ಗಾರ್ಮೆಂಟ್ ಒಂದರಲ್ಲಿ ಉದ್ಯೋಗಿಯಾಗಿ ಕೆಲಸಕ್ಕೆ ಸೇರಿಕೊಂಡಿದ್ದಾರೆ. ಅವಕಾಶ ಎನ್ನುವುದು ಯಾವಾಗ ಒಲಿದು ಬರುತ್ತದೆ ಎನ್ನುವುದು ಯಾರಿಗೂ ತಿಳಿದಿರುವುದಿಲ್ಲ. ಮಲ್ಲಮ್ಮ ಬಾವಿ ಅವರಿಗೆ ತಮ ಗೆ ತಮ್ಮ 50ನೇ ವರ್ಷದಲ್ಲಿ ಬಿಗ್ ಬಾಸ್ ಮನೆಗೆ ಹೋಗುವ ಅವಕಾಶ ತಮ್ಮ ದೊರೆತಿದ್ದು ಕನ್ನೆಳ್ಳಿ ಗ್ರಾಮ ಸೇರಿದಂತೆ ಸುರಪುರ ತಾಲೂಕಿನ ಜನರಿಗೆ ಹೆಮ್ಮೆಯ ಸಂಗತಿಯಾಗಿದೆ. ಸ್ಪರ್ಧಿಯಾಗಿ ಮನೆಗೆ ಹೋಗುತ್ತಿರುವ ಮಲ್ಲಮ್ಮ ಬಾವಿ ಗೆದ್ದು ಬರಲಿ ಎಂದು ಜನತೆ ಹಾರೈಸುತಿದ್ದಾರೆ.






ನಮ್ಮೂರಿನ ಹಳ್ಳಿ ಪ್ರತಿಭೆ ಮಲ್ಲಮ್ಮ ಅವರು ಬಿಗ್ ಬಾಸ್ ಮನೆಗೆ ಹೋಗಿರುವುದು ಇಡೀ ಕನ್ನಳ್ಳಿ ಗ್ರಾಮವೇ ಸಂಭ್ರಮಿಸುತ್ತಿದೆ ಕಳೆದ ಎರಡು ವರ್ಷಗಳಿಂದ ಸಾಮಾಜಿಕ ಜಾಲತಾಣಗಳ ಫೇಸ್ಬುಕ್ ಯೂಟ್ಯೂಬ್ ಇನ್ಸ್ಟಾಗ್ರಾಮ್ ಮೂಲಕ ಪರಿಚಿತರಾಗಿರುವ ಮಲ್ಲಮ್ಮ ಅವರು ಇಂದು ಬಹಳ ಮಹತ್ವದ ಬಿಗ್ ಬಾಸ್ ಸ್ಪರ್ಧೆಗೆ ಹೋಗಿರುವುದು ವೈಯಕ್ತಿಕವಾಗಿ ನನಗೂ ತುಂಬಾ ಖುಷಿ ತಂದಿದೆ ಉತ್ತರ ಕರ್ನಾಟಕ ಹೈದರಾಬಾದ್ ಕರ್ನಾಟಕ ಮತ್ತು ಸಗರನಾಡಿನ ಹಳ್ಳಿಯ ಪ್ರತಿಭೆ ಒಬ್ಬರು ಈ ಹಂತಕ್ಕೆ ತಲುಪಿರೋದು ಅಭಿಮಾನದ ಸಂಗತಿಯೇ ಸರಿ ಬದುಕು ಕಟ್ಟಿಕೊಳ್ಳಲು ಬೆಂಗಳೂರಿಗೆ ಹೋದ ಮಲ್ಲಮ್ಮ ಅವರು ಇವತ್ತು ಇಡೀ ನಾಡೇ ಅವರನ್ನು ನೋಡುವ ರೀತಿ ಬೆಳೆದಿರುವುದು ನಿಜಕ್ಕೂ ಆಶಾದಾಯಕ ಸಂಗತಿ.

**-ನಂದಕುಮಾರ್ ಬಾಂಬೆಕರ್ ಮಾದಿಗ ಯುವಸೇನೆ ರಾಜ್ಯ ಅಧ್ಯಕ್ಷರು.**



ಶ್ರೀಮದ್ ರಂಭಾಪುರಿ ಜಗದ್ಗುರುಗಳವರ ದಸರಾ ಧರ್ಮ ಸಮ್ಮೇಳನ – ಇಷ್ಟಲಿಂಗ ಮಹಾಪೂಜೆ – ಹಾರಕೂಡ ಶ್ರೀಗಳ ನೇತೃತ್ವದಲ್ಲಿ. ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ : – ಸೆ 29 ನಗರದ ಬಿಕೆಡಿಬಿ ಕಲ್ಯಾಣ ಮಂಟಪದಲ್ಲಿ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರ ನೇತೃತ್ವದಲ್ಲಿ ಶ್ರೀಮದ್ ರಂಭಾಪುರಿ ಜಗದ್ಗುರುಗಳವರ 7 ನೇ ದಿನದ ಇಷ್ಟಲಿಂಗ ಮಹಾಪೂಜೆ ಕಾರ್ಯಕ್ರಮ ಜರುಗಿತು. ಶ್ರೀಮದ್ ರಂಭಾಪುರಿ ಜಗದ್ಗುರುಗಳು ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರಿಗೆ ಸತ್ಕರಿಸಿ ಗೌರವಿಸಿದರು. ಇಷ್ಟಲಿಂಗ ಮಹಾಪೂಜೆಯ ನೇತೃತ್ವ ವಹಿಸಿದ ಹಾರಕೂಡದ ಪರಮ ಪೂಜ್ಯರು ಹಿತವಚನ ನೀಡಿದರು. (ಮಲ್ಲಮ್ಮ ನುಡಿ ಚಿತ್ರ)

### ಅದ್ದೂರಿಯಾಗಿ ಜರುಗಿದ ಗುರುವಂದನೆ ಹಾಗೂ ಸ್ನೇಹ ಸಮ್ಮೇಳನ

## ವಿದ್ಯಾರ್ಥಿಗಳ ಪ್ರಗತಿಯನ್ನು ತಂದೆ ತಾಯಿಯಷ್ಟೆ ಗುರುಗಳು ಹೆಮ್ಮೆ ಪಡುತ್ತಾರೆ: ಗುಂಡಪ್ಪ ಹುಡಗೆ





ಕಾರ್ಯಕ್ರಮದಲ್ಲಿ ವಿಶೇಷವಾಗಿ ಗುರುಗಳಿಗೆ ಪುಷ್ಪನಮನ, ಪುಷ್ಪದಿಂದಲೇ ಅವರುಗಳನ್ನು ವೇದಿಕೆಯವರೆಗೆ ಭವ್ಯ ಸ್ವಾಗತ ನೀಡುವುದರ ಮೂಲಕ ವಿದ್ಯೆ ಕಲಿಸಿದ ಗುರುಗಳಿಗೆ ಹಳೇ ವಿದ್ಯಾರ್ಥಿಗಳು ಗೌರವ ಸಲ್ಲಿಸಿದರು.

**ಮಲ್ಲಮ್ಮ ನುಡಿ ವಾರ್ತೆ**

ಚಿಟಗುಪ್ಪ:- ವಿದ್ಯಾರ್ಜನೆ ಕಾಲದ ಜೀವನಾನುಭವಗಳನ್ನು ಭವಿಷ್ಯದ ಬದುಕಿಗೆ ಸಾರ್ಥಕವಾಗಿ ಕಟ್ಟಿಕೊಳ್ಳುವ ಮೂಲಕ ಬದುಕನ್ನು ಬಂಗಾರ ಮಾಡಿಕೊಳ್ಳುವ ದೃಢತೆ ವಿದ್ಯಾರ್ಥಿ ಜೀವನದಲ್ಲಿಯೇ ಕಟ್ಟಿಗೊಳ್ಳಬೇಕು ಎಂದು ಎಪಿಸಿ ಉಪ ನಿರ್ದೇಶಕ ಗುಂಡಪ್ಪ ಹುಡಗೆ ತಿಳಿಸಿದರು. ರವಿವಾರ ಪಟ್ಟಣದ ಸರ್ಕಾರಿ ಪ್ರೌಢ ಶಾಲೆ (ಜೂನಿಯರ್ ಕಾಲೇಜ)ನ 2005-06ನೇ ಸಾಲಿನ 10ನೇ ತರಗತಿ ಹಳೆಯ ವಿದ್ಯಾರ್ಥಿಗಳು ಪಟ್ಟಣದ ಸಂತ ಶಿರೋಮಣಿ ಮಾಡಿವಾಳೇಶ್ವರ (ಗವಿ) ಕಲ್ಯಾಣ ಮಂಟಪದಲ್ಲಿ ಏರ್ಪಡಿಸಿದ ಗುರುವಂದನೆ ಹಾಗೂ ಸ್ನೇಹ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿ ಹಾಗೂ ಶಿಕ್ಷಕರ ನಡುವಿನ ಸಂಬಂಧಗಳು ಹಳಸುತ್ತಿವೆ. ಆದರೆ ಈ ಶಾಲೆಯ ಹಳೆಯ ವಿದ್ಯಾರ್ಥಿಗಳು ಗುರುಗಳನ್ನು ನೆನಪು ಮಾಡಿಕೊಂಡು ಗೌರವಿಸಿ, ಇದರ ನೆಪದಲ್ಲೇ ಹತ್ತಿಪ್ಪತ್ತು ವರ್ಷಗಳ ಹಿಂದಿನಿಂದ ಇರುವ ಸಂಬಂಧಗಳನ್ನು ಜಾಗೃತಗೊಳಿಸಿಕೊಳ್ಳುವ ಈ ಕಾರ್ಯಕ್ರಮ ನಿಜಕ್ಕೂ ಅರ್ಥಪೂರ್ಣವಾಗಿದೆ, ನಮ್ಮಿಂದ ಪಾಠ ಕೇಳಿದ ಮಕ್ಕಳು ಇಂದು ಉನ್ನತ ಸ್ಥಾನಗಳಲ್ಲಿದ್ದಾರೆ.

ಅವರೆಲ್ಲರೂ ಒಂದೆಡೆ ಸೇರಿ ನಮ್ಮನ್ನು ನೆನಪಿಸಿಕೊಂಡು, ಗುರುವಂದನೆ ಸಲ್ಲಿಸಿರುವುದು ನಮ್ಮ ಬದುಕಿನ ಸುವರ್ಣ ಕ್ಷಣಗಳು ಎಂದು ಶ್ಲಾಘಿಸಿದರು. ನಿವೃತ್ತ ಶಿಕ್ಷಕ ಕಾಶಿನಾಥ ಕೊಡ್ಲಿ ಮಾತನಾಡಿ, ಹಳೆಯ ವಿದ್ಯಾರ್ಥಿಗಳು ಇಂದು ಗುರುವಂದನಾ ಕಾರ್ಯಕ್ರಮ ನಡೆಸುತ್ತಿರುವುದು ತುಂಬಾ ಸಂತೋಷದ ವಿಷಯ. ಗುರುಗಳಿಂದ ಶಿಕ್ಷಣ ಪಡೆದ ವಿದ್ಯಾರ್ಥಿಗಳು ಉನ್ನತ ಸ್ಥಾನಕ್ಕೆ ಹೋದಾಗ ಗುರುಗಳ ಬೋಧನೆ ಪರಿಶ್ರಮಕ್ಕೆ ಪ್ರತಿಫಲ ಸಿಕ್ಕಿದಂತೆ ಆಗುತ್ತದೆ ಹಾಗೂ ವಿದ್ಯಾರ್ಥಿಗಳ ಪ್ರಗತಿಯನ್ನು ಕಂಡು ತಂದೆ ತಾಯಿಯಷ್ಟೆ ಗುರುಗಳು ಹೆಮ್ಮೆ ಪಡುತ್ತಾರೆ. ವಿದ್ಯಾರ್ಥಿಗಳು ತಾವು ಕಲಿತ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸಹಕರಿಸಿ ಮುಂದಿನ ಪೀಳಿಗೆಯ ಪ್ರಗತಿಗೆ ಸಹಕಾರಿಯಾಗಬೇಕು ಎಂದರು. ಪ್ರತಿಯೊಬ್ಬರೂ ತಂದೆ- ತಾಯಿ ಹಾಗೂ ಗುರುಹಿರಿಯರನ್ನು ಗೌರವಿಸಬೇಕು ಎಂದು ಹೇಳಿದರು. ನಿವೃತ್ತ ಉರ್ದು ಶಿಕ್ಷಕ ಕುತ್ಬೋದಿನ್ ಕಮತಾಣವಾಲೇ ಮಾತನಾಡಿ, ಸಮಾಜದಲ್ಲಿ ಪ್ರತಿಯೊಬ್ಬರು ತಮ್ಮದೇ ಆದ ಸ್ಥಾನಮಾನಗಳು ಪಡೆದು, ಸಾರ್ಥಕ ಜೀವನ ಸಾಗಿಸುತ್ತಿರುವ ನನ್ನ ಅಸಂಖ್ಯಾತ ವಿದ್ಯಾರ್ಥಿಗಳು ಒಂದೊಂದು ಅಮೂಲ್ಯ ರತ್ನಗಳು. ಅಂತಹವರನ್ನು ತಯಾರು ಮಾಡಿದ ಕೀರ್ತಿ ಶಿಕ್ಷಕರಿಗೆ ಲಭಿಸುತ್ತದೆ. ಪ್ರಪಂಚದಲ್ಲಿ ಗುರುವಿಗೆ ಇರುವ ಸ್ಥಾನ ಅತ್ಯಂತ ಅಮೂಲ್ಯವಾದದ್ದು. ದೇವರು, ತಾಯಿ ನಂತರದ ಸ್ಥಾನ ಇರುವುದೇ ಗುರುವಿಗೆ. ಆ ಕಾಯಕವನ್ನು ಪ್ರತಿಯೊಬ್ಬ ಶಿಕ್ಷಕರು ತಮ್ಮದೇ ಆದ ರೀತಿಯಲ್ಲಿ ಈ ಸಮಾಜದಲ್ಲಿ ನಿರ್ವಹಿಸಿಕೊಂಡು ಬರುತ್ತಿದ್ದಾರೆ ಎಂದರು. ನಿವೃತ್ತ ಪ್ರಾಚಾರ್ಯ ಎಂ.ಎಂ. ಮಾಸುಲ್ದಾರ್ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಶಿಕ್ಷಕರಾದ ಶಾಂತಪ್ಪ, ರೇವಣಸಿದ್ದಪ್ಪ, ಚಂದ್ರಶೇಖರ ದಾನಪ್ಪ, ಅಮೃತಾಂಜಲಿ, ಜೈಶ್ರೀ, ಕಾಂತಾಬಾಯಿ , ಶಾಹೀನ್, ಗಾಯತ್ರಿ, ಶಿವರಾಜ್, ಕಾಶೀನಾಥ್ ಸ್ವಾಮಿ ವೇದಿಕೆಯಲ್ಲಿದ್ದರು. ವಿದ್ಯಾರ್ಥಿಗಳಾದ ಪ್ರದೀಪಕುಮಾರ್, ಅನೀಲ ಉಪಾರ್, ಲಕ್ಷ್ಮಣ್ ಭೋವಿ, ಯುವರಾಜ ಪಾಟೀಲ್, ಸಂತೋಷರೆಡ್ಡಿ ಈರಾರೆಡ್ಡಿ, ವಾಹಿದ್ ಪಟೇಲ್, ದತ್ತು ಮುಸ್ತರಿ, ದೀಪಿಕಾ ರೆಡ್ಡಿ, ಲಕ್ಷ್ಮಿ ಚಂದನಕೇರಾ, ಅಶ್ವಿನಿ, ಗೀತಾ, ವಂದನಾ, ಸೇರಿದಂತೆ ನೂರಾರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.


## ಮಾದಕ ದ್ರವ್ಯ ವಸ್ತುಗಳಿಂದ ದೂರವಿರಿ ಎಎಸ್ಐ ಸಂಜೀವಕುಮಾರ್

**ಮಲ್ಲಮ್ಮ ನುಡಿ ವಾರ್ತೆ**




ಚಿಟಗುಪ್ಪ:- ಧೂಮಪಾನ ಮತ್ತು ಹೊಗೆ ರಹಿತ ತಂಬಾಕು ಉತ್ಪನ್ನಗಳು ಸೇರಿ ತಂಬಾಕು ಸೇವನೆಯಿಂದ ಮನುಷ್ಯನ ಆರೋಗ್ಯದ ಮೇಲೆ ಉಂಟಾಗುವ ಅಪಾಯಗಳ ಬಗ್ಗೆ ಸೋಮವಾರ ಪೊಲೀಸ್ ಇಲಾಖೆ ಪಟ್ಟಣದಲ್ಲಿ ಮಾದಕ ದ್ರವ್ಯ ನಿಷೇಧ ಜಾಗೃತಿ ಕಾರ್ಯಕ್ರಮದಲ್ಲಿ ಎಎಸ್ಐ ಸಂಜೀವಕುಮಾರ ಮಾತನಾಡುತ್ತ ತಿಳಿಸಿದರು. ಇತ್ತೀಚಿನ ದಿನಗಳಲ್ಲಿ ಹದಿಹರೆಯದ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಮಾದಕ ವಸ್ತುಗಳ ಸೇವನೆಯಲ್ಲಿ ತೊಡಗುತ್ತಿದ್ದಾರೆ. ತಂಬಾಕು ಸೇವನೆಯಿಂದ ಕ್ಯಾನ್ಸರ್, ಹೃದಯ ರಕ್ತನಾಳದ ಸಮಸ್ಯೆಗಳು ಮತ್ತು ಉಸಿರಾಟದ ಸಮಸ್ಯೆಗಳಂತಹ ಕಾಯಿಲೆಗಳು ಉದ್ಭವಿಸುತ್ತವೆ. ತಂಬಾಕು ಸೇವನೆಯಿಂದಾಗುವ ಸಮಸ್ಯೆಗಳ ಕುರಿತು ಜಾಗೃತಿ ಮೂಡಿಸಿದರು. 18 ವರ್ಷ ಪೂರ್ಣಗೊಳಿಸಿದ ನಂತರ ವಾಹನ ಚಲಾಯಿಸುವುದು ಒಳ್ಳೆಯದು, ಸರಕಾರದ ನಿಮಯಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು, ಹೇಲ್ಮೆಟ್ ಧರಿಸಿ ದ್ವಿಚಕ್ರ ಓಡಿಸಬೇಕು, ಕಾರುಗಳನ್ನು ನಡೆಸುತ್ತಿರುವಾಗ ಸೀಟ್ ಬೇಲ್ಟ್ ಹಾಕಿಕೊಳ್ಳಬೇಕು, ವಾಹನ ನಡೆಸುತ್ತಿರುವಾಗ ಮೊಬೈಲ್ ಬಳಕೆ ಮಾಡಬಾರದು, ಮೊಬೈಲ್‌ಗೆ ಹೇಗೆ ಕವರ್ ಹಾಕಿ ಜೋಪಾನ ಮಾಡುತ್ತೇವೂ ಅದೆ ರೀತಿ ತನ್ನ ತೆಲೆಗೆ ಪೆಟ್ಟು ಬೀಳದಂತೆ ಹೇಲ್ಮೆಟ್ ಬಳಸಬೇಕು ಎಂದು ತಿಳಿಸಿದರು. ಅಕ್ಕ ಪಡೆ ಮಹಿಳಾ ಪೇದೆ ಶೈಲಾ ಮಾತನಾಡಿ, ಹೆಣ್ಣುಮಕ್ಕಳು ತಮ್ಮ ಮೇಲೆ ಯಾವುದೇ ರೀತಿಯ ದೌರ್ಜನ್ಯ ನಡೆದರೆ ಕೂಡಲೇ ಅಕ್ಕ ಪಡೆಯ ಗಮನಕ್ಕೆ ತರಬೇಕು.ಅಕ್ಕ ಪಡೆ ಹೆಣ್ಣುಮಕ್ಕಳ ರಕ್ಷಣೆಗಾಗಿಯೇ ಇದೆ. ಹೀಗಾಗಿ ಏನೇ ಸಮಸ್ಯೆ ಇದ್ದರೂ ಪಡೆ ಮುಂದೆ ಹೇಳಿಕೊಳ್ಳಬೇಕು ಎಂದರು. ಈ ಸಂದರ್ಭದಲ್ಲಿ ಸಿಬ್ಬಂದಿಗಳಾದ ಪ್ರೇಮ ರಾಠೋಡ, ಜಗನ್ನಾಥ ಸೇರಿದಂತೆ ಸಾರ್ವಜನಿಕರು ಉಪಸ್ಥಿತರಿದ್ದರು.

# ನಾಗಮೋಹನದಾಸ್ ವರದಿಯಿಂದ ಬಲಗೈ ಸಮುದಾಯಕ್ಕೆ ಅನ್ಯಾಯ: ಅನೀಲ ಬೆಲ್ದಾರ್



ಮಲ್ಲಮ್ಮ ನುಡಿ ವಾರ್ತೆ

ಬೀದರ. ಸೆ. 29 : ನ್ಯಾ. ನಾಗಮೋಹನದಾಸ್ ಅವರ ವರದಿಯಿಂದ ಬಲಗೈ ಸಮುದಾಯಕ್ಕೆ ತೀವ್ರ ಅನ್ಯಾಯವಾಗಿದೆ. ಹೀಗಾಗಿ "ಒಳಮೀಸಲಾತಿ ವರದಿಯ ಒಳಸಂಚು" ಕುರಿತು ಕರ್ನಾಟಕ ರಾಜ್ಯ ಬಲಗೈ ಜಾತಿಗಳ ಒಕ್ಕೂಟದ ವತಿಯಿಂದ ಅ. 5 ರಂದು ಭಾನುವಾರ ಬೆ. 11 ಗಂಟೆಗೆ ನಗರದ ಜಿಲ್ಲಾ ರಂಗಮಂದಿರದಲ್ಲಿ ವಿಚಾರ ಸಂಕಿರಣ ಹಮ್ಮಿಕೊಳ್ಳಲಾಗಿದೆ. ಬಲಗೈ ಸಮುದಾಯದ ಪ್ರಗತಿಪರ ಚಿಂತಕರು, ವಿದ್ಯಾರ್ಥಿಗಳು, ಅಧಿಕಾರಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಕಾರ್ಯಕ್ರಮದ ಆಯೋಜಕ ಅನೀಲಕುಮಾರ ಬೆಲ್ದಾರ್ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸೋಮವಾರ ಕರೆದ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಈ ವಿಚಾರ ಸಂಕಿರಣಕ್ಕೆ ಒಕ್ಕೂಟದ ಅಧ್ಯಕ್ಷ ಪೂಜ್ಯ ಶ್ರೀ ಜ್ಞಾನಪ್ರಕಾಶ ಸ್ವಾಮೀಜಿ, ಸಂಚಾಲಕ ಸಿದ್ಧಯ್ಯ ನಿ. ಐ.ಎ.ಎಸ್., ಸಂಚಾಲಕಿ ವಾಣಿ ಕೆ.ಶಿವರಾಂ ಹಾಗೂ ಸರ್ಕಾರಿ ಎಸ್.ಸಿ. ಎಸ್.ಟಿ. ನೌಕರರ ಸಂಘದ ರಾಜ್ಯಾಧ್ಯಕ್ಷ ಡಿ.ಚಂದ್ರಶೇಖರಯ್ಯ ಆಗಮಿಸಿ, ವಿಶೇಷವಾಗಿ ನಮಗೆ ಆಗಿರುವ ಅನ್ಯಾಯದ ಕುರಿತು ಸಮಗ್ರವಾಗಿ ತಿಳಿಸಿಕೊಡಲಿದ್ದಾರೆ. ಒಳಮೀಸಲಾತಿಯ ಒಳಸಂಚುಗಳು ಹಾಗೂ ಮುಂದಿನ ನಮ್ಮ ಸಮುದಾಯದ ಭವಿಷ್ಯದ ಕುರಿತು ಬಲಗೈ ಸಮುದಾಯಗಳು ತೆಗೆದುಕೊಳ್ಳಬೇಕಾದ ತೀರ್ಮಾನಗಳ ಬಗ್ಗೆ ವಿಚಾರ ಸಂಕಿರಣ ಹಮ್ಮಿಕೊಳ್ಳಲಾಗಿದೆ ಎಂದು ಬೆಲ್ದಾರ್ ತಿಳಿಸಿದರು.

ಒಕ್ಕೂಟದ ಮುಖಂಡರಾದ ರಮೇಶ ಡಾಕುಳಗಿ ಮಾತನಾಡಿ ಆ. 19 ರಂದು ನಡೆದ ಸಚಿವ ಸಂಪುಟವು ನ್ಯಾ.ನಾಗಮೋಹನದಾಸ್ ವರದಿಯನ್ನು ಭಾಗಶಃ ಮಾರ್ಪಾಡಿಸಿ ಪ್ರವರ್ಗ ಎ, ಬಿ, ಸಿ. ಎಂದು ನಾಲ್ಕು ಭಾಗಗಳಾಗಿ ಹಣ ಹಾಗೂ ರಾಜಕೀಯ ಒಳಸಂಚಿನಿಂದ ಉದ್ದೇಶಪೂರ್ವಕವಾಗಿಯೇ ವರ್ಗೀಕರಿಸಿ, ಹೆಚ್ಚು ಜನಸಂಖ್ಯೆಯುಳ್ಳ ಬಲಗೈ ಸಮುದಾಯವನ್ನು 2ನೇ ಸ್ಥಾನದಲ್ಲಿ ಬರುವಂತೆ ನೋಡಿಕೊಳ್ಳಲಾಗಿದೆ. ಬಲಗೈ ಸಮುದಾಯವನ್ನು 36 ಲಕ್ಷ ಎಂದೂ, ಎಡಗೈ ಸಮುದಾಯವನ್ನು 35 ಲಕ್ಷ ಎಂದು ತೋರಿಸಿ ಒಂದೇ ಲಕ್ಷ ವ್ಯತ್ಯಾಸ ತೋರಿಸಲಾಗಿದೆ. ಎಡಗೈ ಗುಂಪಿನಿಂದ ಬಲಗೈ ಗುಂಪಿಗೆ ಎರಡೂವರೆ ಲಕ್ಷ ಜನಸಂಖ್ಯೆಯಲ್ಲಿ ವರ್ಗಾವಣೆ ಮಾಡಿದ್ದರಿಂದ ಬಲಗೈ ಸಮುದಾಯ ಜನಸಂಖ್ಯೆ 36 ಲಕ್ಷ ಆಗಿದ್ದು, ಪ್ರವರ್ಗ ಎ ಪರಿಗಣಿಸದೆ ಪ್ರವರ್ಗ ಬಿ ಪರಿಗಣಿಸಿರುವುದು ನ್ಯಾಯಸಮ್ಮತವಲ್ಲ. ಈ ಎಲ್ಲಾ ವಿಷಯಗಳನ್ನು ಅ. 5 ರಂದು ಚರ್ಚಿಸಲು ಒಳಮೀಸಲಾತಿ ಒಳಸಂಚು ಕುರಿತು ವಿಚಾರ ಸಂಕಿರಣ ಹಮ್ಮಿಕೊಳ್ಳಲಾಗಿದೆ. ಮುಂದಿನ ಹೋರಾಟದ ಕುರಿತು ಪೂಜ್ಯ ಜ್ಞಾನಪ್ರಕಾಶ ಸ್ವಾಮೀಜಿಯವರೇ ನಿರ್ಣಯ ಕೈಗೊಳ್ಳಲಿದ್ದಾರೆ. ಪ್ರತಿಯೊಬ್ಬರೂ ಆಗಮಿಸಿ ಯಶಸ್ವಿಗೊಳಿಸಬೇಕೆಂದು ಕೋರಿದರು. ಒಕ್ಕೂಟದ ಮುಖಂಡರಾದ ಬಾಬುರಾವ ಪಾಸ್ವಾನ್ ಮಾತನಾಡಿದರು. ಪತ್ರಿಕಾಗೋಷ್ಠಿಯಲ್ಲಿ

ಪ್ರಮುಖರಾದ ಶ್ರೀಪತರಾವ ದೀನೆ, ಶಿವಕುಮಾರ ನೀಲಿಕಟ್ಟಿ, ಪ್ರದೀಪ ನಾಟೇಕಾರ, ಅಶೋಕ ಮಾಳಗೆ, ಪ್ರಕಾಶ ಮಾಳಗೆ, ತುಕಾರಾಮ ಲಾಡಕರ್, ಸುಧಾಕರ ರಾಜಗಿರಾ, ರಮೇಶ ಪಾಸ್ವಾನ್, ರಮೇಶ ಮಂದಕನಳ್ಳಿ, ರಾಜಕುಮಾರ ಶೇರಿಕಾರ ಸೇರಿದಂತೆ ಹಲವರಿದ್ದರು.

# ರಾಜ್ಯ ಸಿವಿಲ್ ಸೇವಾ ಹುದ್ದೆಗಳಿಗೆ ನೇರ ನೇಮಕಾತಿ

## ಅಭ್ಯರ್ಥಿಗಳ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿ ಅನ್ವಯವಾಗುವಂತೆ 3 ವರ್ಷಗಳ ಸಡಿಲಿಕೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಸೆ 29: ರಾಜ್ಯ ಸರ್ಕಾರದ ಎಲ್ಲಾ ನಾಗರಿಕ ಸೇವಾ ಹುದ್ದೆಗಳ ನೇಮಕಾತಿಯಲ್ಲಿ ಎಲ್ಲ ಪ್ರವರ್ಗಗಳ ಅಭ್ಯರ್ಥಿಗಳಿಗೆ ಮೂರು ವರ್ಷಗಳ ವಯೋಮಿತಿ ಸಡಿಲಿಕೆ ಮಾಡಿ ಸರ್ಕಾರ ಆದೇಶ ಹೊರಡಿಸಿದೆ. ಹಲವಾರು ಜನಪ್ರತಿನಿಧಿಗಳು, ಸಂಘ ಸಂಸ್ಥೆಗಳು ಸಲ್ಲಿಸಿದ ಮನವಿ ಪರಿಗಣಿಸಿ ಮುಖ್ಯಮಂತ್ರಿ ಸಿದ್ಧರಾಮಯ್ಯನವರ ಅನುಮೋದನೆಯೊಂದಿಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಇಂದು ಆದೇಶ ಪ್ರಕಟಿಸಿದೆ.

ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿ ಜಾರಿಯಾಗುವವರೆಗೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಅಥವಾ ಬ್ಯಾಕ್ ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ಮುಂದಿನ ಆದೇಶದವರೆವಿಗೂ ಹೊರಡಿಸಬಾರದೆಂದು ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಸೂಚಿಸಲಾಗಿತ್ತು.

ನ್ಯಾಯಮೂರ್ತಿ ಹೆಚ್. ಎನ್. ನಾಗಮೋಹನ್ ದಾಸ್ ಆಯೋಗದ ವರದಿಯನ್ನು ಅಗತ್ಯ ಮಾರ್ಪಾಡುಗಳೊಂದಿಗೆ ಅಂಗೀಕರಿಸಿ, ಪರಿಶಿಷ್ಟ ಜಾತಿಯಲ್ಲಿರುವ 101 ಜಾತಿಗಳನ್ನು 5 ಪ್ರವರ್ಗಗಳ ಬದಲಾಗಿ ಪ್ರವರ್ಗ–ಎ, ಪ್ರವರ್ಗ–ಬಿ ಮತ್ತು ಪ್ರವರ್ಗ–ಸಿ ಎಂದು 3 ಪ್ರವರ್ಗಗಳಾಗಿ ವರ್ಗೀಕರಿಸಿ, ಶಿಕ್ಷಣ ಮತ್ತು ಉದ್ಯೋಗದಲ್ಲಿ ಪ್ರಸ್ತುತ ಜಾರಿಯಲ್ಲಿರುವ ಶೇಕಡ 17 ರಷ್ಟು ಮೀಸಲಾತಿಯನ್ನು ಪ್ರವರ್ಗ–ಎ ರಲ್ಲಿನ ಸಮುದಾಯಗಳಿಗೆ ಶೇಕಡ 6 ರಷ್ಟು, ಪ್ರವರ್ಗ–ಬಿ ರಲ್ಲಿನ ಸಮುದಾಯಗಳಿಗೆ ಶೇಕಡ 6 ರಷ್ಟು ಮತ್ತು ಪ್ರವರ್ಗ – ಸಿ ರಲ್ಲಿನ ಸಮುದಾಯಗಳಿಗೆ ಶೇಕಡ 5 ರಷ್ಟು ನಿಗದಿಪಡಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಲಾಗಿರುತ್ತದೆ.

ಈ ಹಿಂದೆ ನೇರ ನೇಮಕಾತಿ ಪ್ರಕ್ರಿಯೆಯಲ್ಲಿ ಆಯ್ಕೆ ಬಯಸಿ ಅರ್ಜಿಗಳನ್ನು ಸಲ್ಲಿಸಿ ಭಾಗವಹಿಸುವ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಗೆ ಕ್ರಮವಾಗಿ 2 ವರ್ಷಗಳ ಸಡಿಲಿಕೆ ನೀಡಲು ತೀರ್ಮಾನಿಸಲಾಗಿರುತ್ತು. ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸುವ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ (as a one-time measure) 2 ವರ್ಷಗಳ ಸಡಿಲಿಕೆ ನೀಡಿ ಆದೇಶಿಸಲಾಗಿತ್ತು.

ಆದರೆ ಹಲವಾರು ಜನಪ್ರತಿನಿದಿಗಳು ಮತ್ತು ಸಂಘ ಸಂಸ್ಥೆಗಳು ಮನವಿ ಸಲ್ಲಿಸಿ ರಾಜ್ಯ ಸಿವಿಲ್ ಸೇವೆಗಳಿಗೆ ಮಾಡುವ ನೇರ ನೇಮಕಾತಿಯಲ್ಲಿ ಗರಿಷ್ಠ ವಯೋಮಿತಿಯಲ್ಲಿ 5 ವರ್ಷಗಳ ಸಡಿಲಿಕೆಯನ್ನು ನೀಡುವಂತೆ ಕೋರಿದ್ದರು.

ಸದರಿ ಮನವಿಗಳನ್ನು ಸರ್ಕಾರವು ಪರಿಶೀಲಿಸಿ ಒಂದು ಬಾರಿಗೆ ಮಾತ್ರ ವಯೋಮಿತಿಯಲ್ಲಿ 3 ವರ್ಷಗಳ ಸಡಿಲಿಕೆ ನೀಡಲು ತೀರ್ಮಾನಿಸಿ, ದಿನಾಂಕ: 06.09.2025ರ ಆದೇಶದ ಹಿಂಪಡೆದು, ಈ ಆದೇಶ ಹೊರಡಿಸಿದ

ದಿನಾಂಕದ ನಂತರ ಮುಂದಿನ ದಿನಾಂಕ 31–12–2027 ರವರೆಗೆ ನೇರ ನೇಮಕಾತಿಗಾಗಿ ಅರ್ಜಿಗಳನ್ನು ಗಳನ್ನು ಆಹ್ವಾನಿಸಿ ಹೊರಡಿಸುವ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ

ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ (as a one-time measure) 3 ವರ್ಷಗಳ ಸಡಿಲಿಕೆ ನೀಡಿ ಆದೇಶಿಸಲಾಗಿದೆ ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, (ಸೇವಾ ನಿಯಮಗಳು) ಆದೇಶ ಹೊರಡಿಸಿದೆ.


# ಪ್ರವಾಹ ಪೀಡಿತ ಪ್ರದೇಶಗಳಿಗೆ ಬಿ.ವೈ. ವಿಜಯೇಂದ್ರ ಭೇಟಿ; ತಕ್ಷಣ ಪರಿಹಾರಕ್ಕೆ ಆಗ್ರಹ



ಬೀದರ. ಸೆ. 29 : ಭಾರೀ ಮಳೆ ಮತ್ತು ಮಹಾರಾಷ್ಟ್ರ ಜಲಾಶಯಗಳಿಂದ ನೀರು ಬಿಡುಗಡೆಯಿಂದಾಗಿ ಬೀದರ್ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಸೋಮವಾರ ಪಕ್ಷದ ಹಿರಿಯ ನಾಯಕರೊಂದಿಗೆ ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿದರು.

ಂಟಖ ಜೊತೆ ಮಾತನಾಡಿದ ಬಿ.ವೈ. ವಿಜಯೇಂದ್ರ, "ನಾನು, ನಮ್ಮ ಎಲ್‌ಒಪಿ ಛಲವಾದಿ ನಾರಾಯಣಸ್ವಾಮಿ, ನಮ್ಮ ಹಿರಿಯ ಶಾಸಕರು ಮತ್ತು ಮಾಜಿ ಸಚಿವ ಪ್ರಭು ಚೌಹಾಣ್ ಅವರೊಂದಿಗೆ ಬೀದರ್‌ನ ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡುತ್ತಿದ್ದೇವೆ. ಮಹಾರಾಷ್ಟ್ರ ಜಲಾಶಯಗಳಿಂದ ನೀರು ಬಿಡುಗಡೆ ಮಾಡಿರುವುದರಿಂದ ಭಾರೀ ಮಳೆಯಿಂದಾಗಿ ರೈತರು ತೀವ್ರ ಸಂಕಷ್ಟದಲ್ಲಿದ್ದಾರೆ" ಎಂದರು. ಪ್ರವಾಹದಿಂದ ಹಾನಿಗೊಳಗಾದ ರೈತರು ಮತ್ತು ಕುಟುಂಬಗಳಿಗೆ ತಕ್ಷಣ ಪರಿಹಾರ ಬಿಡುಗಡೆ ಮಾಡಬೇಕು ಎಂದು ವಿಜಯೇಂದ್ರ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಒತ್ತಾಯಿಸಿದರು. "ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರವು ಸಂತ್ರಸ್ತ ರೈತರು ಮತ್ತು ಮನೆ ಕಳೆದುಕೊಂಡ ಜನರಿಗೆ ಪರಿಹಾರ ಒದಗಿಸಲು ತಕ್ಷಣ ಕ್ರಮ ಕೈಗೊಳ್ಳಬೇಕೆಂದು ನಾವು ಒತ್ತಾಯಿಸುತ್ತೇವೆ. ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದಾಗ ತೀವ್ರ ಪ್ರವಾಹ ಉಂಟಾಗಿತ್ತು ಮತ್ತು ಅವರು ಕೇಂದ್ರ ಸರ್ಕಾರದ ಹಣಕ್ಕಾಗಿ ಕಾಯದೆ ಕರ್ನಾಟಕದಾದ್ಯಂತ ಪ್ರಯಾಣಿಸಿ, ತಕ್ಷಣವೇ ಪರಿಹಾರವನ್ನು ಬಿಡುಗಡೆ ಮಾಡಿದ್ದರು. ಸಿದ್ದರಾಮಯ್ಯ ಅವರು ಅದೇ ರೀತಿ ವರ್ತಿಸಬೇಕೆಂದು ನಾನು ಒತ್ತಾಯಿಸುತ್ತೇನೆ" ಎಂದು ವಿಜಯೇಂದ್ರ ಹೇಳಿದರು. ಏತನ್ಮಧ್ಯೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ (RDPR) ಸಚಿವ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಜಿಲ್ಲೆಯ ಮಳೆ ಮತ್ತು ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಸ್ಥಳೀಯರು ಮತ್ತು ಸಂತ್ರಸ್ತ ಜನರ ಕುಂದುಕೊರತೆಗಳನ್ನು ಆಲಿಸಿದರು ಎಂದು RDPR ಇಲಾಖೆಯ ಸಾರ್ವಜನಿಕ ಸಂಪರ್ಕ ಅಧಿಕಾರಿ (PRO) ತಿಳಿಸಿದ್ದಾರೆ.

# ಬಸವ ದಳಕ್ಕೆ ವೀರಶೆಟ್ಟಿ ಪಾಟೀಲ ನೇಮಕ



ಮಲ್ಲಮ್ಮ ನುಡಿ ವಾರ್ತೆ ಬೀದರ. ಸೆ. 29 :ರಾಷ್ಟ್ರೀಯ ಬಸವ ದಳದ ಬೀದರ್ ನಗರ ಘಟಕದ ಪ್ರಧಾನ ಕಾರ್ಯದರ್ಶಿಯಾಗಿ ವೀರಶೆಟ್ಟಿ ಪಾಟೀಲ ಮರಕಲ್ ಅವರನ್ನು ನೇಮಕ ಮಾಡಲಾಗಿದೆ. ಬಸವಕಲ್ಯಾಣದಲ್ಲಿ ನಡೆದ 24ನೇ ಕಲ್ಯಾಣ ಪರ್ವದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಸಿದ್ಧರಾಮೇಶ್ವರ ಸ್ವಾಮೀಜಿ ಈ ನೇಮಕ ಮಾಡಿದರು. ಬಸವ ದಳದ ರಾಜ್ಯ ಅಧ್ಯಕ್ಷ ಕೆ. ವೀರೇಶ ಅವರು ವೀರಶೆಟ್ಟಿ ಪಾಟೀಲ ಅವರಿಗೆ ಷಟ್‌ಸ್ಥಲ ಧ್ವಜ ನೀಡಿ ಸ್ವಾಗತಿಸಿದರು. ಬಸವಕುಮಾರ ಸ್ವಾಮಿ, ಮಾತೆ ಲಾವಣ್ಯ, ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಸುರೇಶ ಸ್ವಾಮಿ, ಮುಖಂಡರಾದ ಶಿವರಾಜ ನರಶೆಟ್ಟಿ, ರಾಜೇಂದ್ರಕುಮಾರ ಗಂದಗೆ, ಕಂಟೆಪ್ಪ ಗಂದಿಗುಡಿ, ಗಣೇಶ ಬಿರಾದಾರ, ಜಗದೀಶ್ ಪಾಟೀಲ, ಸಂಗಮೇಶ ಜವಾದಿ, ಅರವಿಂದ ಧುಮ್ಮನಸೂರೆ, ವಿಲಾಸ್ ಪಾಟೀಲ ಹಕ್ಯಾಳ್, ಶಿವಶರಣಪ್ಪ ವಲ್ಲೇಪುರೆ, ರವೀಂದ್ರ ಕೊಳಕೂರ ಮತ್ತಿತರರು ಇದ್ದರು.

# ಜನತೆಯ ಸಂಕಷ್ಟ ನಿವಾರಣೆಗೆ ಪ್ರಾರ್ಥನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಸೆ.29:ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಸೆ.28ರಂದು ಮಹಾರಾಷ್ಟ್ರ ರಾಜ್ಯದ ಪ್ರಸಿದ್ಧ ದೇವಸ್ಥಾನ ತುಳಜಾಪುರಕ್ಕೆ ಕುಟುಂಬಸ್ಥರು ಮತ್ತು ಆತ್ಮೀಯರೊಂದಿಗೆ ತೆರಳಿ ಮಾತಾ ಅಂಬಾ ಭವಾನಿ ದೇವಿಯ ದರ್ಶನ ಪಡೆದರು.

ಮಂದಿರಕ್ಕೆ ಭೇಟಿ ನೀಡುತ್ತಿದ್ದಂತೆ ದೇವಸ್ಥಾನದ ಆಡಳಿತ ಮಂಡಳಿಯವರು ಶಾಸಕರನ್ನು ಶಾಲು ಹೊದಿಸಿ ಹೂಗುಚ್ಛ ನೀಡಿ ಆತ್ಮೀಯವಾಗಿ ಸ್ವಾಗತಿಸಿದರು. ನಂತರ ಶಾಸಕರು ಕುಟುಂಬಸ್ಥರು, ಔರಾದ(ಬಿ) ಹಾಗೂ ಕಮಲನಗರ ತಾಲ್ಲೂಕಿನ ನೂರಾರು ಆತ್ಮೀಯರೊಂದಿಗೆ ತುಳಜಾಭವಾನಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ, ಕ್ಷೇತ್ರದ ಮಹಾಜನತೆ ಹಿಂದೆಂದು ಕಂಡು ಕೇಳರಿಯದಷ್ಟು ತೊಂದರೆ ಅನುಭವಿಸುತ್ತಿದ್ದಾರೆ. ಎಲ್ಲರ ಮೇಲೆ ಕೃಪೆ ತೋರಿಸಬೇಕು. ಸಂಕಷ್ಟಗಳು ದೂರವಾಗಿ ಎಲ್ಲರಿಗೂ ಸುಖ, ಸಮೃದ್ಧಿ, ನೆಮ್ಮದಿ ನೀಡುವಂತೆ ಬೇಡಿಕೊಂಡರು. ಈ ವೇಳೆ ಮಾತನಾಡಿದ ಶಾಸಕರು, ಮಹಾರಾಷ್ಟ್ರದ ತುಳಜಾಪುರದಲ್ಲಿ ನೆಲೆಸಿರುವ ಮಾತಾ ಅಂಬಾ ಭವಾನಿ ದೇವಿಯು ಅತ್ಯಂತ ಶಕ್ತಿಶಾಲಿ ದೇವರಾಗಿದ್ದಾರೆ. ಕರ್ನಾಟಕ, ತೆಲಂಗಾಣಾ, ಆಂಧ್ರ, ಮಹಾರಾಷ್ಟ್ರ ಸೇರಿದಂತೆ ದೇಶದ ಮೂಲೆ ಮೂಲೆಗಳಿಂದ ಭಕ್ತರು ತುಳಜಾಪುರಕ್ಕೆ ಭೇಟಿ ನೀಡಿ ಪುನೀತರಾಗುತ್ತಾರೆ. ಮಾತೆಯ ಭಕ್ತನಾಗಿರುವ ನಾನು ದಸರಾ ಹಬ್ಬದ ಸಂದರ್ಭದಲ್ಲಿ ಪ್ರತಿ ವರ್ಷ ತುಳಜಾಪುರಕ್ಕೆ ಭೇಟಿ ನೀಡಿ, ಜನತೆಯ ಒಳಿತಿಗೆ ಪ್ರಾರ್ಥಿಸುತ್ತೇನೆ. ಕುಟುಂಬಸ್ಥರು, ಕ್ಷೇತ್ರದ ಮುಖಂಡರು, ಕಾರ್ಯಕರ್ತರೊಂದಿಗೆ ಬಂದು ದೇವಿಯ ದರ್ಶನ ಪಡೆಯುವುದು ಸಂತೋಷ ಕೊಡುತ್ತದೆ. ಕಳೆದೆರಡು ತಿಂಗಳಿಂದ ನಿರಂತರ ಮಳೆಯಾಗುತ್ತಿದ್ದು, ರೈತರು ಸಾಕಷ್ಟು ಕಷ್ಟಪಟ್ಟು ಬೆಳೆಸಿದ ಬೆಳೆಗಳೆಲ್ಲ ನೀರುಪಾಲಾಗಿವೆ. ಜನ–ಜಾನುವಾರುಗಳು ತೀವ್ರ ತೊಂದರೆ ಎದುರಿಸುತ್ತಿದ್ದಾರೆ. ಮಳೆಯ ಅರ್ಭಟ ಬೇಗ ನಿಲ್ಲಬೇಕು. ಎಲ್ಲರ ಸಂಕಷ್ಟಗಳನ್ನು ದೂರ ಮಾಡಬೇಕೆಂದು ದೇವರಲ್ಲಿ ಬೇಡಿಕೊಂಡಿದ್ದೇನೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮುಖಂಡರಾದ ರಾಮಶೆಟ್ಟಿ ಪನ್ನಾಳೆ, ಧೊಂಡಿಬಾ ನರೋಟೆ, ಸಚಿನ ರಾಠೋಡ, ಪ್ರವೀಣ ಕಾರಬಾರಿ, ಶೇಷರಾವ ಕೋಳಿ, ಭರತ ಕದಮ್, ಯೋಗೇಶ ಪಾಟೀಲ, ಬಾಲಾಜಿ ಠಾಕೂರ್, ಮಂಜು ಸ್ವಾಮಿ, ರವೀಂದ್ರರೆಡ್ಡಿ ಉಜನಿ, ಉದಯ ಸೋಲಾಪೂರೆ, ಬಂಟಿ ರಾಂಪೂರೆ, ವೀರು ರಾಜಪೂರೆ, ಗಣೇಶ ಕಾರೆಗಾವೆ, ಅಶೋಕ ಅಲ್ಮಾಜೆ, ಗುರುನಾಥ ರಾಜಗೀರಾ, ಗೋರಖನಾಥ ಕುಂಬಾರ, ಸತೀಷ ಬಿರಾದಾರ ಸೇರಿದಂತೆ ಇತರರಿದ್ದರು.

# ವಿಶ್ವ ರೇಬೀಸ್ ದಿನದ ಆಚರಣೆ




ಬೀದರ. ಸೆ. 29 : ಪ್ರಸ್ತುತ ವಿಷಯಕ್ಕೆ ಸಂಬಂಧಿಸಿದಂತೆಣಟಿ ಜಜಜುಟಿಜಜವಿಶ್ವಾದ್ಯಂತ 2030ರ ಒಳಗಾಗಿ ಮಾನವರಲ್ಲಿ ಶ್ವಾನ ಮುಖೇನ ಹರಡುವ ಹುಚ್ಚುನಾಯಿ ರೋಗ ತಡೆಗಟ್ಟುವ ನೀಟ್ಟಿನಲ್ಲಿ ಪ್ರತಿ ವರ್ಷ ಸೆಪ್ಟೆಂಬರ್ 28ರ ತಾರೀಖಿನಂದು "ಲೂಯಿಸ್ ಪ್ಯಾಶರ್‌ರವರ" ಪುಣ್ಯಸ್ಮರಣೆ ಅಂಗವಾಗಿ ವಿಶ್ವ ಹುಚ್ಚು ನಾಯಿ ರೋಗ ದಿನ ಆಚರಿಸಲಾಗುತ್ತಿದೆ. ಹೀಗಾಗಿ ಬೀದರನ ಪಶುವೈದ್ಯಕೀಯ ಮಹಾವಿದ್ಯಾಲಯದಲ್ಲಿ ದಿನಾಂಕ 29–09–2025 ರಂದು ಒಟ್ಟು ಮೂರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಯಿತು. ಬೀದರನ ವೈದ್ಯಕೀಯ ವಿಜ್ಞಾನಗಳ ಮಹಾವಿದ್ಯಾಲಯದ ಸಹಯೋಗದೊಂದಿಗೆ 75 ಭೋಧಕ, ಭೋಧಕೇತರ ಮತ್ತು ವಿದ್ಯಾರ್ಥಿಗಳಿಗೆ ಉಚಿತವಾಗಿ ಹುಚ್ಚು ನಾಯಿ ರೋಗ ಲಸಿಕೆ ನೀಡಲಾಯಿತು. ಎರಡನೇ ಕಾರ್ಯಕ್ರಮದಡಿಯಲ್ಲಿ ಪಶು ಆರೋಗ್ಯ ಮತ್ತು ಜೈವಿಕ ಸಂಸ್ಥೆ ಬೆಂಗಳೂರು ಮತ್ತು ಹಳೆ ವಿದ್ಯಾರ್ಥಿ ಸಂಘದ ಸಂಯುಕ್ತಾಶ್ರದಲ್ಲಿ ಸುಮಾರು 40 ಶ್ವಾನಗಳಿಗೆ ಉಚಿತ ಹುಚ್ಚು ನಾಯಿ ಲಸಿಕೆ ನೀಡಲಾಯಿತು. ತದನಂತರ ಪ್ರಸ್ತುತ ವರ್ಷದ ಹುಚ್ಚು ನಾಯಿ ರೋಗ ದಿನ ಧ್ಯೇಯವಾಕ್ಯ "ಈಗಾಗಲೇ ಕಾರ್ಯನಿರ್ವಹಿಸಿ: ನೀವು ನಾವು ಮತ್ತು ಸಮುದಾಯ" ಎಂಬ ಶೀರ್ಷಿಕೆಯಡಿ ಡಾ. ವೀವೇಕ ಆರ್ ಕಸರಳ್ಳಿಕರ ರವರು ಸಂಪನ್ಮೂಲ ವ್ಯಕ್ತಗಳಾಗಿ ಮಾತನಾಡಿದ ಅವರು ಹುಚ್ಚು ನಾಯಿ ರೋಗವನ್ನು ತಡೆಗಟ್ಟಬೇಕಾದರೆ ಪ್ರತಿಯೊಬ್ಬ ವ್ಯಕ್ತಿ ಅಂದರೆ ನಾನು, ನೀವು ಎಲ್ಲರೂ ಒಟ್ಟಾಗಿ ಕೆಲಸ ನಿರ್ವಹಿಸಿದರೆ ಮಾತ್ರ ಹುಚ್ಚು ನಾಯಿ ರೋಗ ತಡೆಗಟ್ಟಲು ಸಾಧ್ಯವೆಂದು ತಿಳಿಸಿದರು. ಇದೆ ಸಂದರ್ಭದಲ್ಲಿ ಮಹಾವಿದ್ಯಾಲಯದ ಡೀನ್‌ರವರಾದ ಡಾ. ಎಮ್.ಕೆ.ತಾಂದಳೆ ರವರು ಮಾತನಾಡಿ ಶ್ವಾನಗಳಿಗೆ ಲಸಿಕೆ ಹಾಕುವಾಗ ವಹಿಸಬೇಕಾದ ಕ್ರಮಗಳ ಬಗ್ಗೆ ವಿಸ್ತ್ರತವಾಗಿ ತಿಳಿಸಿದರು. ಡಾ.ಭಗವಂತಪ್ಪರವರ ಸ್ವಾಗತಿಸಿದರು, ಡಾ. ಸಂಜೀವಕುಮಾರರವರು ವಂದಿಸಿದರು ಮತ್ತು ಡಾ. ಮಲ್ಲಿನಾಥ ಕೆ.ಸಿ ರವರು ಕಾರ್ಯಕ್ರಮ ನಿರೂಪಿಸಿದರು. ಮಹಾವಿದ್ಯಾಲಯದ ಎಲ್ಲ ಶಿಕ್ಷಕ, ಶಿಕ್ಷಕೇತರ, ವಿದ್ಯಾರ್ಥಿಗಳು ಭಾಗವಹಿಸಿದರು.

# ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರಪಟ್ಟಿಸಿದ್ಧಪಡಿಸಲು ವೇಳಾಪಟ್ಟಿ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ

ಬೀದರ,ಸೆ.29: ಭಾರತ ಚುನಾವಣಾ ಆಯೋಗವು ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರನ್ನು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ನೋಂದಣಾಧಿಕಾರಿಯನ್ನಾಗಿ ಹಾಗೂ ಈ ಚುನಾವಣಾ ಕ್ಷೇತ್ರ ವ್ಯಾಪ್ತಿಗೊಳಪಡುವ ವಿಭಾಗದ ಎಲ್ಲಾ ಜಿಲ್ಲಾಧಿಕಾರಿಗಳನ್ನು, ಆಯುಕ್ತರು ಮಹಾನಗರ ಪಾಲಿಕೆ ಕಲಬುರಗಿ / ಹಾಗೂ ಬಳ್ಳಾರಿ, ಕಲಬುರಗಿ ವಿಭಾಗದ ಆಯಾ ಉಪ ವಿಭಾಗಕ್ಕೆ ಸಂಬಂಧಪಟ್ಟ ಎಲ್ಲಾ ಸಹಾಯಕ ಆಯುಕ್ತರು, ವಿಭಾಗದ ಎಲ್ಲಾ ಸಂಬಂಧಪಟ್ಟ ತಾಲೂಕಿನ ತಹಸೀಲ್ದಾರರನ್ನು ಸಹಾಯಕ ಮತದಾರರ ನೊಂದಣಾಧಿಕಾರಿಯನ್ನಾಗಿ ನೇಮಿಸಿರುತ್ತದೆ. ಅರ್ಹತಾ ದಿನಾಂಕ 01–11–2025 ಕ್ಕೆ ಅನ್ವಯಿಸುವಂತೆ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯು ನೂತನವಾಗಿ ಸಿದ್ಧಪಡಿಸುವ ಕಾರ್ಯವು ಈಗಾಗಲೇ ಪ್ರಾರಂಭವಾಗಿರುತ್ತದೆ.

ಭಾರತ ಚುನಾವಣಾ ಆಯೋಗವು ದಿನಾಂಕ 12–09–2025 ರ ಪತ್ರದನ್ವಯ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯು ಹೊಸದಾಗಿ ಸಿದ್ಧಪಡಿಸಲಾಗುತ್ತಿರುವುದರಿಂದ ಈ ಹಿಂದಿನ ಮತದಾರರ ಪಟ್ಟಿಯಲ್ಲಿ ಹೆಸರು ಇರುವ ಮತದಾರರು ಸಹ ನಮೂನೆ 19 ರಲ್ಲಿ ಹೊಸದಾಗಿ ಅರ್ಜಿ ಸಲ್ಲಿಸಬೇಕಾಗಿರುತ್ತದೆಂದು ನಿರ್ದೇಶನ ನೀಡಿರುತ್ತಾರೆ.

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ಸಿದ್ಧಪಡಿಸಿಕೊಳ್ಳಲು ವೇಳಾಪಟ್ಟಿಯನ್ನು ನಿಗದಿಪಡಿಸಲಾಗಿದೆ: ಅರ್ಜಿ ನಮೂನೆ 19 ರಲ್ಲಿ ಅರ್ಜಿಯನ್ನು ಸ್ವೀಕರಿಸಲು ದಿನಾಂಕ: 06–11–2025 ಕೊನೆಯ ದಿನವಾಗಿದೆ. ಕರಡು ಮತದಾರರ ಪಟ್ಟಿ ಪ್ರಕಟಣೆ ದಿನಾಂಕ: 25–11–2025, ಹಕ್ಕು ಮತ್ತು ಆಕ್ಷೇಪಣೆಗಳಿಗಾಗಿ ದಿನಾಂಕ: 25–11–2025 ರಿಂದ 10–12–2025 ರವರೆಗೆ ನಿಗದಿಪಡಿಸಿದೆ. ಅಂತಿಮ ಮತದಾರರ ಪಟ್ಟಿ ಪ್ರಕಟಣೆ ದಿನಾಂಕ: 30–12–2025 ಆಗಿರುತ್ತದೆ.

ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ನೊಂದಾಯಿಸಲು ಅನುಸರಿಸಬೇಕಾದ ಮಾರ್ಗಸೂಚಿಗಳ ವಿವರ: ಭಾರತದ ಪ್ರಜೇಯಾಗಿರುವ, ಆಯಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸಾಮಾನ್ಯ ನಿವಾಸಿಯಾಗಿರುವ ಹಾಗೂ 1ನೇ ನವ್ಹೆಂಬರ್ 2025 ಕ್ಕೆ ಮೊದಲ 6 ವರ್ಷಗಳ ಅವಧಿಯಲ್ಲಿ ಸೆಕೆಂಡರಿ ದರ್ಜೆಯಲ್ಲಿ ಪ್ರೌಢ ಶಾಲೆಗಿಂತ ಕಡಿಮೆ ಇಲ್ಲದ ನಿರ್ಧಿಷ್ಟಪಡಿಸಿದಂತಹ ರಾಜ್ಯದೊಳಗಿನ ಯಾವುದೇ ಸರ್ಕಾರದಿಂದ ಮಾನ್ಯತೆ ಪಡೆದ ಶೈಕ್ಷಣಿಕ ಸಂಸ್ಥೆಗಳಲ್ಲಿ ಒಟ್ಟು ಕನಿಷ್ಠ 3 ವರ್ಷ ಬೋಧನಾ ವೃತಿಯಲ್ಲಿ ನಿರತವಾಗಿರುವ ಪ್ರತಿಯೊಬ್ಬ ವ್ಯಕ್ತಿಯು ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ಸೇರಿಸಲು ಅರ್ಹನಾಗಿರುತ್ತಾನೆ. ಹಾಗೆ ನಿರ್ಧಷ್ಟಪಡಿಸಿದ ಶೈಕ್ಷಣಿಕ ಸಂಸ್ಥೆಗಳ ಪಟ್ಟಿಯು ಮೊದಲನೇ ಅನುಸೂಚಿಯಲ್ಲಿ ತಿಳಿಸಲಾದ ಅಧಿಕಾರಿಗಳ ಬಳಿ ಇರುತ್ತದೆ.

ಖುದ್ದಾಗಿ ಅಥವಾ ಅಂಚೆ ಮುಖಾಂತರ ಒಟ್ಟಾರೆ–ಯಾಗಿ ಸಲ್ಲಿಸಿದ ಅರ್ಜಿಗಳನ್ನು ಮತದಾರರ ನೋಂದಣಾಧಿಕಾರಿಯು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗಾಗಿ ಪರಿಗಣಿಸತಕ್ಕದ್ದಲ್ಲ. ಆದರೆ ಸಂಸ್ಥೆಯ ಮುಖ್ಯಸ್ಥರು ಅವರ ಸಿಬ್ಬಂದಿಯವರ ಎಲ್ಲಾ ಅರ್ಜಿಗಳನ್ನು ಒಟ್ಟಾಗಿ ಮತದಾರರ ನೋಂದಣಾಧಿಕಾರಿಗಳಿಗೆ ಕಳುಹಿಸಬಹುದು. ಒಂದೇ ಕುಟಂಬದ ಎಲ್ಲಾ ಸದಸ್ಯರು ನಮೂನೆ 19 ರಲ್ಲಿ ಅರ್ಜಿಗಳನ್ನು ಕುಟುಂಬ ಯಾವುದಾದರೂ ಸದಸ್ಯರು ಸಲ್ಲಿಸಬಹುದು ಹಾಗೂ ಪ್ರತಿ ಸದಸ್ಯನಿಗೆ ಸಂಬಂಧಿಸದಂತೆ ಮೂಲ ಪ್ರಮಾಣ ಪತ್ರಗಳನ್ನು ಒದಗಿಸಿ, ಪ್ರಮಾಣ ಪತ್ರವನ್ನು ಪರಿಶೀಲಿಸಿಕೊಳ್ಳತಕ್ಕದ್ದು.

ಅರ್ಜಿಯಲ್ಲಿನ ತಪ್ಪು ಅಥವಾ ತಪ್ಪೆಂದು ಅವನು ತಿಳಿದಿರುವ ಅಥವಾ ನಂಬುವಂತಹ ಅಥವಾ ಸತ್ಯವೆಂದು ನಂಬಲಾಗದಿರುವಂತಹ ಹೇಳಿಕೆಗಳನ್ನು ಅಥವಾ ಘೋಷಣೆಗಳನ್ನು ಮಾಡುವ ಯಾವುದೇ ವ್ಯಕ್ತಿಯನ್ನು ಪ್ರಜಾಪ್ರಾತಿನಿಧ್ಯ ಅಧಿನಿಯಮ 1950 ರ 31ನೇ ಪ್ರಕರಣದ ಮೇರೆಗೆ ಶಿಕ್ಷೆಗೆ ಗುರಿಪಡಿಸಲಾಗುವುದೆಂಬುದನ್ನು ಗಮನಿಸತಕ್ಕದ್ದು. ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಬಯಸುವ ಪ್ರತಿಯೊಬ್ಬರು ಅರ್ಜಿ ನಮೂನೆ 19 ನ್ನು ಭರ್ತಿ ಮಾಡಿ ಅದರೊಂದಿಗೆ ಶೈಕ್ಷಣಿಕ ಸಂಸ್ಥೆಗಳಲ್ಲಿ 1ನೇ ನವ್ಹೆಂಬರ್ 2025 ಕ್ಕೆ ಮೊದಲು 6 ವರ್ಷಗಳ ಅವಧಿಯಲ್ಲಿ ಒಟ್ಟು ಕನಿಷ್ಟ 3 ವರ್ಷ ಭೋದನಾ ವೃತಿಯಲ್ಲಿ ನಿತವಾಗಿರುವ ಬಗ್ಗೆ ಶೈಕ್ಷಣಿಕ ಸಂಸ್ಥೆಗಳಿಂದ ಅನುಬಂಧ–2 ರಲ್ಲಿ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು. ಯಾವುದೇ ವ್ಯಕ್ತಿ ಅಂಚೆ ಮೂಲಕ ಮತದಾರರ ನೋಂದಣಾಧಿಕಾರಿಗಳು, ಸಹಾಯಕ ಮತದಾರರ ನೋಂದಣಾಧಿಕಾರಿಗಳು, ಗೊತ್ತುಪಡಿಸಿದ ಅಧಿಕಾರಿಗೆ ಸಲ್ಲಿಸಿದಲ್ಲಿ ಅಂತಹ ಅರ್ಜಿದಾರರಿಗೆ ಗೊತ್ತು ಪಡಿಸಿದ ಅಧಿಕಾರಿಯು ವಿಚಾರಣೆಗೆ ಹಾಜರಾಗಲು ನೋಟಿಸ್ ನೀಡುತ್ತಾರೆ. ವಿಚಾರಣೆಗೆ ಹಾಜರಾಗದೇ ಅಥವಾ ದಾಖಲೆಗಳನ್ನು ಹಾಜರುಪಡಿಸದಿದ್ದಲ್ಲಿ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಬಲ್ಕ (ಗುಚ್ಛಗಳಲ್ಲಿ) ಅರ್ಜಿಗಳನ್ನು ಸ್ವೀಕರಿಸುವುದಿಲ್ಲ. ಆಯೋಗವು ಮುಂಬರುವ ದಿನಗಳಲ್ಲಿ ಸದರಿ ನಮೂನೆ 19 ರ ಅರ್ಜಿಗಳನ್ನು ಇಖಬಿಖ ನಲ್ಲಿ ಅಳವಡಿಸಲು ಉದ್ದೇಶಿಸಿರುತ್ತಾರೆ. ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತದ ಮತದಾರರ ಪಟ್ಟಿ ಸಿದ್ಧಪಡಿಸಿಕೊಳ್ಳುವ ಕುರಿತು ಹಾಗೂ ಚುನಾವಣಾ ಪೂರ್ವ ತಯಾರಿ ಮಾಡಿಕೊಳ್ಳುವಂತೆ ವಿಭಾಗದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಮತ್ತು ಸಂಬಂಧಪಟ್ಟವರಿಗೆ ಈ ಕಾರ್ಯಾಲಯದಿಂದ ನಿರ್ದೇಶನ ನೀಡಲಾಗಿದೆ. ಕರ್ನಾಟಕ ಈಶಾನ್ಯ ಶಿಕ್ಷಕರ ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳು ಇದ್ದಲ್ಲಿ ಮತದಾರರ ನೊಂದಣಾಧಿಕಾರಿಗಳು ಹಾಗೂ ಸಹಾಯಕ ಮತದಾರರ ನೊಂದಣಾಧಿಕಾರಿಗಳ ಕಚೇರಿಯಲ್ಲಿ ಮತ್ತು ಸಂಬಂಧಪಟ್ಟ ವಿಧಾನಸಭಾ ಮತಕ್ಷೇತ್ರದ ಸಹಾಯಕ ಮತದಾರರ ನೊಂದಣಾಧಿಕಾರಿಗಳ ಕಾರ್ಯಾಲಯದಲ್ಲಿ (ಮಹಾನಗರ ಪಾಲಿಕೆ ಹಾಗೂ ತಹಸೀಲ ಕಾರ್ಯಾಲಯದಲ್ಲಿ) ನಿಗದಿಪಡಿಸಿದ ಕಾಲಮಿತಿಯೊಳಗೆ ಸಲ್ಲಿಸತಕ್ಕದ್ದು. ಅರ್ಹ ಶಿಕ್ಷಕರು ಹೆಚ್ಚಿನ ಆಸಕ್ತಿ ವಹಿಸಿ ಈ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೊಂದಾಯಿಸಿಕೊಂಡು, ಸುಭದ್ರ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಸಕ್ರೀಯವಾಗಿ ಪಾಲ್ಗೊಳ್ಳಬೇಕೆಂದು ಎಲ್ಲಾ ಅರ್ಹ ಮತದಾರರಲ್ಲಿ ಜಹೀರಾ ನಸೀಮ, ಚುನಾವಣಾಧಿಕಾರಿ, ಮತದಾರ ನೋಂದಣಾಧಿಕಾರಿ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರ ಹಾಗೂ ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ, ಕಲಬುರಗಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯದ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಪ್ರವಾಸ

ಕಲಬುರಗಿ,ಸೆ.29–ರಾಜ್ಯದ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವರಾದ ಎಂ.ಬಿ.ಪಾಟೀಲ್ ಅವರು ವಿಜಯಪುರದಿಂದ ರಸ್ತೆ ಮೂಲಕ ಸೆಪ್ಟೆಂಬರ್ 30 ರಂದು ಮಂಗಳವಾರ ಬೆಳಿಗ್ಗೆ 10.40 ಗಂ–ಟೆಗೆ ಕಲಬುರಗಿಗೆ ಆಗಮಿಸುವರು. ಮಾನ್ಯ ಮುಖ್ಯಮಂತ್ರಿಗಳು ಅಧಿಕಾರಿಗಳೊಂದಿಗೆ ನಡೆಸುವ ಚರ್ಚೆ/ಸಭೆಯಲ್ಲಿ ಭಾಗವಹಿಸುವರು. ಮಧ್ಯಾಹ್ನ 12.30 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಕಲಬುರಗಿ ಜಿಲ್ಲೆ ಸೇರಿದಂತೆ ಮಳೆಯಿಂದ ಹಾನಿಗೊಳಗಾದ ಪ್ರದೇಶಗಳ ವೈಮಾನಿಕ ಸಮೀಕ್ಷೆಯಲ್ಲಿ ಭಾಗವಹಿಸುವರು. ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಳೆಹಾನಿ ಪ್ರದೇಶಗಳಲ್ಲಿ ಕೈಗೊಂಡಿರುವ ಪರಿಹಾರ ಕಾರ್ಯಗಳ ಕುರಿತು ಪ್ರಗತಿ ಪರಿಶೀಲನಾ ಸಭೆ ಹಾಗೂ ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸುವರು. ಸಂಜೆ 4.25 ಗಂಟೆಗೆ ಮಾನ್ಯ ಮುಖ್ಯಮಂತ್ರಿಗಳೊಂದಿಗೆ ಕಲಬುರಗಿಯಿಂದ ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

# ಅ.09 ರಂದು ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.29–ಜಿಲ್ಲಾಡಳಿತ,ಜಿಲ್ಲಾಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಹಿರಿಯ ನಾಗರಿಕರಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ಹಿರಿಯ ನಾಗರಿಕ ದಿನಾಚರಣೆ ಕಾರ್ಯಕ್ರಮವನ್ನು ಅ.09 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ.ಜೋಳದರಾಶಿದೊಡ್ಡನಗೌಡರಂಗಮಂದಿರದಲ್ಲಿ ಏರ್ಪಡಿಸಲಾಗಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಹಾಗೂ ಬಳ್ಳಾರಿ ಉಸ್ತುವಾರಿ ಸಚಿವರಾದ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್, ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕ ಬಿ.ನಾಗೇಂದ್ರ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಶಶೀಲ್ ನಮೋಶಿ, ವೈ.ಎಂ.ಸತೀಶ್,ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಕಾರ್ಯಕ್ರಮದಲ್ಲಿ ಶತಾಯುಶಿಗಳಿಗೆ ಸನ್ಮಾನ ಮತ್ತು ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ವಿಜೇತರಾದ ಹಿರಿಯ ನಾಗರಿಕರಿಗೆ ಬಹುಮಾನ ವಿತರಿಸಲಾಗುವುದು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್. ಹೊಸಮನೆ, ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭರಾಣಿ ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ ನಾಯಕ್, ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಕಲ್ಯಾಣಾಧಿಕಾರಿ ಗೋವಿಂದಪ್ಪ ಹೆಚ್.ಎಂ ಅವರು ತಿಳಿಸಿದ್ದಾರೆ.

# ಜಾನುವಾರು ವಿಮಾ ಯೋಜನೆಗೆ ತುಮುಲ್ ಚಾಲನೆ



**ಮಲ್ಲಮ್ಮ ನುಡಿ ವಾರ್ತೆ**

ತಿಪಟೂರು, ಸೆ. 24– ತಾಲ್ಲೂಕಿನ ಹೊನ್ನವಳ್ಳಿ ಹೋಬಳಿಯ ಕೆರೆಬಂಡಿಪಾಳ್ಯದಲ್ಲಿ ತುಮಕೂರು ಹಾಲು ಒಕ್ಕೂಟದ ವತಿಯಿಂದ ತಿಪಟೂರು ಹಾಲು ಉತ್ಪಾದಕರಿಗೆ ಜಾನುವಾರು ವಿಮಾ ಯೋಜನೆಗೆ ಚಾಲನೆ ನೀಡಲಾಯಿತು.


ಈ ಯೋಜನೆಯಡಿ ಹಾಲು ಉತ್ಪಾದಕರು ವಿಮಾ ವಂತಿಕೆಯ ಶೇಕಡಾ 40 ರಷ್ಟು, ತುಮಕೂರು ಹಾಲು ಒಕ್ಕೂಟ ಶೇಕಡಾ 40 ರಷ್ಟು ಹಾಗೂ ತುಮುಲ್ ಕಲ್ಯಾಣ ಟ್ರಸ್ಟ್ ಶೇಕಡಾ 20 ರಷ್ಟು ವೆಚ್ಚವನ್ನು ಭರಿಸಲಿದೆ.

ರಾಸುಗಳ ಕಿವಿಗೆ ವಿಮಾ ಯೋಜನೆಯ ಓಲೆ ಹಾಕುವ ಮೂಲಕ ಚಾಲನೆ ನೀಡಿದ ತಾಲ್ಲೂಕು ನಿರ್ದೇಶಕ ಮಾದಿಹಳ್ಳಿ ಪ್ರಕಾಶ್, ಹಾಲು ಉತ್ಪಾದಕರ ಆರ್ಥಿಕ ಹಿತಾಸಕ್ತಿಯನ್ನು ಕಾಪಾಡುವ ಉದ್ದೇಶದಿಂದ ಜಾರಿಗೊಂಡಿರುವ ಈ ಯೋಜನೆ, ಜಾನುವಾರು ಸಾಕಾಣಿಕೆಯಲ್ಲಿ ತೊಡಗಿರುವ ರೈತರಿಗೆ ಆರ್ಥಿಕ ಸುರಕ್ಷತೆ ನೀಡಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಇಂದಿನ ದಿನಗಳಲ್ಲಿ ರೈತರು ಹಾಲು ಉತ್ಪಾದನೆಗೆ ತುಂಬಾ ಅವಲಂಬಿತರಾಗಿದ್ದಾರೆ. ಜಾನುವಾರುಗಳು ಆಸ್ತಿ ಮಾತ್ರವಲ್ಲ, ಕುಟುಂಬದ ಬದುಕಿಗೆ ಆಧಾರವಾಗಿವೆ ಒಂದು ಜಾನುವಾರು ಸತ್ತರೆ ಕುಟುಂಬವೇ ಸಂಕ?ಕ್ಕೆ ಸಿಲುಕುತ್ತದೆ. ವಿಮೆ ಮಾಡುವುದರಿಂದ ನ?ಕ್ಕೆ ಪರಿಹಾರ ದೊರೆಯುತ್ತದೆ. ಹೀಗಾಗಿ ಪ್ರತಿಯೊಬ್ಬ ರೈತರೂ ಇದನ್ನು ಸಮರ್ಪಕವಾಗಿ ಉಪಯೋಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಜಾನುವಾರುಗಳು ಆರೋಗ್ಯ ಸಮಸ್ಯೆ, ಅಪಘಾತ ಅಥವಾ ಪ್ರಕೃತಿ ವಿಪತ್ತುಗಳಿಂದ ಸಾಯುವ ಸಂಭವ ಹೆಚ್ಚು. ವಿಮೆಯುಳ್ಳ ರೈತರಿಗೆ ಇಂತಹ ಸಂದರ್ಭಗಳಲ್ಲಿ ಆರ್ಥಿಕ ನೆರವು ಸಿಗುತ್ತದೆ. ಇದು ಕೇವಲ ಪರಿಹಾರವಲ್ಲ, ರೈತರ ಬದುಕಿಗೆ ಭದ್ರತೆ ನೀಡುವ ಒಂದು ರಕ್ಷಾಕವಚವಾಗಿದ್ದು, ಹಾಲು ಉತ್ಪಾದನೆ ಗ್ರಾಮೀಣ ಆರ್ಥಿಕತೆಯ ಪ್ರಮುಖ ಅಂಶವಾಗಿದೆ, ಹಾಲು ಮಾರಾಟದಿಂದಲೇ ಅನೇಕ ಕುಟುಂಬಗಳು ಬದುಕು ಸಾಗಿಸುತ್ತಿವೆ. ಇಂತಹ ಸಂದರ್ಭದಲ್ಲಿ ಜಾನುವಾರುಗಳ ನಷ್ಟವು ರೈತರ ಬದುಕಿಗೆ ದೊಡ್ಡ ಹೊಡೆತ ನೀಡುತ್ತದೆ. ಈ ಹಿನ್ನೆಲೆಯಲ್ಲಿ ವಿಮಾ ಯೋಜನೆಗಳನ್ನು ಜಾರಿಗೆ ತರುವುದರಿಂದ ರೈತರಿಗೆ ಭದ್ರತೆ ದೊರೆಯುತ್ತದೆ ಎಂದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಮುಖ್ಯಸ್ಥ ಕೆ.ಎಸ್.ಶ್ರೀಧರ್, ಪಶು ವೈದ್ಯ ಪ್ರಭು, ಸಂಘದ ಅಧ್ಯಕ್ಷ ಶಿವಲಿಂಗಯ್ಯ, ಉಪಾಧ್ಯಕ್ಷ ನಂಜೇಶಪ್ಪ, ಕಾರ್ಯದರ್ಶಿ ನಟೇಶ್, ಉತ್ಪಾದಕರು ಪಾಲ್ಗೊಂಡಿದ್ದರು.




ತಾಳಿಕೋಟಿ ಪಟ್ಟಣದ ಎಸ್ ಕೆ ನಗರದಲ್ಲಿ ಶ್ರೀ ಬನ್ನಿ ಮಹಾಕಾಳಿ ದೇವಸ್ಥಾನ ಸಮಿತಿ ವತಿಯಿಂದ ನವರಾತ್ರಿ ಉತ್ಸವದ ಅಂಗವಾಗಿ ಹಮ್ಮಿಕೊಂಡ ಶ್ರೀ ದೇವಿ ಮಹಾತ್ಮೆ ಮಹಾಪುರಾಣ ಕಾರ್ಯಕ್ರಮದಲ್ಲಿ ರಾಜ್ಯಮಟ್ಟದ "ಎಮಿನೆಂಟ್ ಇಂಜಿನಿಯರ್ ಅವಾರ್ಡ್" ಪ್ರಶಸ್ತಿ ಪುರಸ್ಕೃತರಾದ ವಿಶ್ವನಾಥ ಸಿ. ಬಿರಾದಾರ ಎಇಇ ಇವರನ್ನು ಸಾಮಾಜಿಕ ಕಾರ್ಯಕರ್ತ ಪ್ರವೀಣ್ ರೆಡ್ಡಿ ಇವರು ಸನ್ಮಾನಿಸಿ ಗೌರವಿಸಿದರು. ಪೂಜ್ಯ ಶ್ರೀ ರಾಜ ಗುರು ರಾಜೇಂದ್ರ ಒಡೆಯರ್ ಶಿವಾಚಾರ್ಯರು, ಸಿದ್ದರಾಮ ಶಿವಾಚಾರ್ಯರು, ಕಾಶಿಬಾಯಿ ಅಮ್ಮನವರು, ಪುರಾಣಿಕ ರಾಮಣ್ಣ ಪತ್ತಾರ, ಸಮಿತಿಯ ಸದಸ್ಯ ಸಂಗನಗೌಡ ಗಬಸಾವಳಗಿ ಇದ್ದರು. (ಮಲ್ಲಮ್ಮ ನುಡಿ ಚಿತ್ರ)

# ನೀರಲಕೇರಿ ಬಸವಲಿಂಗ ಶರಣರ ಪುಣ್ಯಭೂಮಿ : ಡಿವೈಎಸ್‌ಪಿ ಕರ್ನಾಡ



**ಮಲ್ಲಮ್ಮ ನುಡಿ ವಾರ್ತೆ**

ಲಿಂಗಸುಗೂರು, ಸೆ.29:ಅನೇಕ ತತ್ವಪದಗಳನ್ನು ರಚನೆ ಮಾಡಿದ್ದ ಮಹಾನ್ ತಪಸ್ವಿ ಬಸವಲಿಂಗ ಶರಣರು ನಡೆದಾಡಿ ವಾಸ ಮಾಡಿದ ನೀರಲಕೇರಿ ಗ್ರಾಮ ಶರಣರ ಪುಣ್ಯಭೂಮಿಯಾಗಿದೆ ಎಂದು ಡಿವೈಎಸ್‌ಪಿ ದತ್ತಾತ್ರೇಯ ಕರ್ನಾಡ ಹೇಳಿದ್ದಾರೆ.

ತಾಲೂಕಿನ ನೀರಲಕೇರಿ ಗ್ರಾಮದ ಗುರು ಪಂಚಾಕ್ಷರಿ, ಬಸಲಿಂಗ ಶ್ರೀಗಳ ಮೂಲಮಠದಲ್ಲಿ ದಸರಾ ಉತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಸಾಧಕರ ಸಮಾಗಮ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, "ತತ್ವಪದಗಳ ಮೂಲಕ ಬಸವಲಿಂಗ ಶರಣರು ಸಮಾಜದಲ್ಲಿನ ಅಂಕುಡೊಂಕುಗಳನ್ನು ತಿದ್ದಲು ಶ್ರಮಿಸಿದ್ದಾರೆ. ಶರಣರ ಸಂಸ್ಕಾರದ ಹಾದಿಯಲ್ಲಿ ಇಂದಿನ ಸಮಾಜ ಸಾಗಬೇಕು. ಪಾಪ–ಪುಣ್ಯದ ಚಿಂತನೆಗಳು ಮನುಷ್ಯನನ್ನು ಉತ್ತಮ ಹಾದಿಗೆ ಕರೆದುಕೊಂಡು ಹೋಗುತ್ತವೆ" ಎಂದು ಹೇಳಿದರು.

ಅವರು ಮುಂದುವರಿಸಿ, "ಕಲ್ಯಾಣ ಕರ್ನಾಟಕ ದಾಸರು, ಶರಣರು, ಸಂತರು, ಸೂಫಿಗಳು ನಡೆದಾಡಿದ ನೆಲವಾಗಿದೆ. ಈ ಪ್ರದೇಶದಲ್ಲಿ ಆಧ್ಯಾತ್ಮಿಕ ಶಕ್ತಿ ಅಡಗಿದೆ. ಸಮಾಜದಲ್ಲಿ ಸಂಸ್ಕೃತಿ, ಸಂಸ್ಕಾರ ಬೆಳೆಸುವ ಜೊತೆಗೆ ಯುವಪೀಳಿಗೆಗೆ ಉತ್ತಮ ಶಿಕ್ಷಣ ನೀಡುವುದು ಅಗತ್ಯ. ಮನೆಯೇ ಮೊದಲ ಪಾಠಶಾಲೆ, ತಾಯಿಯೇ ಮೊದಲ ಗುರು. ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರ ಬೆಳೆಸಲು ಪಾಲಕರು ಆದ್ಯತೆ ನೀಡಬೇಕು" ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಸಂತೆಕೆಲ್ಲೂರು ಘನಮಠದ ಗುರುಬಸವ ಶ್ರೀಗಳು, ಲಾಡ ಮೂಗಳಿ ವಿರಕ್ತಮಠದ ಅಭಿನವ ಬಸವಲಿಂಗ ಶ್ರೀ, ಕೃಷಿ ಇಲಾಖೆಯ ವಾಣಿಶ್ರೀ, ಹಿರಿಯ ನ್ಯಾಯವಾದಿ ನಾಗರಾಜ ಗಸ್ತಿ, ಪಿಡಿಓ ಬಸವರಾಜ ವಸ್ತ್ರದ, ಹುಲ್ಲಪ್ಪ ಹೆಚ್.ಜಿ, ಉಪನ್ಯಾಸಕ ಶಿವಗ್ಯಾನಪ್ಪ ಲಕ್ಕುಂದಿ, ಪತ್ರಕರ್ತರ ಸಂಘದ ಅಧ್ಯಕ್ಷ ಗುರುರಾಜ ಗೌಡೂರು, ಮುಖ್ಯಗುರು ಹೊನ್ನಪ್ಪ ಮೇಟಿ, ಷೇರಶಾ ದೋಟಿಹಾಳ, ರುದ್ರಯ್ಯ ಹಿರೇಮಠ, ಶಿಕ್ಷಕ ವಿರೇಶ, ಶಿವಕುಮಾರಯ್ಯ, ಬಸಲಿಂಗಪ್ಪ ಬಳಿಗಾರ, ರುದ್ರಪ್ಪ ಬರಿಗಂಟಿ, ಚಂದ್ರಶೇಖರ ದೇಶಮುಖ, ಬಸಲಿಂಗಪ್ಪ ಕುರಿ, ಶರಣಪ್ಪ, ಗೌಡಪ್ಪ ಪೂಜಾರಿ, ರಮೇಶ ಮೂಲಿಮನಿ, ಸಾಹೇಬರೆಡ್ಡಿ, ಶರಣಬಸವ ಕೊಡಿಹಾಳ, ಚಂದ್ರಶೇಖರ ಹಾದಿಮನಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ನವರಾತ್ರಿ ಉತ್ಸವ ಧಾರ್ಮಿಕತೆಯ ಸಂಕೇತ: ಸಿದ್ದರಾಮ ಶ್ರೀಗಳು



**ಮಲ್ಲಮ್ಮ ನುಡಿ ವಾರ್ತೆ**

ತಾಳಿಕೋಟಿ: ಭಾರತೀಯ ಸಂಸ್ಕೃತಿಯನ್ನು ಎತ್ತಿ ಹಿಡಿಯುವಲ್ಲಿ ನಾಡ ದೇವಿಯ ನವರಾತ್ರಿ ಉತ್ಸವ ಪ್ರಮುಖ ಪಾತ್ರ ವಹಿಸುತ್ತದೆ. ಜಗನ್ಮಾತೆ ದೇವಿಯು ಶಕ್ತಿಯ ಸ್ವರೂಪವಾಗಿದ್ದಾಳೆ ದುಷ್ಟರನ್ನು ಸಂಹರಿಸಿ ಶಿಷ್ಟರನ್ನು ರಕ್ಷಿಸುವ ಕಾರ್ಯ ಅವಳದ್ದಾಗಿದೆ ಇಂಥಹ ಮಹಾನ್ ಮಾತೆಯ ಚರಿತ್ರೆಯನ್ನು ತಿಳಿದುಕೊಳ್ಳಲು ಇಲ್ಲಿ ಪ್ರವಚನವನ್ನು ಹಮ್ಮಿಕೊಂಡಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದರು. ಪಟ್ಟಣದ ಎಸ್ ಕೆ ನಗರದಲ್ಲಿರುವ ಶ್ರೀ ಬನ್ನಿ ಮಹಾಕಾಳಿ ದೇವಸ್ಥಾನದ ಆವರಣದಲ್ಲಿ ನವರಾತ್ರಿ ಉತ್ಸವದ 7 ನೇ ದಿನದ ಅಂಗವಾಗಿ ಹಮ್ಮಿಕೊಂಡ ಶ್ರೀ ದೇವಿ ಮಹಾತ್ಮೆ ಪುರಾಣ ಕಾರ್ಯಕ್ರಮದ ಸಾನಿಧ್ಯವಹಿಸಿ ರವಿವಾರ ಆಶೀರ್ವಚನ ನೀಡಿದರು. ನಮ್ಮ ಪೈಕಿ ಪ್ರತಿಯೊಬ್ಬ ವ್ಯಕ್ತಿಯೂ ತನ್ನ ಜೀವನದಲ್ಲಿ ಶಾಂತಿ ಮತ್ತು ನೆಮ್ಮದಿಯನ್ನು ಬಯಸುತ್ತಾನೆ ಆದರೆ ಅದನ್ನು ಪಡೆದುಕೊಳ್ಳುವ ಮಾರ್ಗವನ್ನು ಅವನು ಕಂಡುಕೊಳ್ಳುವುದಿಲ್ಲ, ಈ ಜಗತ್ತಿಗೆ ಬಂದ ಶರಣರು ಮಹಾತ್ಮರು ಸಂತರು ನಮಗೆ ಆ ದಾರಿಯನ್ನು ತೋರಿಸಿಕೊಟ್ಟಿದ್ದಾರೆ ಅವರ ಜೀವನ ಚರಿತ್ರೆಯನ್ನು ತಿಳಿದುಕೊಳ್ಳುವ ಮೂಲಕ ನಾವು ನಮ್ಮ ಬದುಕಿನ ಸಾರ್ಥಕತೆಯನ್ನು ಕಂಡುಕೊಳ್ಳಬೇಕು ಎಂದರು. ನಾವದಗಿ ಬ್ರಹನ್ಮಠದ ಷ.ಬ್ರ. ಶ್ರೀ ರಾಜ ಗುರುರಾಜೇಂದ್ರ ಒಡೆಯರ್ ಶಿವಾಚಾರ್ಯರು ತಮ್ಮ ಆಶೀರ್ವಚನದಲ್ಲಿ ಶ್ರೀ ದೇವಿಯ ಚರಿತ್ರೆಯನ್ನು ತಿಳಿದುಕೊಳ್ಳಲು ಪ್ರವಚನ ಕಾರ್ಯಕ್ರಮವನ್ನು ಇಟ್ಟುಕೊಂಡಿರುವುದು ಈ ಬಡಾವಣೆ ಯಲ್ಲಿರುವ ಜನರ ಭಕ್ತಿ ಭಾವವನ್ನು ಎತ್ತಿ ತೋರಿಸುತ್ತದೆ ಇಲ್ಲಿ ನೀವು ಆಲಿಸುವ ಪ್ರವಚನದ ವಿಷಯಗಳನ್ನು ಜೀವನಕ್ಕೆ ಅಳವಡಿಸಿಕೊಳ್ಳಿ ಎಂದು ಸಲಹೆ ನೀಡಿದರು. ಇದೇ ಸಂದರ್ಭದಲ್ಲಿ ಇತ್ತೀಚಿಗೆ ಬೆಂಗಳೂರಿನ ಖಾಸಗಿ ವಾಹಿನಿಯಿಂದ ರಾಜ್ಯಮಟ್ಟದ ಎಮಿನೆಂಟ್ ಇಂಜಿನಿಯರ್ ಅವಾರ್ಡ್ ಪ್ರಶಸ್ತಿಗೆ ಪುರಸ್ಕೃತರಾದ ಹಂದ್ರಾಳ ಗ್ರಾಮದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ವಿಶ್ವನಾಥ ಸಿದ್ದನಗೌಡ ಬಿರಾದಾರ ಇವರನ್ನು ಸಮಿತಿ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಪುರಾಣಿಕ ರಾಮಣ್ಣ ಪತ್ತಾರ, ಸಮಿತಿಯ ಅಧ್ಯಕ್ಷರಾದ ಕಾಶಿಬಾಯಿ ಅಮ್ಮನವರು, ಗಣ್ಯರಾದ ಎಸ್.ಎನ್.ಬಸಣ್ಣವರ, ಆರ್.

ಎಸ್.ಸಿಕಳವಾಡಿ, ಬಿ.ಎಮ್. ಹಾದಿಮನಿ, ಸಿ.ಎಂ.ಹಿರೇಮಠ, ಬಾಪುಗೌಡ ಪೊಲೀಸ್ ಪಾಟೀಲ, ಆರ್. ಎಸ್.ಪಾಟೀಲ (ಕೂಚಬಾಳ), ಸಂಗನಗೌಡ ಪಾಟೀಲ, ಸಂಗನಗೌಡ ಗಬಸಾವಳಗಿ, ಗುರುನಾಥಗೌಡ ಪೊಲೀಸ್ ಪಾಟೀಲ, ಪ್ರವೀಣ್ ರೆಡ್ಡಿ, ಎಲ್.ಜಿ.ಬಾಗೆವಾಡಿ, ವಿ. ಎಲ್.ತೊಂಡಿಹಾಳ, ಎ.ಸಿ.ಪಾಟೀಲ, ಮಲ್ಲನಗೌಡ ಇಬ್ರಾಹಿಂಪೂರ, ದ್ಯಾಪೂರ ಮಲ್ಲನಗೌಡ, ಯಾಳವಾರ ಮಲ್ಲನಗೌಡ, ಸಮಿತಿಯ ಪದಾಧಿಕಾರಿಗಳು ಮತ್ತಿತರರು ಇದ್ದರು.

# ಗ್ರಾಮೀಣ ಕಲಾ ಸಂಸ್ಕೃತಿ ಮತ್ತು ಕಲಾವಿದರ ಏಳ್ಗೆಗಾಗಿ ಶ್ರಮಿಸಬೇಕಿದೆ. ಶರಣಬಸವ ಸ್ವಾಮೀಜಿ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ನಗರದ ಘಾನಘಂಟಿ ಕಲ್ಯಾಣ ಮಂಟಪದಲ್ಲಿ ಕವಿತಾ ಮಿಡಿಯಾ ಸೋರ್ಸ್, ಮಹಿಳಾ ಧ್ವನಿ ಶಿಕ್ಷಣ ಮತ್ತು ಗ್ರಾಮೀಣ ಕ್ಷೇಮಾಭಿವೃದ್ಧಿ ಸಂಸ್ಥೆಯ ವತಿಯಿಂದ ನಾಡ ಹಬ್ಬ ದಸರಾ ಪ್ರಯುಕ್ತ ದಸರಾ ದರ್ಬಾರ್ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಸಾಹಿತಿ ಡಾ.ಬಿ.ಎನ್.ಹೊರಪೇಟಿ ಕಾರ್ಯಕ್ರಮ ಕುರಿತಾಗಿ ಪ್ರಾಸ್ತಾವಿಕವಾಗಿ ಮಾತಾಡಿದರು.

ಕಾರ್ಯಕ್ರಮವನ್ನು ಪಿ.ಎಸ್.ಐ ನಾಗಪ್ಪ ಕನಕಾಪುರ ಉದ್ಘಾಟಿಸಿ ಮಾತನಾಡಿದರು. ನೆಲಮೂಲ ಸಂಸ್ಕೃತಿ ಸಂಪ್ರದಾಯ ಆಚರಣೆಯ ಪದ್ಧತಿಗಳು ಇನ್ನೂ ಗ್ರಾಮೀಣ ಭಾಗದಲ್ಲಿ ಜೀವಂತವಾಗಿದ್ದು ಯುವ ಪೀಳಿಗೆಗೆ ತಿಳಿಸುವ ಅಗತ್ಯವಿದೆ. ಕಲೆ ಕಲಾವಿದರ ಏಳ್ಗೆಗಾಗಿ ಮತ್ತು ಸಮಾಪರ ಕೆಲಸಗಳಿಂದ ಈ ಸಂಸ್ಥೆ ಚಿರಪರಿಚಿತ. ನೊಂದವರ ಧ್ವನಿಯಾಗಿ ಮಹಿಳೆ ಮತ್ತು ಮಕ್ಕಳಪರ ಇವರ ಕಾರ್ಯ ನಿಜಕ್ಕೂ ಶ್ಲಾಘನೀಯ.

ಬೀರಪ್ಪ ಅಂಡಗಿ ಮಾತನಾಡಿ ಗ್ರಾಮೀಣ ಸೊಗಡು ಮೊಬೈಲ್ ಅಬ್ಬರದಲ್ಲಿ ಮರೆಯಾಗುತ್ತಿದ್ದು ಅದನ್ನು ಉಳಿಸಿ ಬೆಳೆಸುವ ಕಾರ್ಯವನ್ನು ಮಹಿಳಾ ಧ್ವನಿ ಸಂಸ್ಥೆ ಮಾಡುತ್ತಿದೆ ಇವರ ಕಾರ್ಯ ಸಮಾಜಕ್ಕೆ ಮಾದರಿ ಎಂದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಶರಣಬಸ ಸ್ವಾಮೀಜಿ ಮಾತನಾಡಿ ಆಧುನಿಕ ಜಗತ್ತಿನಲ್ಲಿ ಸಂಸ್ಕೃತಿ ಆಚರಣೆಗಳು ಕಲಾ ಪರಂಪರೆಯು ಕ್ಷೀಣಿಸುತ್ತಿದ್ದು ಅದನ್ನು ಉಳಿಸಿ ಬೆಳೆಸುವ ಕಾರ್ಯವಾಗಬೇಕಿದೆ, ಗ್ರಾಮೀಣ ಕಲಾಸಿರಿವಂತಿಕೆಯನ್ನು ಉಳಿಸಿ ಬೆಳೆಸಬೇಕಿದೆ ಎಂದು ಮಾತನಾಡಿದರು.

40 ಕ್ಕೂ ಕಲಾವಿದರಿಂದ ಭರತನಾಟ್ಯ, ಜಾನಪದ, ನೃತ್ಯ, ಸುಗಮ ಸಂಗೀತಗಳಂತಹ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಮಕ್ಕಳಿಗೆ ಪೆನ್ನು ನೋಟಬುಕ್ ವಿತರಿಸಲಾಯಿತು. ಮಕ್ಕಳಿಗೆ ಸ್ವರ್ಣ ಬಿಂದು ಹನಿ ಹಾಕಲಾಯಿತು. ಉಚಿತ ಆಯುರ್ವೇದ ತಪಾಸಣೆ ನಡೆಸಲಾಯಿತು. ಇದೇ ವೇಳೆ ವಿವಿಧ ಕ್ಷೇತ್ರದ ಸಾಧಕರಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಭಾಗವಹಿಸಿದ ಎಲ್ಲಾ ಕಲಾವಿದರಿಗೂ ಪ್ರಮಾಣ ಪತ್ರ ನೀಡಿ ಪ್ರೋತ್ಸಾಹಿಸಲಾಯಿತು.

ಶ್ರೀರಾಜರಾಜೇಶ್ವರಿ ಮಾತಾ, ಕಿಶೋರಿ ಬೂದನೂರು, ಗೀತಾ ಚೌದ್ರಿ, ನಾಗರಾಜ ಗುಡಿ, ಆಯುರ್ವೇದ ವೈದ್ಯ ಮಂಜುನಾಥ, ಶರಣಪ್ಪ ಬಿಳಿಯಲಿ, ಶರಣಪ್ಪ ಸಿಂಗನಾಳ, ಯಲ್ಲಪ್ಪ ಹಂದ್ರಾಳ, ದ್ಯಾಮಣ್ಣ, ಮಹಿಳಾ ಧ್ವನಿ ಸಂಸ್ಥೆಯ ಸಂಸ್ಥಾಪಕಿ ಪ್ರಿಯದರ್ಶಿನಿ ಉಪಸ್ಥಿತಿ ಇದ್ದರು. ಕಾರ್ಯಕ್ರಮದ ನಿರೂಪಣೆಯನ್ನು ಪವಿತ್ರಾ ಪುರದ ಮತ್ತು ಗಂಗಾ ಮೇದಾರ ನೆರೆವೇರಿಸಿದರು.

## ಜಿಲ್ಲಾ ಕಾಂಗ್ರೆಸ್ ಕಾರ್ಯದರ್ಶಿಯಾಗಿ

# ಆಯ್ಕೆಯಾದ ವಿಶಾಲಾಕ್ಷಿ ತಾವರಗೇರಾ ರವರಿಗೆ ಸನ್ಮಾನ.



**ಮಲ್ಲಮ್ಮ ನುಡಿ ವಾರ್ತೆ**

ಕೊಪ್ಪಳ : ತಾಲೂಕಿನ ಕಿನ್ನಾಳ ಗ್ರಾಮದ ಜಿಲ್ಲಾ ಕಾಂಗ್ರೆಸ್ ಕಾರ್ಯದರ್ಶಿಯಾಗಿ ಆಯ್ಕೆಯಾದ ವಿಶಾಲಾಕ್ಷಿ ವೀರೇಶ್ ತಾವರಗೇರಿ ಅವರಿಗೆ ಕಿನ್ನಾಳ ಗ್ರಾಮದ ಮಹಿಳೆಯರು ಸನ್ಮಾನಿಸಿ ಗೌರವ ಸಲ್ಲಿಸಿದರು. ಕಿನ್ನಾಳ ಗ್ರಾಮದ ವಿ ಎಸ್ ಎಸ್ ಎನ್ ಬ್ಯಾಂಕಿನ ನಿರ್ದೇಶಕರು ಮಲ್ಲಮ್ಮ ಕಾರಬ್ಯಾಳಿ, ರೇಖಾ ಬಸವರಾಜ್ ಚಿಲುವಾಡಗಿ, ಶೈನಾಜ್ ಬೇಗಂ ಬಾಷು ಹಿರೇಮನಿ, ಗೀತಾ ಹಾದಿಮನಿ, ಮಾಲಾ ಬಡಿಗೇರ್ ಸ್ವೇತಾ ಪರಶುರಾಮ್ ಇಟಗಿ, ಹನುಮಂತಿ ಸುರೇಶ್ ಬಾದಾಮಿ, ಶೋಭಾ ಬಸುವರಾಜ್ ಬಡಿಗೇರ, ಗ್ರಾಮದ ಯುವ ಮುಖಂಡರಾದ ಬಸುವರಾಜ ಚೇಲವಾಡಗಿ, ವೀರೇಶ್ ತಾವರಗೇರಾ, ಮಲ್ಲಿಕಾರ್ಜುನ ಮಂಗಳೂರು, ಬಾಷು ಹಿರೇಮನಿ,ಪರಶುರಾಮ ಇಟಗಿ, ಸುರೇಶ ಬಾದಾಮಿ, ದಾದಾಪೀರ ಗೊಣ್ಣೆಗೊಂಡಲ, ಇನ್ನಿತರರು ಪಾಲ್ಗೊಂಡಿದ್ದರು.ನಂತರ ಜಿಲ್ಲಾ ಕಾಂಗ್ರೆಸ್ ಕಾರ್ಯದರ್ಶಿ ವಿಶಾಲಾಕ್ಷಿ ವಿರೇಶತಾವರಗೇರಾ ಮಾತನಾಡಿ ಗ್ರಾಮದ ಜನತೆಗೆ ನಾನು ಚಿರಋಣಿ ಮಾಜಿ ಸಚಿವರಾದ ಇಕ್ಬಾಲ್ ಅನ್ಸಾರಿ, ಅಮರೇಗೌಡ ಬಯ್ಯಾಪುರ, ಶಾಸಕರಾದ ರಾಘವೇಂದ್ರ ಹಿಟ್ನಾಳ್ ರವರಿಗೆ ಧನ್ಯವಾದಗಳನ್ನು ತಿಳಿಸಿದರು.

# ಸಾರ್ವಜನಿಕ ಚರ್ಚೆಗೆ ಗ್ರಾಸವಾಗುತ್ತಿರುವ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗಳ ನಡೆ

ಮಲ್ಲಮ್ಮ ನುಡಿವಾರ್ತೆ

ಕುಕನೂರ: ಪಟ್ಟಣದ ಯಲಬುರ್ಗಿ ರಸ್ತೆಯಲ್ಲಿರುವ ಎಸ್ ಎಫ್ ಶಾಲೆಯ ಮುಂಭಾಗದಲ್ಲಿ ಇತ್ತೀಚಿಗೆ ಅಷ್ಟೇ ಅಳವಡಿಸಿರುವ ಬೀದಿ ದೀಪದ ವಿದ್ಯುತ್ ಕಂಬಕ್ಕೆ ಟ್ರ್ಯಾಕ್ಸ್ ವಾಹನ ಒಂದು ಮಂಗಳವಾರ ಬೆಳಗಿನ ಜಾವ ಡಿಕ್ಕಿ ಹೊಡೆದ ಪರಿಣಾಮ ಬೃಹತ್ ಬೀದಿ ದೀಪದ ಕಂಬ ನೆಲಕ್ಕುರಳಿದ್ದು ಇಲ್ಲಿಗೆ ತನಕ ಪಟ್ಟಣ ಪಂಚಾಯಿತಿ ಕಾರ್ಯಾಲಯವು ನೀಡದೇ ಇರುವುದು ಸಾರ್ವಜನಿಕ ವಲಯದಲ್ಲಿ ಚರ್ಚೆಯ ವಿಷಯವಾಗಿದ್ದು ಹಲವಾರು ಅನುಮಾನಗಳಿಗೆ ಎಡೆ ಮಾಡಿಕೊಟ್ಟಿದೆ.

ಪಟ್ಟಣದ ಗುರುಕುಲ ವಿದ್ಯಾನಂದ ವಿದ್ಯಾಲಯದಿಂದ ಯಲಬುರ್ಗಾ ರಸ್ತೆಯಲ್ಲಿರುವ ಎಸ್ ಎಫ್ ಶಾಲೆಯವರೆಗೆ ಇತ್ತೀಚಿನ ಕೆಲವೇ ತಿಂಗಳುಗಳ ಹಿಂದೆ ನೂತನವಾಗಿ ಬೀದಿ ಬದಿ ವಿದ್ಯುತ್ ದೀಪಗಳ ಕಂಬಗಳನ್ನು ಅಳವಡಿಸಿದ್ದು ಮಂಗಳವಾರ ಬೆಳಗಿನ ಜಾವ ಯಲ್ಬುರ್ಗಾ ಪಟ್ಟಣದ ಕಡೆಯಿಂದ ಕುಕನೂರು ಪಟ್ಟಣದ ಕಡೆಗೆ ಆಗಮಿಸುತ್ತಿದ್ದ ಟ್ರ್ಯಾಕ್ಸ್ ವಾಹನದ ಚಾಲಕನ ನಿಯಂತ್ರಣ ತಪ್ಪಿ ನೂತನವಾಗಿ ನಿರ್ಮಿಸಿದ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದ ಪರಿಣಾಮ ಬೀದಿಬದಿ ವಿದ್ಯುತ್ ದೀಪದ ಕಂಬ ನೆಲಕುರಳಿದ್ದು, ಕಂಬಕ್ಕೆ ಗುದ್ದಿದ ಟ್ರ್ಯಾಕ್ಸ್ ವಾಹನವನ್ನು ಪೊಲೀಸ್ ಠಾಣೆಗೆ ತೆ–ಗೆದುಕೊಂಡು ಪೊಲೀಸ್ ಠಾಣೆಯ ಆವರಣದಲ್ಲಿ ನಿಲ್ಲಿಸಲಾಗಿದೆ ಆದರೆ ವಿಪರ್ಯಾಸವೇ ಏನೆಂದರೆ ಘಟನೆ ಸಂಭವಿಸಿ ಸುಮಾರು ಮೂರು ದಿನಗಳು ಕಳೆದರೂ ಸಹ ಪಟ್ಟಣ ಪಂಚಾಯಿತಿಯ ಅಧಿಕಾರಿಗಳಾಗಲಿ ಯಾವ ಸಿಬ್ಬಂದಿಯಾಗಲಿ ಈ ಕುರಿತು ಪೊಲೀಸ್ ಠಾಣೆಗೆ ದೂರು ನೀಡದೇ ಇರುವುದು ಹಲವಾರು ಅನುಮಾನಗಳಿಗೆ ಆಸ್ಪದ



ಮಾಡಿಕೊಟ್ಟಿದ್ದು ಪಟ್ಟಣದ ಸಾರ್ವಜನಿಕರಲ್ಲಿ ತೀವ್ರ ತರಹದ ಚರ್ಚೆಗೆ ಗ್ರಾಸವಾಗಿದೆ.

ಕೆಲವು ಸಾರ್ವಜನಿಕರು ಮಾತನಾಡುವ ಪ್ರಕಾರ ಪಟ್ಟಣ ಪಂಚಾಯತಿಯ ಮುಖ್ಯ ಅಧಿಕಾರಿಗಳು ಸೇರಿದಂತೆ ಕೆಲವರು ವಾಹನದ ಮಾಲೀಕರೊಂದಿಗೆ ಚರ್ಚಿಸಿ ಒಳಗೊಳಗೆ ಒಂದು ಮೊತ್ತವನ್ನು ನಿರ್ಧರಿಸಿ ತೆಗೆದುಕೊಂಡು ಸುಮ್ಮನಾದರೆ ಆದ್ದರಿಂದ ದೂರು ನೀಡುವ ಕಾರ್ಯವಾಗುತ್ತಿಲ್ಲ ಎಂದು ಮಾತನಾಡಿಕೊಳ್ಳುತ್ತಿದ್ದರೆ, ಇನ್ನೊಂದೆಡೆ ಪ್ರಭಾವಿ ವ್ಯಕ್ತಿಗಳ ಮಾಲೀಕತ್ವ ಹೊಂದಿದ್ದ ವಾಹನ ವಿದ್ಯುತ್ ದೀಪದ ಕಂಬಕ್ಕೆ ಡಿಕ್ಕಿ ಹೊಡೆದಿದ್ದು ಅವರ ವಿರುದ್ಧ ದೂರು ನೀಡುವ ಧೈರ್ಯ ಪಟ್ಟಣ ಪಂಚಾಯಿತಿ ಅಧಿಕಾರಿಗಳಿಗೆ ಇಲ್ಲ ಆದ್ದರಿಂದ ಮೌನಕ್ಕೆ ಶರಣಾಗಿದ್ದಾರೆ ಎಂದು ಸಹ ಜನ ಮಾತನಾಡಿಕೊಳ್ಳುತ್ತಿದ್ದಾರೆ.

ಇದರ ನಡುವೆ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ನಬಿಸಾಬ್ ಕಂದಗಲ್ ಅವರನ್ನು ವರದಿಗಾರರು ಪ್ರಶ್ನಿಸಿದಾಗ ಇದರಲ್ಲಿ ನನ್ನ ಪಾತ್ರವೇನು ಇಲ್ಲ ಪಟ್ಟಣ ಪಂಚಾಯಿತಿಯ ಅಧ್ಯಕ್ಷರು ದೂರು ನೀಡುವುದ ಬೇಡ ಅಲ್ಲಿ ಉಂಟಾಗಿರುವ ನಷ್ಟವನ್ನು ಭರಿಸಿಕೊಳ್ಳುವ ವಿಚಾರ ಮಾಡೋಣ ಎಂದು ಎಂದು ಹೇಳಿದರೆ ಆದ್ದರಿಂದ ಕಾದು ನೋಡುವ ಕಾರ್ಯ–ಕ್ಕೆ ಮೂರೇ ಹೋಗಿದ್ದೇವೆ ಎಂದು ಆಶ್ಚರ್ಯಕರ ಹಾಗೂ ದಾರಿ ತಪ್ಪಿಸುವ ನಿಟ್ಟಿನಲ್ಲಿ ಉತ್ತರವನ್ನು ನೀಡಿರುತ್ತಾರೆ.

ಇದೆಲ್ಲವನ್ನು ಗಮನಿಸಿದಾಗ ತೆರೆಮರೆಯಲ್ಲಿ ಏನೋ ಒಂದು ಕಸರತ್ತು ನಡೆಯುತ್ತಿದೆ ಎಂದು ಗೋಚರಿಸುತ್ತಿದ್ದು ಸಾರ್ವಜನಿಕರ ಹಣದಿಂದ ನಿರ್ಮಾಣಗೊಂಡಿರುವ ವಿದ್ಯುತ್ ದೀಪದ ಕಂಬಕ್ಕೆ ಹಾನಿಗೊಳಗಾಗಿದೆ ಇದನ್ನು ಸಮರ್ಪಕವಾಗಿ ನಿಭಾಯಿಸಬೇಕಾದ ಅಧಿಕಾರಿಗಳೇ ಜಾಣ ಕುರುಡರ ರೀತಿ ವರ್ತಿಸುತ್ತಿರುವುದು ಗೊಂದಲಗಳನ್ನು ಸೃಷ್ಟಿ ಮಾಡಿದ್ದು ಇದಕ್ಕೆ ಸಾರ್ವಜನಿಕವಾಗಿ ತೆರೆ ಬೀಳುವುದೇ.....? ಅಥವಾ ತೆರೆಮರೆಯಲ್ಲಿಗೆ ಹೆ ಊಂದಾಣಿಕೆಯಾಗುತ್ತದೆಯೇ....? ಎಂಬುದು ಸಾರ್ವಜನಿಕರಲ್ಲಿ ಯಕ್ಷಪ್ರಶ್ನೆಯಾಗಿದ್ದು. ಕಾಲವೇ ಎಲ್ಲಾದಕ್ಕೂ ಉತ್ತರ ನೀಡಲಿದೆ.

# ಸಧ್ಯದಲ್ಲೆ ನಾಗೇಂದ್ರ ಸಚಿವರಾಗುತ್ತಾರೆ ಜಮೀರ್ ಅಹಮ್ಮದ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ಬರುವ ಹತ್ತು-ಹದಿನೈದು ದಿನದಲ್ಲಿ ಮತ್ತೊಮ್ಮೆ ಸಚುವರಾಗಲುದ್ದಾರೆ. ಈ ವಿಷಯದಲ್ಲಿ ಹೈಕಮಾಂಡ್ ನಿರ್ಧಾರ ತೆಗೆದುಕೊಳ್ಳಲಿದೆಂದು ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹಮ್ಮದ್ ಹೇಳಿದ್ದಾರೆ.

ನಗರದಲ್ಲಿಂದು ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿ ಸುದ್ದಿಗೋಷ್ಟಿ ನಡೆಸಿದ ಅವರು. ಸಧ್ಯಕ್ಕೆ ರಾಜ್ಯದಲ್ಲಿ ಸಿಎಂ ಚೇರ್ ಖಾಲಿ ಇಲ್ಲ. ನವೆಂಬರ್ ಬಳಿಕ ಸಚಿವ ಸಂಪುಟ ವಿಸ್ತರಣೆ ಆಗಬಹುದು..

ಎಸ್‌ಐಟಿ ಈಗಾಗಲೇ ನಾಗೇಂದ್ರ ಅವರಿಗೆ ಕ್ಲೀನ್ ಕೊಟ್ಟಿದೆ. ಹದಿನೈದು



ದಿನದಲ್ಲಿ ಅವರು ಮಂತ್ರಿಯಾಗ್ತಾರೆಂದರು.

ಜಿಲ್ಲೆಗೆ ಭೇಟಿ ನೀಡುವುದು ವಿಳಂಬದ ಬಗ್ಗೆ ಪ್ರಶ್ನೆ ಕೇಳಿದಾಗ ನಾನು ಡಿಸಿ ಅವರ ಜೊತೆ ಸದಾ ಸಂಪರ್ಕದಲ್ಲಿರುವೆ. ಜನರಿಗೆ ಯಾವುದೇ ಸಮಸ್ಯೆ ಆಗದಂತೆ

# ಸರಳಾದೇವಿ ಕಾಲೇಜಿನಲ್ಲಿ ಹಳೇ ವಿದ್ಯಾರ್ಥಿಗಳ ಸಂಘದಿಂದ ಶಿಕ್ಷಕರ ದಿನಾಚರಣೆಕಾಲೇಜಿನ ಅಭಿವೃದ್ಧಿಗೆ ಸಂಪೂರ್ಣ ಸಹಕಾರ; ಭರತ್ ರೆಡ್ಡಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.29:ನಗರದ ಸರಳಾದೇವಿ ಸತೀಶ್ಚಂದ್ರ ಅಗರವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ "ಜ್ಞಾನ ಸಿಂಚನ" ಹಳೆ ವಿದ್ಯಾರ್ಥಿಗಳ ಸಂಘದಿಂದ ಇಂದು ಕಾಲೇಜಿನ ಸಭಾಂಗಣದಲ್ಲಿ ಶಿಕ್ಷಕರ ದಿನಾಚರಣೆ ಹಾಗೂ ಇದೇ ಕಾಲೇಜಿನಲ್ಲಿ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವ ಹಳೆಯ ವಿದ್ಯಾರ್ಥಿಗಳಿಗೆ ಸನ್ಮಾನ ಸಮಾರಂಭ ನಡೆಯಿತು.

ಸಮಾರಂಭವನ್ನು ನಗರದ ಶಾಸಕ ನಾರಾ ಭರತ್ ರೆಡ್ಡಿ ಉದ್ಘಾಟಿಸಿ, ಉಪನ್ಯಾಸಕರನ್ನು ಸನ್ಮಾನಿಸಿ, ಇದೇ ಕಾಲೇಜಿನಲ್ಲಿ ಉಪನ್ಯಾಸಕರಾದವರಿಗೆ ಸನ್ಮಾನ ಮಾಡುತ್ತಿರುವುದು ಶ್ಲಾಘನೀಯ ಕಾರ್ಯ. ನಿಮ್ಮ ಸಂಘದಿಂದ ಬಳ್ಳಾರಿ ನಗರದ ಅಭಿವೃದ್ಧಿಗೆ ಸಹಕಾರ ನೀಡಿ, ಕಾಲೇಜಿನಲ್ಲಿ ಬಡ ವಿದ್ಯಾರ್ಥಿಗಳು ಹೆಚ್ಚಾಗಿ ಅಭ್ಯಾಸ ಮಾಡುತ್ತಿದ್ದಾರೆ.

ಏಳು ಕೋಟಿ ಅನುದಾನ ನೀಡಿದೆ. ಕಾಲೇಜಿನ ಸಭಾಂಗಣಕ್ಕೆ ಒಂದು ವರೆ ಕೋಟಿ ರೂ ವೆಚ್ಚದಲ್ಲಿ ಇನ್ನಿತರ ಕಾಮಗಾರಿ ಮಾಡಲಿದೆ. ಈ ಕಾಲೇಜು



ಅಭಿವೃದ್ಧಿಗೆ ನನ್ನ ಸಂಪೂರ್ಣ ಸಹಕಾರ ಇದೆ. ನಮ್ಮೆಲರ ಕನಸಿನಿಂದ ಕಾಲೇಜಿನ ಸಮಗ್ರ ಅಭಿವೃದ್ಧಿ ಅಗಲಿ ಎಂದರು.

ಸಮಾರಂಭದಲ್ಲಿ ಕಾಲೇಜಿನ ಪ್ರಾಂಶುಪಾಲ ಡಾ. ಪ್ರಹ್ಲಾದ್ ಚೌದ್ರಿ .ಜಿ, 4 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನು ಹೊಂದಿದ್ದು. ಕಾಲೇಜಿಗೆ ಶಾಸಕರು ಐದು ಕೋಟಿ ರೂ ಗಳ ಅನುದಾನ ಒದಗಿಸಿದ್ದಾರೆ. ಇನ್ನೂ ಹತ್ತು ಕೋಟಿ ರೂ ಅನುದಾನ ಬರುವ ನಿರೀಕ್ಷೆ ಇದೆಂದರು.

ಸಂಘದ ಸಂಚಾಲಕರು,ಉಪನ್ಯಾಸಕರಾದ ಡಾ. ಗುರುಬಸಪ್ಪ .ಎಸ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ. ಹಳೇ ವಿದ್ಯಾರ್ಥಿಗಳ ಸಂಘದಿಂದ ನಡೆದಿರುವ ಕಾರ್ಯ ಚಟುವಟಿಕೆಗಳನ್ನು ವಿವರಿಸಿ. ಇನ್ನೂ ಹೆಚ್ಚಿನ ಕಾರ್ಯಕ್ರಮ ನಡೆಸಲು ಹಳೇ ವಿದ್ಯಾರ್ಥಿಗಳು, ಜನ ಪ್ರತಿನಿಧಿಗಳು ಸಂಘಕ್ಕೆ ಹೆಚ್ಚಿನ ನೆರವು ನೀಡಬೇಕು ಎಂದರು.

ಹಳೇ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ವೆಂಕಟೇಶ್ ಹೆಗಡೆ ಅಧ್ಯಕ್ಷತೆವಹಿಸಿ, ನಮ್ಮ ಸಂಘವು ಹಲವಾರು ಉದ್ದೇಶಗಳನ್ನು ಇಟ್ಟು-ಕೊಂಡು ಮುನ್ನಡೆಯುತ್ತಿದೆ ಇದೇ ಕಾಲೇಜಿನಲ್ಲಿ ಓದುತ್ತಿರುವಂತಹ ವಿದ್ಯಾರ್ಥಿಗಳಿಗೆ ಎಲ್ಲಾ ರೀತಿಯ ಸಹಾಯ ಮತ್ತು ಸಹಕಾರವನ್ನು ನೀಡುವಲ್ಲಿ ಈ ಸಂಘವು ಸದಾ ಸಿದ್ಧವಾಗಿರುತ್ತದೆ ಅಲ್ಲದೆ ವಿದ್ಯಾರ್ಥಿಗಳ ಕುಂದು ಕೊರತೆಗಳನ್ನು ನೀಗಿಸುವಲ್ಲಿ ಮುಂಚೂಣಿಯಲ್ಲಿ ಇರುತ್ತದೆ .

ಸಮಾಜದ ಏಳಿಗೆಗಾಗಿ ವಿವಿಧ ರೀತಿಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಈ ಕಾಲೇಜಿನಲ್ಲಿ ವಿದ್ಯಾಭ್ಯಾಸ ಮುಗಿಸಿಕೊಂಡು ಹೋಗಿರುವ ಮತ್ತು ಹೋಗುತ್ತಿರುವ ಎಲ್ಲ ವಿದ್ಯಾರ್ಥಿಗಳು ಸಂಘ ನಿಗದಿ ಮಾಡಿದಂತಹ ನೋಂದಣಿ ಶುಲ್ಕವನ್ನು ಪಾವತಿಸಿ ಅರ್ಜಿಯನ್ನು ತುಂಬುವುದರೊಂದಿಗೆ ಸದಸ್ಯತ್ವವನ್ನು ಪಡೆದುಕೊಳ್ಳಬೇಕಾಗಿ ವಿನಂತಿಸಿದರು.

ಪ್ರತಿ ವಿಭಾಗದಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಚಿನ್ನದ ಪದಕವನ್ನು ಕೊಡುವುದು ಬಡ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನವನ್ನು ನೀಡುವುದು ವಿದ್ಯಾರ್ಥಿಗಳಿಗೆ ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು, ನಮ್ಮ ಕಾಲೇಜಿನಲ್ಲಿ ಓದುವಂತಹ ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶವನ್ನು ಕಲ್ಪಿಸಲು ಉದ್ಯೋಗಮೇಳಗಳನ್ನು ಹಮ್ಮಿಕೊಳ್ಳುವುದು , ಸ್ನೇಹಕೂಟಗಳು ಅಂದರೆ ಸ್ನೇಹ ಸಮ್ಮಿಲನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು , ಗುರು ವಂದನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು ಇದಲ್ಲದೆ ಸಮಾಜಮುಖಿ ಅಭಿವೃದ್ಧಿಗೆ ಸಹಕಾರಿಯಾಗುವಂತಹ ಬ್ಲಡ್ ಡೊನೇಷನ್ ಕ್ಯಾಂಪುಗಳನ್ನು ನಡೆಸುವುದು, ಪರಿಸರ ಉಳವಿಗಾಗಿ ಗಿಡಗಳನ್ನು ನೆಡುವುದು, ಸ್ವಚ್ಛತೆ ಮತ್ತು ಆರೋಗ್ಯದ ಬಗ್ಗೆ ಸಾರ್ವಜನಿಕರಿಗೆ ಹೆಚ್ಚಿನ ಮಾಹಿತಿ ನೀಡುವುದು, ಆರೋಗ್ಯ ತಪಾಸಣೆ ಹೀಗೆ ಹತ್ತು ಹಲವಾರು ಕಾರ್ಯಕ್ರಮಗಳನ್ನ ಹಮ್ಮಿಕೊಳ್ಳುವುದು ಈ ಸಂಘದ ಉದ್ದೇಶವಾಗಿದೆಂದರು.

ಹಳೆ ವಿದ್ಯಾರ್ಥಿಗಳ ಸಂಘದ ಪ್ರಧಾನ ಕಾರ್ಯದರ್ಶಿ ಆರ್.ವೈ. ಹನುಮಂತರೆಡ್ಡಿ, ಕಾರ್ಯಾಧ್ಯಕ್ಷ ಎಂ. ಕಿಶೋರ್ ಕುಮಾರ್, ಖಜಾಂಚಿ ಎನ್. ವೀರಭದ್ರಗೌಡ, ಉಪಾಧ್ಯಕ್ಷ ಜಿ.ಆನಂದಕುಮಾರ್ ವೇದಿಕೆ ಮೇಲೆ ಇದ್ದರು.

ಪ್ರಾರ್ಥನೆ ವಿದ್ಯಾರ್ಥಿನಿ ಬಿಂದು, ಉಪನ್ಯಾಸಕರಾದ ಎಂ.ರಫಿ ಸ್ವಾಗತಿಸಿದರೆ. ರಾಮಸ್ವಾಮಿ ಕಾರ್ಯಕ್ರಮ ನಿರೂಪಣೆ ಮಾಡಿದರು. ಸಂಘದ ಕಾರ್ಯಕಾರಿ ಸಮಿತಿ ಸದಸ್ಯ ಅರುಣಾಚಲಂ ವಂದನಾರ್ಪಣೆ ಮಾಡಿದರು.

# ಜಾಲಿಬೆಂಚಿಯಲ್ಲಿ ದಶಕಂಠ ರಾವಣ ತೊಗಲುಗೊಂಬೆ ಪ್ರದರ್ಶನ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ;ಸೆ,28- ತಾಲೂಕಿನ ಜಾಲಿಚೆಂಚಿ ಗ್ರಾಮದ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದ ಆವರಣದಲ್ಲಿ ಶುಕ್ರವಾರ ಸಂಜೆ 6.30 ಕ್ಕೆ ಶ್ರೀಶೈಲ ಭ್ರಮರಾಂಭ ಮಲ್ಲಿಕಾರ್ಜುನ ಸೇವಾ ಟ್ರಸ್ಟ್ ಹಾಗು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಪರಿಶಿಷ್ಟ ಜಾತಿ ಉಪಯೋಜನೆಯಡಿಯಲ್ಲಿ ಎರ್ರಿಸ್ವಾಮಿ ತೊಗಲುಗೊಂಬೆ ಕಲಾ ಮೇಳ ಟ್ರಸ್ಟ್ ನಿಂದ ಗ್ರಾಮೀಣ ಸಂಭ್ರಮ ಕಾರ್ಯಕ್ರಮದಲ್ಲಿ ದಶಕಂಠ ರಾವಣ ತೊಗಲುಗೊಂಬೆ ಪ್ರದರ್ಶನ ನಡೆಯಿತು.

ಕಾರ್ಯಕ್ರಮ ಉದ್ಘಾಟಿಸಿದ ಜಾಲಿಚೆಂಚಿ ಗ್ರಾಪಂ ಉಪಾಧ್ಯಕ್ಷೆ ಟಿ. ನಾಗರತ್ನ ಮಲ್ಲಿಕಾರ್ಜುನ, ಕಲಾ ಪ್ರಕಾರಗಳನ್ನು ನಡೆಸುವುದೇ ಕಷ್ಟ. ಅದರಲ್ಲಿ ತೊಗಲುಗೊಂಬೆ ಪ್ರದರ್ಶನ ಇನ್ನೂ ಕಷ್ಟ. ರಂಗಭೂಮಿ, ಬಯಲಾಟಗಳ ಪ್ರದರ್ಶನಗಳು ಗ್ರಾಮೀಣ ಪ್ರದೇಶಗಳಲ್ಲಿ ನಡೆಯುತ್ತಿವೆ. ಆದರೆ, ತೊಗಲುಗೊಂಬೆ ಪ್ರದರ್ಶನ ಬಹಳ ವಿರಳ. ಅವುಗಳನ್ನು ಪ್ರದರ್ಶನ ಮಾಡುವವರೇ ಇಲ್ಲ. ಬೆರಳೆಣಿಕೆಯಷ್ಟು ತೊಗಲುಗೊಂಬೆ ಪ್ರದರ್ಶನ ನಡೆಸುವವರು ಇದ್ದಾರೆ. ಅವರಿಗೆ ಪ್ರೋತ್ಸಾಹ ನೀಡುವ ಮೂಲಕ ತೊಗಲುಗೊಂಬೆ ಆಟವನ್ನು ಉಳಿಸಿ ಬೆಳೆಸಬೇಕು ಎಂದು ಹೇಳಿದರು.

ಗ್ರಾಪಂ ಸದಸ್ಯೆ ಟಿ.ಅನಿತಾ ಕುಮಾರರೆಡ್ಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಎರ್ರಿಸ್ವಾಮಿ ತೊಗಲುಗೊಂಬೆ ಕಲಾ ಮೇಳ ಟ್ರಸ್ಟ್ ಅಧ್ಯಕ್ಷ ವೈ. ಪ್ರಭು, ಕು. ತನುಶ್ರೀ ಸೇರಿದಂತೆ ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಮಲ್ಲಿಕಾರ್ಜುನ ಸ್ವಾಗತಿಸಿದರು. ಶಿವರಾಜಗೌಡ ಕಾರ್ಯಕ್ರಮ ನಿರೂಪಿಸಿದರು. ಕುಮಾರರೆಡ್ಡಿ ವಂದಿಸಿದರು.

# ಮುಂಡರಗಿಯಲ್ಲಿ ಶರನ್ನವರಾತ್ರಿ ದಸರಾ ಮಹೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.28: ಶ್ರೀರಾಮುಲಮ್ಮ ದೇವಸ್ಥಾನ ಸಮಿತಿ ಸಮೃದ್ಧಿ ನಗರ ಮತ್ತು ಗ್ರಾಮೀಣ ಅಭಿವೃದ್ಧಿ ಸಂಸ್ಥೆ ಮುಂಡರಗಿ, ಬಳ್ಳಾರಿ. ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬಳ್ಳಾರಿ. ಇವರ ಸಹಯೋಗದಲ್ಲಿ ಬಳ್ಳಾ-ರಿಯ ಮುಂಡರಗಿ ಗ್ರಾಮದಲ್ಲಿ ಶ್ರೀರಾಮುಲಮ್ಮ ದೇವಿಯ 7ನೇ ವರ್ಷದ ಶರನ್ನವರಾತ್ರಿ ದಸರಾ ಮಹೋತ್ಸವ ಪ್ರಯುಕ್ತ ಹಮ್ಮಿಕೊಂಡಿದ್ದ 6ನೇ ದಿನದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಡಾ. ಬಾಬು ಜಗಜೀವನ್ ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮುಂಡರಗಿ ನಾಗರಾಜ ಉದ್ಘಾಟಿಸಿದರು. ಕಾರ್ಯಕ್ರಮದ ವೇದಿಕೆಯಲ್ಲಿ ದೇವಸ್ಥಾನ ಕಮಿಟಿಯ ಅಧ್ಯಕ್ಷರು ಸರ್ವ ಸದಸ್ಯರು ಮತ್ತು ಊರಿನ ಮುಖಂಡರು ಹಾಗೂ ವಿವಿಧ ದಲಿತ ಸಂಘಟನೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಪ್ರಾಯೋಜನೆ ಅಡಿಯಲ್ಲಿ ಸಿರುಗುಪ್ಪದ ನೇತ್ರ ಕಲಾ ಸಂಘ ತಂಡದ ಕಲಾವಿದರು ಕತ್ತಲ ರಾಜ್ಯದ ಮೂರ್ಖ ರಾಜ ಎಂಬ ಹಾಸ್ಯ ನಗೆ ನಾಟಕವನ್ನು ಪ್ರದರ್ಶಿಸಿದರು. ಕಾರ್ಯಕ್ರಮದಲ್ಲಿ ನೆರೆದ ಸಾವಿರಾರು ಜನ ಸಮೂಹವನ್ನು ನಾಟಕದ ಮೂಲಕ ರಂಜಿಸಿದರು ಈ ನಾಟಕದ ಕಲಾವಿದರಾದ ಹಿರಿಯ ರಂಗ ಕಲಾವಿದ ಬದನೆಹಾಳ್ ಬೀಮಣ್ಣ ರಾಜನ ಪಾತ್ರದಲ್ಲಿ ನೆರೆದ ಪ್ರೇಕ್ಷಕರನ್ನು ನಗೆಗಡಲೆಲ್ಲಿ ತೇಲಿಸಿದರೆ ಮಂತ್ರಿ ಪಾತ್ರದಲ್ಲಿ ಸಿರಿಗೇರಿಯ ಹುಸೇನಿ ಸೈನಿಕನ ಪಾತ್ರದಲ್ಲಿ ಹರಿಕೃಷ್ಣ ಸಂಗನಕಲ್ ಶಿವು ಸಿರುಗುಪ್ಪ ಸ್ವಾಮೀಜಿ ಪಾತ್ರದಲ್ಲಿ ಲೋಕೇಶ್ ಶಿಷ್ಯಂದಿರ ಪಾತ್ರದಲ್ಲಿ ಹೆಚ್ ಮುತ್ತಣ್ಣ ತಿಮರಾಜ್ ಎಮ್ಮಿಗನೂರು ಕಟಕನ ಪಾತ್ರದಲ್ಲಿ ವೀರೇಶ್ ದಳವಾಯಿ ಮಾಲೀಕನ ಪಾತ್ರದಲ್ಲಿ ಹೆಚ್. ತಿಮ್ಮಪ್ಪ ಬಿಎಂ ಸೂಗೂರು. ಕುರುಬನ ಪಾತ್ರದಲ್ಲಿ ದೊಡ್ಡ ಹುಸೇನಪ್ಪ ಅರಳಿಗನೂರು ಇನ್ನು ಮುಂತಾದ ಕಲಾವಿದರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

# ಕುರುಗೋಡು ಪೊಲೀಸರಿಂದ ಬ್ಯಾಟರಿ ಕಳ್ಳರ ಬಂಧನ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ:ಸೆ,28- ಜಿಲ್ಲೆಯ ಕುರುಗೋಡು ತಾಲೂಕಿನ ವಿವಿಧ ಗ್ರಾಮಗಳಲ್ಲಿ ಟ್ರಾಕ್ಟರ್ ಬ್ಯಾಟರಿಗಳನ್ನು ಕದ್ದಿದ್ದ ನಾಲ್ವರನ್ನು ಕುರುಗೋಡು ಪೊಲೀಸರು ಬಂಧಿಸಿದ್ದಾರೆ.

ಕುರುಗೋಡು ತಾಲೂಕಿನ ಹೆಚ್.ವೀರಾಪುರ, ಬಾದನಹಟ್ಟಿ ಗ ಗೆಣಿಕೆಹಾಳ್ ಗ್ರಾಮಗಳ ಟಾಕ್ಟರ್ ಗಳ ಬ್ಯಾಟರಿಗಳನ್ನು ಕದ್ದಿದ್ದ. ಗುಜರಿಕೆಲಸ ಮಾಡುತ್ತಿದ್ದ ಕುರುಗೋಡಿನ ಯೇಸು ಸ್ವಾಮಿ (22), ಜಡೇಶ್ ಅಲಿಯಾಸ್ ಬುಡಬುಡಿಕೆ ಜಡಿಯ(50), ವದ್ದಟ್ಟಿ ಗ್ರಾಮದ ಶಿವಪ್ಪ(32), ಸಿದ್ದಮ್ಮನಹಳ್ಳಿಯ ತಿಪ್ಪಣ್ಣ (23) ಅವರನ್ನು ಬಂಧಿಸಲಾಗಿದೆ.

ಬಂಧಿತರಿಂದ ಕುರುಗೋಡು ಠಾಣೆಯ 3 ಪ್ರಕರಣಗಳು ಮತ್ತು ಸಿರಿಗೇರಿ ಪೊಲೀಸ್ ಠಾಣೆಯ 3 ಪ್ರಕರಣಗಳಲ್ಲಿ 27 ಬ್ಯಾಟರಿಗಳು, ಬೆಲೆ ಅಂದಾಜು ರೂ3 ಲಕ್ಷ, ಒಂದು ಅಪಿ ಆಟೋ, ಎರಡು ಮೋಟಾರ್ ಸೈಕಲ್‌ಗಳನ್ನು ವಶಪಡಿಸಿಕೊಂಡಿದೆ.

ಕುರುಗೋಡು ಠಾಣೆಯ ಸಿಪಿಐ ವಿಶ್ವನಾಥ ಹಿರೇಗೌಡರ್ ನೇತೃತ್ವದಲ್ಲಿ ಪಿಎಸ್ಐ ಸುಪ್ರೀತ್ ಮೊದಲಾದವರು ತನಿಖೆ ನಡೆಸಿದ್ದರು.

# ಹೆದ್ದಾರಿಗಳ ಅಭಿವೃದ್ಧಿ: ಸಚಿವ ಗಡ್ಕರಿಗೆ ಸೋಮಣ್ಣ ಮನವಿ



ಮಲ್ಲಮ್ಮ ನುಡಿ ವಾರ್ತೆ

ತುಮಕೂರು, ಸೆ. 26- ಸ್ಮಾರ್ಟ್ ಸಿಟಿ ತುಮಕೂರು ಯೋಜನೆಯ ಹಂತ 2ರ ಮಲ್ಲಸಂದ್ರದಿಂದ ವಸಂತನರಸಾಪುರದವರೆಗೆ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಯ ಕಾರ್ಯಸಾಧ್ಯತೆಯನ್ನು ಮರುಪರಿಶೀಲಿಸಲು ಅಥವಾ ತಜ್ಞರ ಸಮಿತಿ ನಿಯೋಜಿಸಲು ಸಂಬಂಧಪಟ್ಟವರಿಗೆ ನಿರ್ದೇಶಿಸುವಂತೆ ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅವರು ಕೇಂದ್ರ ಸಾರಿಗೆ ಮತ್ತು ರಾಷ್ಟ್ರೀಯ ಹೆದ್ದಾರಿ ಖಾತೆ ಸಚಿವ ನಿತಿನ್ ಗಡ್ಕರಿ ಅವರಿಗೆ ಮನವಿ ಮಾಡಿದರು.

ನವದೆಹಲಿಯಲ್ಲಿ ಸಚಿವ ಗಡ್ಕರಿಯವರನ್ನು ಭೇಟಿ ಮಾಡಿದ ಸಚಿವ ಸೋಮಣ್ಣ, ತುಮಕೂರು ಜಿಲ್ಲೆಯ ವಿವಿಧ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳ ಬಗ್ಗೆ ಚರ್ಚೆ ನಡೆಸಿದರು. ತುಮಕೂರು-ಕೊರಟಗೆರೆ-ಮಧುಗಿರಿ-ಪಾವಗಡ-ರಾಯದುರ್ಗ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿಯಾಗಿ ಮೇಲ್ದರ್ಜೆಗೇರಿಸಲು ಅನುಮೋದನೆ ನೀಡುವಂತೆ ಕೋರಿದರು.

288 ಕಿ.ಮೀ ಉದ್ದದ 13,139 ಕೋಟಿ ರೂ. ವೆಚ್ಚದ ಬೆಂಗಳೂರು ನಗರ ಸಂಚಾರ ದಟ್ಟಣೆ ನಿವಾರಿಸಲು ಭಾರತ್ ಮಾಲಾ ಯೋಜನೆಯಡಿ ನಿರ್ಮಿಸಲುದ್ದೇಶಿಸಲಾದ ಸ್ಯಾಟಲೈಟ್ ಟೌನ್ ರಿಂಗ್ ರಸ್ತೆ ದಾಬಸ್‌ಪೇಟೆ-ದೊಡ್ಡಬಳ್ಳಾಪುರ-ಹೊಸಕೋಟೆ ಸಂಪರ್ಕಿಸುವ 143.172 ಕೀ.ಮೀ ಕಾಮಗಾರಿ ಪೂರ್ಣಗೊಂಡಿದೆ.

ಇನ್ನುಳಿದ ದಾಬಸ್‌ಪೇಟೆ ಮಾಗಡಿ-ರಾಮನಗರ-ಕನಕಪುರ-ಮುದಗದಪಲ್ಲಿ ಸಂಪರ್ಕಿಸುವ 144 ಕಿಮೀ ಉದ್ದದ ಭೂಸ್ವಾಧೀನಕ್ಕೆ ಅಂತಿಮ ಅಧಿಸೂಚನೆಯನ್ನು ಅನುಮೋದಿಸಲಾಗಿದ್ದು ಭೂಮಾಲೀಕರಿಗೆ ಪರಿಹಾರ ವಿತರಣೆ ಬಾಕಿ ಇದೆ. ಸುಮಾರು 150 ಹಳ್ಳಿಗಳ ವ್ಯಾಪ್ತಿಯ ಭೂಮಾಲಿಕರಿಗೆ ಪರಿಹಾರ ಬಿಡುಗಡೆ ಮಾಡಬೇಕು ಹಾಗೂ ಬಾಕಿ ಕಾಮಗಾರಿಯನ್ನು ಶೀಘ್ರವೇ ಆರಂಭಿಸಬೇಕು ಎಂದು ಸಚಿವ ಸೋಮಣ್ಣನವರು ಸಚಿವ ನಿತಿನ್ ಗಡ್ಕರಿಯವರಿಗೆ ಮನವಿ ಮಾಡಿದರು.

# 2,96,230 ರೂ. ಮೌಲ್ಯದ ಗಾಂಜಾ ವಿಲೇವಾರಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಸೆಪ್ಟೆಂಬರ್ 29 – ನಗರದ ವಿವಿಧ ಠಾಣೆಗಳಲ್ಲಿ ಜಪ್ತಿ ಮಾಡಿದ್ದ 2,96,230 ರೂ.ಗಳ ಮೌಲ್ಯದ 7 ಕೆಜಿ 101 ಗ್ರಾಂ ಗಾಂಜಾವನ್ನು ಪೊಲೀಸ್ ಮಹಾನಿರ್ದೇಶಕರು ಮತ್ತು ಮಹಾ ನಿರೀಕ್ಷರು, ಕರ್ನಾಟಕ ರಾಜ್ಯ, ಬೆಂಗಳೂರು ಅವರ ಸೂಚನೆಯ ಮೇರೆಗೆ ನಗರದ ಯಕ್ಲಾಸಪುರ ರಸ್ತೆಯಲ್ಲಿರುವ ವೈದ್ಯಕೀಯ ತಾಜ್ಯ ವಿಲೇವಾರಿ ಘಟಕದಲ್ಲಿ ಸೆ.26ರಂದು ವಿಲೇವಾರಿ ಮಾಡಲಾಯಿತು.

2023ನೇ ಹಾಗೂ 2025ನೇ ಸಾಲಿನಲ್ಲಿ ವರದಿಯಾದ ಒಟ್ಟು 12 ಪ್ರಕರಣಗಳಲ್ಲಿ ವಶಪಡಿಸಿಕೊಳ್ಳಲಾದ ಗಾಂಜಾವನ್ನು ಮಾದಕವಸ್ತು ವಿಲೇವಾರಿ ಸಮಿತಿಯ ಅಧ್ಯಕ್ಷರು ಆತರುವ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಎಂ ಪುಟ್ಟಮಾದಯ್ಯ ಅವರ ನೇತೃತ್ವದಲ್ಲಿ ವಿಲೇವಾರಿ ಮಾಡಲಾಯಿತು.

ರಾಯಚೂರು ಪಶ್ಚಿಮ ಠಾಣೆ, ಯರಗೇರಾ ಪೊಲೀಸ್ ಠಾಣೆ, ಬಳಗಾನೂರು ಪೊಲೀಸ್ ಠಾಣೆ, ಇಡಪನೂರು ಪೊಲೀಸ್ ಠಾಣೆ, ಸಿರವಾರ ಪೊಲೀಸ್ ಠಾಣೆ, ಸಿಂಧನೂರು ಗ್ರಾಮೀಣ ಪೊಲೀಸ್ ಠಾಣೆ, ನೇತಾಜಿನಗರ ಪೊಲೀಸ್ ಠಾಣೆ, ರಾಯಚೂರು ಗ್ರಾಮೀಣ ಠಾಣೆಗಳಲ್ಲಿ ಈ ಗಾಂಜಾವನ್ನು ಜಪ್ತಿ ಮಾಡಲಾಗಿತ್ತು.

ರಾಯಚೂರು ಉಪ ವಿಭಾಗದ ಡಿ.ಎಸ್.ಪಿ ಆಗಿರುವ ಸಮಿತಿಯ ಸದಸ್ಯರಾದ ಶಾಂತವೀರ, ಸಿ.ಇ.ಎನ್ ಪೊಲೀಸ್ ಠಾಣೆಯ ಡಿಎಸ್‌ಪಿ ವೆಂಕಟೇಶ, ಆರ್‌ಐಎಮ್‌ಎಸಿಟಿ ಅಧ್ಯಕ್ಷರಾದ ಡಾ.ಶ್ರೀಶೈಲೇಶ್ ಅಮರಖೇಡ್, ಟೆಕ್ನಿಕಲ್ ಆಫೀಸರ್ ಜಯಕುಮಾರ, ವಾಯು ಮಾಲಿನ್ಯ ನಿಯಂತ್ರಣ ಮಂಡಳಿಯ ಸಹಾಯಕ ಪರಿಸರ ಅಧಿಕಾರಿ ಗಿರೀಶ್, ಡಿಸಿಆರ್‌ಬಿ ಘಟಕದ ಪೊಲೀಸ್ ಇನ್ಸಪೆಕ್ಟರ್ ತಿಮ್ಮಣ್ಣ.ಎಸ್., ಡಿಸಿಆರ್‌ಬಿ ಘಟಕದ ಪಿ.ಎಸ್.ಐ ಶಾರದಾ, ಅಬಕಾರಿ ಅಧೀಕ್ಷಕರು ಚಂದ್ರಶೇಖರ, ಅರಣ್ಯ ಇಲಾಖೆಯ ದ್ವಿತೀಯ ದರ್ಜೆ ಸಹಾಯಕ ರಾಮಯ್ಯ ಇವರ ಸಮಕ್ಷಮದಲ್ಲಿ ನಗರದ ಯಕ್ಲಾಸಪುರ ರಸ್ತೆಯಲ್ಲಿರುವ ವೈದ್ಯಕೀಯ ತಾಜ್ಯ ವಿಲೇವಾರಿ ಘಟಕದಲ್ಲಿ ವಿಲೇವಾರಿ ಮಾಡಲಾಯಿತು.

### ಅಕ್ಟೋಬರ್ 4ರಂದು ಮ್ಯಾನ್ಯುಯಲ್

# ಸ್ಕ್ಯಾವೆಂಜರ್, ಸಫಾಯಿ ಕರ್ಮಚಾರಿಗಳ ಸಭೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಸೆಪ್ಟೆಂಬರ್ 29-ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ನೇಮಕಾತಿ ನಿಷೇಧ ಮತ್ತು ಅವರ ಪುನರ್ವಸತಿ ಅಧಿನಿಯಮದಡಿ ರಚಿತವಾದ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ/ ಸಫಾಯಿ ಕರ್ಮಚಾರಿಗಳ ಸಭೆಯು ಅಕ್ಟೋಬರ್ 4ರಂದು ಮಧ್ಯಾಹ್ನ 12 ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ಸಭೆಯಲ್ಲಿ ಜನಪ್ರತಿನಿಧಿಗಳು ಉಪಸ್ಥಿತರಿರುವರು. ಜೊತೆಗೆ ಸಂಬಂಧಿಸಿದ ಅಧಿಕಾರಿಗಳು ಅಗತ್ಯ ಮಾಹಿತಿಯೊಂದಿಗೆ ಸಭೆಗೆ ಆಗಮಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆ.30 ರಂದು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಸಿದ್ದತೆ ಕುರಿತು ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.29-ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ನವೆಂಬರ್ 11, 2026 ಕ್ಕೆ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಸದಸ್ಯರ ಪದಾವಧಿ ಮುಕ್ತಾಯಗೊಳ್ಳಲಿದ್ದು, ನವೆಂಬರ್ 01, 2025 ಕ್ಕೆ ಅನ್ವಯಿಸುವಂತೆ ಮತದಾರರ ಪಟ್ಟಿಯನ್ನು ಸಿದ್ಧಪಡಿಸಲು ವೇಳಾಪಟ್ಟಿಯನ್ನು ಹೊರಡಿಸಿದ್ದು, ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಸಿದ್ದತೆ ಕುರಿತು ಚರ್ಚಿಸಲು ಸೆ.30 ರಂದು ಮಧ್ಯಾಹ್ನ 12 ಗಂಟೆಗೆ ಜಿಲ್ಲಾಧಿಕಾರಿ ಕಾರ್ಯಾಲಯದ ಕೆಸ್ವಾನ್ ಸಭಾಂಗಣದಲ್ಲಿ ಸಭೆ ಏರ್ಪಡಿಸಲಾಗಿದೆ. ಸಭೆಗೆ ಸಂಬಂಧಪಟ್ಟ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಸರ್ಕಾರಿ, ಖಾಸಗಿ ಅನುದಾನಿತ, ಖಾಸಗಿ ಅನುದಾನರಹಿತ ಶಾಲಾ/ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆಗಳ ಮಾಹಿತಿಯೊಂದಿಗೆ ಹಾಜರಿಯಾಗಲು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಯಚೂರು ಜಿಲ್ಲೆಯಲ್ಲಿ ಸೂರ್ಯಕಾಂತಿ ಉತ್ಪನ್ನಗಳ ಖರೀದಿ ಕೇಂದ್ರಗಳ ಸ್ಥಾಪನೆ: ಕೆ ನಿತೀಶ್

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಸೆಪ್ಟೆಂಬರ್ 29: ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ 2025-26ನೇ ಸಾಲಿನಲ್ಲಿ ಎಫ್.ಎ.ಕ್ಯೂ. ಗುಣಮಟ್ಟದ ಮುಂಗಾರು ಹಂಗಾಮಿನ ಸೂರ್ಯಕಾಂತಿ ಉತ್ಪನ್ನವನ್ನು ಖರೀದಿಸಲು ಜಿಲ್ಲೆಯಲ್ಲಿ ಖರೀದಿ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಸರ್ಕಾರದ ಈ ಯೋಜನೆಯ ಸದುಪಯೋಗಪಡಿಸಿಕೊಳ್ಳುವಂತೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

ಸರ್ಕಾರದ ಆದೇಶದಂತೆ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ 2025-26ನೇ ಸಾಲಿಗೆ ರೈತರಿಂದ ಮುಂಗಾರು ಹಂಗಾಮಿನ ಸೂರ್ಯಕಾಂತಿ ಉತ್ಪನ್ನವನ್ನು ಪ್ರತಿ ಎಕರಿಗೆ 4.00 ಕ್ವಿಂಟಾಲ್ ಹಾಗೂ ಪ್ರತಿ ರೈತರಿಂದ ಗರಿಷ್ಠ 20 ಕ್ವಿಂಟಾಲ್ ಎಫ್.ಎ.ಕ್ಯೂ ಗುಣಮಟ್ಟದ ಪ್ರತಿ ಕ್ವಿಂಟಾಲ್‌ಗೆ 7,721 ರೂ.ಗಳಂತೆ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಖರೀದಿಸಲಾಗುವುದು.

ಸೆಪ್ಟೆಂಬರ್ 26 ರಿಂದ ರೈತರ ನೋಂದಣಿ ಕಾಲಾವಧಿಯನ್ನು 80 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರೆಗೆ ನಿಗಧಿಪಡಿಸಿದೆ. ರೈತ-ರಿಂದ ಸೂರ್ಯಕಾಂತಿಯನ್ನು ಖರೀದಿಸುವ ಸಂಬಂಧ ರಾಯಚೂರು ತಾಲೂಕಿನ ಹುಣಸಿಹಾಳಹುಡಾ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಮೊಬೈಲ್ ಸಂಖ್ಯೆ: 9743695467, ಸಿಂಧನೂರು ತಾಲೂಕಿನ ಜವಳಗೇರಾ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಮೊಬೈಲ್ ಸಂಖ್ಯೆ:. 9964165509, ಹುಡಾ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಮೊಬೈಲ್ ಸಂಖ್ಯೆ: 9964315868, ಲಿಂಗಸಗೂರು ತಾಲೂಕಿನ ಮಟ್ಟೂರು ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಮೊಬೈಲ್ ಸಂಖ್ಯೆ: 7337773317, ಮೆದಕಿನಾಳ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಮೊಬೈಲ್ ಸಂಖ್ಯೆ: 9663704921, ಲಿಂಗಸುಗೂರು ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಮೊಬೈಲ್ ಸಂಖ್ಯೆ: 7483685720, ಮಾನವಿ ತಾಲೂಕಿನ ತೋರಣದಿನ್ನಿ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಮೊಬೈಲ್ ಸಂಖ್ಯೆ: 9902387316, ದೇವದುರ್ಗ ತಾಲೂಕಿನ ಜಾಲಹಳ್ಳಿ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಮೊಬೈಲ್ ಸಂಖ್ಯೆ: 7899312989, ಸಿರವಾರ ತಾಲೂಕಿನ ಸಿರವಾರ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಮೊಬೈಲ್ ಸಂಖ್ಯೆ: 9880891919 ಗಳಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಲಾಗಿದ್ದು, ರೈತರ ಬಾಂಧವರು ಫ್ರೂಟ್ಸ್ ಐ.ಡಿ ಯೊಂದಿಗೆ ತಮ್ಮ ಹತ್ತಿರದ ಖರೀದಿ ಕೇಂದ್ರಗಳಲ್ಲಿ ನೋಂದಾಯಿಸಿ ಸೂರ್ಯಕಾಂತಿ ಮಾರಾಟ ಮಾಡಿ ಸರ್ಕಾರದ ಯೋಜನೆಯ ಸದುಪಯೋಗ ಪರಿಡಿಸಕೊಳ್ಳಲು ಜಿಲ್ಲೆಯ ರೈತ ಬಾಂಧವರಲ್ಲಿ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ.

ಜಾಹೀರಾತಿಗಾಗಿ ಸಂಪರ್ಕಿಸಿರಿ: 9449732000

# ನಶಾಮುಕ್ತ ಆರೋಗ್ಯಕರ ಸಮಾಜ ಕಟ್ಟೋಣ : ಭಜಂತ್ರಿ



**ಮಲ್ಲಮ್ಮ ನುಡಿ ವಾರ್ತೆ**

ಬಾಗಲಕೋಟೆ,ಸೆ.29- ಯುವ ಸಮೂಹ ಮಾದಕ ವಸ್ತುಗಳ ಬಳಕೆಯಿಂದ ದೂರವಿರಬೇಕು. ಇದರಿಂದ ನಶಾಮುಕ್ತ ಆರೋಗ್ಯಕರ ಸಮಾಜ ಕಟ್ಟಲು ಸಾಧ್ಯವಿದೆ ಎಂದು ಬಾಗಲಕೋಟೆ ಅಬಕಾರಿ ಇಲಾಖೆ ಉಪ ಆಯುಕ್ತ ಹನಮಂತ ಭಜಂತ್ರಿ ಹೇಳಿದರು.

ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಅಬಕಾರಿ ಉಪ ಆಯುಕ್ತ ಕಛೇರಿ ಹಾಗೂ ಕಾಲೇಜಿನ ಐಕ್ಯೂಎಸಿ, ರಾಷ್ಟ್ರೀಯ ಸೇವಾ ಯೋಜನೆ ಘಟಕಗಳ ಸಹಯೋಗದಲ್ಲಿ ಸೋಮವಾರ ನಡೆದ ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ಮಾದಕ ವಸ್ತುಗಳು ದೇಶ ಮತ್ತು ನಾಡಿನ ಅಭಿವೃದ್ಧಿಗೆ ಮಾರಕವಾಗಿದ್ದು, ಮಾದಕ ವಸ್ತುಗಳ ಮಾರಾಟ ಮಾಡುವವರನ್ನು ಹಾಗೂ ಮಾದಕ ವ್ಯಸನಿಗಳನ್ನು ಗುರುತಿಸಿ, ತಡೆಗಟ್ಟುವುದು ಪ್ರತಿಯೊಬ್ಬ ನಾಗರಿಕರ ಜವಾಬ್ದಾರಿಯಾಗಿದೆ. ಯುವಕರು ಮಧ್ಯಪಾನ, ಮಾದಕ ವಸ್ತುಗಳ ಚಟುವಟಿಕೆಗಳಿಂದ ದೂರವಿದ್ದು ಸ್ವಾಸ್ಥ್ಯ ಸಮಾಜವನ್ನು ಕಟ್ಟಲು ಕಂಕಣಬದ್ಧರಾಗಬೇಕು ಎಂದು ಭಜಂತ್ರಿ ಹೇಳಿದರು.

ಅಬಕಾರಿ ಇಲಾಖೆಯ ಉಪ ಅಧೀಕ್ಷಕ ಅನಿಲಕುಮಾರ ನಂದೇಶ್ವರ, ಅಬಕಾರಿ ನಿರೀಕ್ಷಕ ಮಂಜುನಾಥ ಹಿರೇನಾಯ್ಕರ, ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ಮಾಹಿತಿ ನೀಡಿದರು.

ಪ್ರಾಂಶುಪಾಲ ಡಾ.ಅರುಣಕುಮಾರ ಗಾಳಿ ಪ್ರತಿಜ್ಞಾ ವಿಧಿ ಬೋಧಿಸಿ ಮಾತನಾಡಿ, ಮದ್ಯಪಾನ, ಗಾಂಜಾ, ಅಫೀಮು, ತಂಬಾಕುಗಳಂತಹ ಮಾದಕ ವಸ್ತುಗಳಿಂದ ಮುಕ್ತರಾಗಿರಬೇಕು ಎಂದು ಹೇಳಿದರು.

ಕಾಲೇಜಿನ ಐಕ್ಯೂಎಸಿ ಸಂಚಾಲಕ ಡಾ.ಬಸವರಾಜ ಬೀಳಗಿ, ಎನ್.ಎಸ್.ಎಸ್ ಘಟಕದ ಸಹ ಸಂಯೋಜನಾಧಿಕಾರಿ ಪ್ರೊ.ಸಂಪತ್ತಲಮಾಣಿ, ಡಾ.ಚಂದ್ರಶೇಖರ ಕಾಳನ್ನವರ ಸೇರಿದಂತೆ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಕಾಲೇಜಿನ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಸಮುದಾಯ ಶೌಚಾಲಯ ಬಳಕೆಗೆ ಜಾಗೃತಿ



**ಮಲ್ಲಮ್ಮ ನುಡಿ ವಾರ್ತೆ**

ಬಾಗಲಕೋಟೆ,ಸೆ.29-ತಾಲೂಕಿನ ಬೇವೂರ ಗ್ರಾಮದಲ್ಲಿ ಬಯಲು ಬಹಿರ್ದೆಸೆಗೆ ಕೊನೆ ಹಾಡುವ ಪ್ರಯತ್ನಕ್ಕೆ ಮುಂದಾಗಿರುವ ಗ್ರಾಮ ಪಂಚಾಯತಿಯ ಜಾಗೃತಿ ಕಾರ್ಯಕ್ರಮದಲ್ಲಿ ಸೋಮವಾರ ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಸುಭಾಸ ಸಂಪಗಾವಿ ಪಾಲ್ಗೊಂಡು ಬಯಲು ಬಹಿರ್ದೆಸೆಗೆ ಹೊರಟವರಿಗೆ ಹೂವಿನ ಹಾರ ಹಾಕಿ ಜಾಗೃತಿ ಮೂಡಿಸಿದರು.

ಬೆಳಿಗ್ಗೆ 6 ಗಂಟೆಗೆ ಬೇವೂರಿಗೆ ಆಗಮಿಸಿದ ಸಂಪಗಾವಿ, ಬಯಲು ಬಹಿರ್ದೆಸೆಗೆ ಹೊರಟವರನ್ನು ತಡೆದು ಸ್ವಚ್ಛತೆ, ಉತ್ತಮ ಆರೋಗ್ಯದ ಜೊತೆ ಆರೋಗ್ಯಪೂರ್ಣ ಸಮಾಜದ ತಿಳುವಳಿಕೆ ನೀಡಿ ಜಾಗೃತಿ ಮೂಡಿಸಿದರಲ್ಲದೇ ಮನೆ ಮನೆಗೆ ತೆರಳಿ ವೈಯಕ್ತಿಕ ಶೌಚಾಲಯ ನಿರ್ಮಿಸಿಕೊಳ್ಳುವಂತೆ ಸೂಚಿಸಿದರು. ಬಹಿರ್ದೆಸೆಗೆ ಹೊರಟವರನ್ನು ತಮ್ಮ ಬಳಿ ಕರೆದು ಹಾರ ಹಾಕಿ ಬಯಲು ಶೌಚ ಮುಕ್ತ ಗ್ರಾಮಕ್ಕೆ ಕೈಜೋಡಿಸುವಂತೆ ಮನವಿ ಮಾಡಿದರು. ಗ್ರಾಮದ ವಿವಿಧೆಡೆ ನಿರ್ಮಿಸಲಾಗಿರುವ ಸಾರ್ವಜನಿಕ ಶೌಚಾಲಯಗಳನ್ನು ಬಳಕೆ ಮಾಡುವಂತೆ ಹಾಗೂ ಮನೆಗಳಲ್ಲಿ ಕಟ್ಟಿಕೊಂಡಿರುವ ವೈಯಕ್ತಿಕ ಶೌಚಾಲಯಗಳನ್ನು ಬಳಸುವಂತೆ ತಿಳಿಸಿದರು. ಗ್ರಾಮ ಪಂಚಾಯತಿ ಅಧ್ಯಕ್ಷೆ ಫರೀದಾ ಗುರಗುನ್ನಿ, ಅಭಿವೃದ್ಧಿ ಅಧಿಕಾರಿ ಭೀಮಪ್ಪ ಇಟಗಿ, ಮಡ್ಡೇಸಾಬ ಗುರಗುನ್ನಿ, ಅಂಗನವಾಡಿ, ಆಶಾ ಕಾರ್ಯಕರ್ತರು, ಐಇಸಿ ಸಂಯೋಜಕರು, ಗ್ರಾಪಂ ಸಿಬ್ಬಂದಿ ಜಾಗೃತಿ ಮೂಡಿಸುವ ಕಾರ್ಯದಲ್ಲಿ ಪಾಲ್ಗೊಂಡಿದ್ದರು.



ಹುಮನಾಬಾದ:ತಾಲ್ಲೂಕಿನ ಮೋಳಕೇರಾ ಗ್ರಾಮದ ಷಣ್ಮುಖಯ್ಯ ಸ್ವಾಮಿಯವರ ಸುಪುತ್ರಿ ಶ್ರಾವಣಿ ಸ್ವಾಮಿ ನವರಾತ್ರಿ ಉತ್ಸವದ ಅಂಗವಾಗಿ ಭವಾನಿ ತಾಯಿಯ ವೇಷಧರಿಸಿ ಸಾರ್ವಜನಿಕರ ಗಮನ ಸೆಳೆದಳು. (ಮಲ್ಲಮ್ಮ ನುಡಿ ಚಿತ್ರ)

# ಹುನಗುಂದ ಪತ್ತಿನ ಸಹಕಾರಿ ಸಂಘಕ್ಕೆ 6 ಲಕ್ಷ ರೂ. ಲಾಭ



**ಮಲ್ಲಮ್ಮ ನುಡಿ ವಾರ್ತೆ**

ಬಾಗಲಕೋಟೆ,ಸೆ.29-ಜಿಲ್ಲೆಯ ಹುನಗುಂದ ಪಟ್ಟಣ ಪತ್ತಿನ ಸಹಕಾರಿ ಸಂಘ 2024-25 ನೇ ಸಾಲಿನಲ್ಲಿ 6.10 ಲಕ್ಷ ರೂ ನಿವ್ವಳ ಲಾಭ ಗಳಿಸಿದೆ ಎಂದು ಸಹಕಾರಿ ಸಂಘದ ಅಧ್ಯಕ್ಷ ರಾಜಶೇಖರ ಚಿತ್ತರಗಿ ಹೇಳಿದರು.

ಸಂಘದ ಕಾರ್ಯಾಲಯದಲ್ಲಿ ನಡೆದ 13 ನೇ ವಾರ್ಷಿಕ ಸರ್ವ ಸಾಧಾರಣ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಂಘವು ಪ್ರಸಕ್ತ ಸಾಲಿನಲ್ಲಿ 878 ಸದಸ್ಯರನ್ನು ಹೊಂದಿದ್ದು. 21.82 ಲಕ್ಷ ಶೇರು ಬಂಡವಾಳವನ್ನು ಹೊಂದಿದೆ, 11.40 ಲಕ್ಷ ನಿಧಿಗಳನ್ನು ಹೊಂದಿ,5.5 ಕೋಟಿ ದುಡಿಯುವ ಬಂಡವಾಳವನ್ನು ಹೊಂದಿದ್ದು, 4.50 ಕೋಟಿ ಠೇವು ಸಂಗ್ರಹವಾಗಿದೆ, 4.33 ಕೋಟಿ ಸಾಲವನ್ನು ವಿತರಿಸಲಾಗಿದೆ, ಸಂಘವು ಸಂಪೂರ್ಣ ಗಣಿಕೃತಗೊಂಡಿವೆ ಎಂದರು. ಸಂಘದ ನಿರ್ದೇಶಕ ವೀರಭದ್ರಯ್ಯ ಸರಗಣಾಚಾರಿ ಮಾತನಾಡಿ, ಮಾರ್ಚ 31 ಅಂತ್ಯಕ್ಕೆ 19.70 ಲಕ್ಷ ಲಾಭವಾಗಿದ್ದು ಅದರಲ್ಲಿ ಕ್ಯಾಶ್ ಸರ್ಟಿಫಿಕೇಟ್ ಠೇವು ಬಡ್ಡಿ, ಮಕ್ಕಳ ಭವಿಷ್ಯನಿಧಿಗಳ ಬಡ್ಡಿ ಮುಂಗಡ 13.60 ಲಕ್ಷ ಕೊಡಲಾಗಿ ಉಳಿದದ್ದು 6.10 ಲಕ್ಷ ನಿವ್ವಳ ಲಾಭವಾಗಿದ್ದು ಪ್ರಸಕ್ತ ವರ್ಷದಲ್ಲಿ ಶೇಕಡಾ 6 ರಷ್ಟು ಡಿವಿಡೆಂಡ ನೀಡಲಾಗುವುದು ಎಂದರು.

ಇನ್ನೋರ್ವ ನಿರ್ದೇಶಕ ಸಾಂತಪ್ಪ ಹೊಸಮನಿ ಮಾತನಾಡಿ, 2026 ಅಂತ್ಯಕ್ಕೆ ಸಂಘವು ಇನ್ನಷ್ಟು ಪ್ರಗತಿ ಹೊಂದಲು ಸಂಘದ ಗ್ರಾಹಕರು ಸಹಕರಿಸಬೇಕು ಹಾಗೂ ಸಿಬ್ಬಂದಿಗಳು ಶ್ರಮಿಸಬೇಕು ಎಂದು ಹೇಳಿದರು. ಮುಖ್ಯ ಕಾರ್ಯನಿರ್ವಾಹಕ ರಮೇಶ ತಾರಿವಾಳ ಮಾತನಾಡಿ, ಸಂಘವು 2012 ರಲ್ಲಿ 4 ಲಕ್ಷ ಬಂಡವಾಳದೊಂದಿಗೆ ಪ್ರಾರಂಭವಾಗಿ ಮಾರ್ಚ 2025 ಅಂತ್ಯಕ್ಕೆ 5.5 ಕೋಟಿ ದುಡಿಯುವ ಬಂಡವಾಳದೊಂದಿಗೆ ಪ್ರಗತಿ ಹೊಂದಿದೆ ಇದಕ್ಕೆ ನಮ್ಮ ಸಂಘದ ಗ್ರಾಹಕರು ಹಾಗೂ ಸಂಘದ ಆಡಳಿತ ಮಂಡಳಿ, ಸಂಘದ ಸಿಬ್ಬಂದಿಗಳ ಶ್ರಮವೇ ಕಾರಣ ಎಂದು ಹೇಳಿದರು. ನಿರ್ದೇಶಕರಾದ ಮಂಜುನಾಥ ರೇವಣಕರ, ಈರಣ್ಣ ಮ್ಯಾಗೇರಿ, ಅಶೋಕ ಕಲಾದಗಿ, ಬಸವರಾಜ ಕಂಬಾಳಿಮಠ, ಶಿವಕುಮಾರ ತಾರಿವಾಳ, ಅನಂತರಾವ್ ಪತ್ತಾರ, ಹನಮಂತಪ್ಪ ಕುಷ್ಟಗಿ, ಫರಿಜಾನ್ ನಾಯಕ ಸೇರಿದಂತೆ ಅನೇಕರು ಇದ್ದರು. ಶಾಂತಾ ಗಣಾಚಾರಿ ಸ್ವಾಗತಿಸಿದರು. ಸಂಗಮೇಶ ಹಳಪೇಟಿ ವಂದಿಸಿದರು.

# ರಿಯಲ್ ಎಸ್ಟೇಟ್ ಉದ್ಯಮಿ ಅಲ್ಲಾವುದ್ದಿನಗೆ ಸಾಮಾಜಿಕ ಸೇವಾ ರತ್ನ ಪ್ರಶಸ್ತಿ ಪುರಷ್ಕಾರ!



**ಮಲ್ಲಮ್ಮ ನುಡಿ ವಾರ್ತೆ**

ಶಹಾಪುರ:ಜೇವರ್ಗಿ, ಶಹಾಪುರ ,ಕೇಂಭಾವಿ ಗಳಲ್ಲಿ ರೀಯಲ್ ಎಸ್ಟೇಟ್ ಉದ್ಯಮಿಗಳಾಗಿ ಸಾಮಾಜದಲ್ಲಿ ಬಡವರ ಮತ್ತು ನಿರ್ಗತಿಕರಿಗೆ ಸಾಹಾಯಸ್ಥಗಳನ್ನು ನೀಡಿ, ಅವರಿಗೆ ತಮ್ಮ ಬದುಕಿನತ್ತ ಸಾಗಲು ಅನೂಕೂಲ ಮಾಡಿಕೊಟ್ಟು ಸಹಕಾರಿಯಾದ ಅಲ್ಲಾವುದ್ದಿನ ನೇಲೋಗಿಯವರಿಗೆ ಬೆಂಗಳೂರಿನ ಕರ್ನಾಟಕ ಸಾಹಿತ್ಯ ಮತ್ತು ಸಂಸ್ಕೃತಿಕ ಪ್ರತಿಷ್ಠಾನ, ಮತ್ತು ಸುವರ್ಣ ಪ್ರೆಸ್ ಅಸೋಷಿಯನ್ ಆಶ್ರೆಯದಲ್ಲಿ ಕನ್ನಡ ಸಾಹಿತ್ಯ ಪರಿಷತ್ ಭವನದ ಅಕ್ಕ ಮಾಹಾದೇವಿ ಮಂದಿರದಲ್ಲಿ ನಡೆದ ಶಿಕ್ಷಕರ ದಿನಾಚರಣೆ ಮತ್ತು ಡಾ.ಮಂಜುಳ ಪಾವಗಡರವರ ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಸಾಮಾಜಿಕ ಸೇವಾ ರತ್ನ ಪ್ರಶಸ್ತಿ ನೀಡ ಗೌರವಿಸಲಾಯಿತು, ಈ ಪ್ರಶಸ್ತಿಯನ್ನು ಮಾಜಿ ಮಂತ್ರಿ ಖ್ಯಾತ ಚಿಂತಕಿ, ಬಿ,ಟಿ, ಲಲಿತಾ ನಾಯ್ಕ ಪ್ರಶಸ್ತಿ ಪ್ರಧಾನ ಮಾಡಿದರು, ಸಂಸ್ಥೆ ನಿರ್ದೇಶಕ ಮಂಡಳಿಯವರಾದ ದೊಡ್ಡಪ್ಪ ಪೂಜಾರಿ ಹುಂಡೆಕಲ್ ಸೇರಿದಂತೆ ಚಿತ್ರನಟರು, ಸಾಹಿತಿಗಳು ಇಂದು ಸಂಜೆ ಪತ್ರಿಕೆ ಸಂಪಾದಕರು ಉಪಸ್ಥಿತರಿದ್ದರು,

# ಬೆಳೆ ಹಾನಿ ಪರಿಶೀಲಿಸಿದ ಶಾಸಕ ಜೆ.ಟಿ.ಪಾಟೀಲ



**ಮಲ್ಲಮ್ಮ ನುಡಿ ವಾರ್ತೆ**

ಬಾಗಲಕೋಟೆ,ಸೆ.29-ಅತಿ ಮಳೆಯಿಂದಾಗಿ ಬೀಳಗಿ ಮತಕ್ಷೇತ್ರ ವ್ಯಾಪ್ತಿಯ ಬಾಡಗಂಡಿ ಮತ್ತು ರೊಳ್ಳಿ ಗ್ರಾಮಗಳಲ್ಲಿ ಹಾನಿಗೊಳಗಾದ ವಿವಿಧ ಬೆಳೆ ಹಾಗೂ ಕುಸಿದ ಮಣ್ಣಿನ ಮನೆಗಳನ್ನು ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ ಸೋಮವಾರ ವೀಕ್ಷಣೆ ಮಾಡಿದರು.

ಬಾಡಗಂಡಿ ಮತ್ತು ರೊಳ್ಳಿ ಗ್ರಾಮಗಳ ವ್ಯಾಪ್ತಿಯಲ್ಲಿ ಹಾನಿಗೊಳಗಾದ ಈರುಳ್ಳಿ, ಮೆಕ್ಕೆಜೋಳ ಹಾಗೂ ಸೂರ್ಯಕಾಂತಿ ಸೇರಿದಂತೆ ಇತರೆ ಬೆಳೆಗಳನ್ನು ವೀಕ್ಷಣೆ ಮಾಡಿದರು. ಜಮೀನುಗಳಿಗೆ ಭೇಟಿ ನೀಡಿ ಬೆಳೆ ಹಾನಿಯ ಮಾಹಿತಿಯನ್ನು ಅಧಿಕಾರಿಗಳಿಂದ ಪಡೆದುಕೊಂಡರು. ಅತಿಯಾದ ಮಳೆಯಿಂದಾಗಿ ಸರಿಯಾಗಿ ಬೆಳೆ ಬಾರದೇ ರೈತ ಸಂಕಷ್ಟಕ್ಕೆ ಒಳಗಾಗಿದ್ದಾನೆ. ಆದ್ದರಿಂದ ಹಾನಿಗೆ ಸೂಕ್ತ ಪರಿಹಾರ ಒದಗಿಸಲು ಕ್ರಮಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಂತರ ಹೊಸ ರೊಳ್ಳಿ ಗ್ರಾಮಕ್ಕೆ ಭೇಟಿ ನೀಡಿದ ಅವರು, ಕುಸಿದ ಮಣ್ಣಿನ ಮನೆಗಳನ್ನು ವೀಕ್ಷಣೆ ಮಾಡಿ ತುರ್ತಾಗಿ 5 ಸಾವಿರ ರೂ.ಗಳನ್ನು ಒದಗಿಸುವ ಕೆಲಸವಾಗಬೇಕು. ಬಿದ್ದ ಮನೆಗಳ ಸರ್ವೆ ನಿಖರವಾಗಿರಬೇಕು. ಯಾವುದೇ ಮನೆಗಳು ಬಿಟ್ಟು ಹೋಗಬಾರದು. ಸರ್ವೆ ಕಾರ್ಯದಲ್ಲಿ ಮನೆ ಬಿದ್ದಿರುವ ಬಗ್ಗೆ ಶೇಕಡಾವಾರು ಪ್ರಮಾಣವನ್ನು ಪರಿಶೀಲಿಸಿ ಸೂಕ್ತ ಪರಿಹಾರ ದೊರೆಯುವ ನಿಟ್ಟಿನಲ್ಲಿ ಕೆಲಸ ಮಾಡುವಂತೆ ಸೂಚಿಸಿದರು.

ಹಾನಿ ಬಗ್ಗೆ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಬೀಳಗಿ ಮತಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟಾರೆಯಾಗಿ 203 ಮನೆಗಳನ್ನು ಹಾನಿಗೊಳಗಾಗಿವೆ. 5920 ಹೆಕ್ಟೆರ್ ತೋಟಗಾರಿಕೆ ಬೆಳೆ ಹಾಗೂ 7500 ಹೆಕ್ಟೆರ್ ಕೃಷಿ ಬೆಳೆ ಹಾನಿಯಾಗಿರುವುದನ್ನು ಅಂದಾಜಿಸಲಾಗಿದೆ. ಮುಖ್ಯವಾಗಿ ಈರುಳ್ಳಿ, ಸೂರ್ಯಕಾಂತಿ, ಮೆಕ್ಕೆಜೋಳ ಸೇರಿದಂತೆ ಇತರೆ ಬೆಳೆಗಳು ಹಾನಿಗೊಳಗಾಗಿದ್ದು, ಇದರಿಂದ ರೈತರು ನಷ್ಟವನ್ನು ಅನುಭವಿಸುತ್ತಿದ್ದಾರೆ. ಹಾನಿಯ ಬಗ್ಗೆ ಸೂಕ್ತ ಸರ್ವೆ ಮಾಡಿ ರೈತರಿಗೆ ಸರಕಾರದ ಮಾರ್ಗಸೂಚಿಯನ್ವಯ ಪರಿಹಾರ ಒದಗಿಸಲು ಕ್ರಮಕೈಗೊಳ್ಳುವಂತೆ ಸೂಚಿಸಲಾಗಿದೆ ಎಂದು ತಿಳಿಸಿದರು.

ಗ್ರಾಮ ಅಭಿವೃದ್ಧಿ ಅಧಿಕಾರಿಗಳು ಹಾಗೂ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ನಿಖರವಾದ ಸಮೀಕ್ಷೆ ಮಾಡಿ ಸೂಕ್ತ ಪರಿಹಾರ ದೊರೆಯುವಂತೆ ಆಗಬೇಕು. ಹಾನಿಗೊಳಗಾದ ಕೆಲವು ಪ್ರದೇಶಗಳಿಗೆ ಸಾಂಕೇತಿಕವಾಗಿ ಭೇಟಿ ನೀಡಿ ವೀಕ್ಷಣೆ ಮಾಡಲಾಗಿದೆ. ಅಧಿಕಾರಿಗಳು ಹಾನಿಗೊಳಗಾದ ಯಾವುದೇ ಜಮೀನು ಹಾಗೂ ಮನೆಗಳನ್ನು ಬಿಟ್ಟು ಹೋಗದ ರೀತಿಯಲ್ಲಿ ಜಂಟಿ ಸರ್ವೆ ನಡೆಸಿ ಸೂಕ್ತ ವರದಿಯನ್ನು ಸರಕಾರಕ್ಕೆ ಸಲ್ಲಿಸುವ ಕಾರ್ಯವಾಗಬೇಕೆಂದು ಜೆ.ಟಿ.ಪಾಟೀಲ ತಿಳಿಸಿದರು.

ಈ ಸಮಯದಲ್ಲಿ ಜಿಲ್ಲಾಧಿಕಾರಿ ಸಂಗಪ್ಪ, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ರವೀಂದ್ರ ಹಕಾಟಿ, ಬೀಳಗಿ ತಹಶೀಲ್ದಾರ ವಿನೋದ ಹತ್ತಳ್ಳಿ ಸೇರಿದಂತೆ ತಾಲೂಕಾ ಮಟ್ಟದ ಅಧಿಕಾರಿಗಳು ಇದ್ದರು.

# ರೈತರ ಬೆಳೆ ಹಾನಿಗೆ ಹೆಚ್ಚಿನ ಪರಿಹಾರ ನೀಡಲು ಆಗ್ರಹ

**ಮಲ್ಲಮ್ಮ ನುಡಿ ವಾರ್ತೆ**



ಹುಮನಾಬಾದ ತಾಲ್ಲೂಕಿನಲ್ಲಿ ಸುರಿದ ಭಾರಿ ಮಳೆಯಿಂದ ಬೆಳೆ ಹಾನಿಯಾದ ರೈತರಿಗೆ ಸರಕಾರ ಹೆಚ್ಚಿನ ಪರಿಹಾರ ಧನ ನೀಡಬೇಕೆಂದು ಆಶ್ರಯ ದೀಪ ಟ್ರಸ್ಟ್ (ರಿ) ಅಧ್ಯಕ್ಷ ಭೀಮರೆಡ್ಡಿ ಸಿಂಧನಕೇರಾನಕೇರಾ ಜಿಲ್ಲಾಡಳಿತಕ್ಕೆ ಆಗ್ರಹಿಸಿದ್ದಾರೆ. ಮಳೆಯಿಂದ ಹಾನಿಗೊಳಾಗದ ಮನೆಗಳಿಗೆ ಪರಿಹಾರ ಧನ ನೀಡಬೇಕೆಂದು ಆಗ್ರಹಿಸಿದ್ದಾರೆ. ಇಂದು ಮಂಗಳವಾರ ಮುಖ್ಯಮಂತ್ರಿಗಳು ವೈಜ್ಞಾನಿಕ ಸಮೀಕ್ಷೆಗೆ ಬರುತ್ತಿರುವುದರಿಂದ ಕಣ್ಣಾರೆ ಕಂಡು ರೈತರ ಬೆಳೆ ಹಾನಿ ವಿಕ್ಷೀಸಿ ಶೀಘ್ರ ರೈತರಿಗೆ ಪರಿಹಾರ ನೀಡಬೇಕೆಂದು ಆಗ್ರಹಿಸಿದ್ದಾರೆ.

# ಜಾತಿ ಅನ್ನುವುದುಅತ್ಯಂತ ನೀಚತನ ವೈಚಾರಿಕತೆ ಚಿಂತನೆ ನಡೆಯಲಿ ಮಾಜಿ ಸಚಿವೆ ಚಿಂತಕಿ ಬಿ ಟಿ. ಲಲೀತ ನಾಯಕ



**ಮಲ್ಲಮ್ಮ ನುಡಿ ವಾರ್ತೆ**

**ಶಾಹಪೂರ:** ಅಲ್ಲಾಉದ್ದೀನ ನೆಲೋಗಿರವರಿಗೆ ರಾಜ್ಯಮಟ್ಟದ ಸಮಾಜಸೇವಾ ರತ್ನ ಪ್ರಶಸ್ತಿ ಪ್ರದಾನ ಜೇವರ್ಗಿ ರಾಜ್ಯಮಟ್ಟದ ಶಿಕ್ಷಕರ ಸಾಹಿತ್ಯ ಸಮ್ಮೇಳನ ಶಾಂತಿ ಪ್ರೀತಿಯ ಇಂದ ಈ ಜಗತ್ತು ನೋಡಬೇಕು.ಸಮಸ್ಯೆ ಗಳ ಇಟ್ಟುಕೊಂಡು ಬಾಳಬಾರದು.ಅವಶ್ಯಕತೆ ಗಳಿಗೆ ಸಮಸ್ಯೆ ಗಳು ಉಂಟಾಗುತ್ತವೆ. ಪಂಚಾಯತ ಗಳಿಂದ ಮಂತ್ರಿಗಳವರೆಗೆ ಪ್ರಮಾಣಿಕ ಪ್ರಯತ್ನ ಮಾಡಿದರೆ ಅಭಿವೃದ್ಧಿ ಸಾಧ್ಯ.ರಾಜಕಾರಣಿ ಗಳು ತಮ್ಮ ಶೈಕ್ಷಣಿಕ ವ್ಯವಸ್ತೆ ಬದಲಾವಣೆ ಮಾಡಿಕೊಂಡುಜನ ಸಾಮಾನ್ಯರಿಗೆ ಸಮಪರ್ಪಣೆಯಾಗಲಿ.ಶಿಕ್ಷಣದಿಂದ ನಾವು ಸರ್ವ ಸ್ವ ಗೆಲ್ಲಬಹುದು. ಮರಳುಗಾರಿಕೆ.ಅಕ್ರಮ ಚಟುವಟಿಕೆಗಳನ್ನು ಮರೆಯಾಗಬೇಕು.ಜಾತಿ ಅನ್ನುವದು ಅತ್ಯಂತ ನಿಚತನವಾದದ್ದು.ವೈಚಾರಿಕ ಚಿಂತನೆ ನೆಡಯಬೇಕು. ಮಾಜಿ ಸಚಿವ ಬಿ ಟಿ ಲಲೀತ ನಾಯಕ ಹೇಳಿದರು.

ಜೇವರ್ಗಿ ತಾಲೂಕೀ ನ ನೆಲೋಗಿ ಗ್ರಾಮದ ಅಲ್ಲಾಉದ್ದೀನ ನೆಲೋಗಿರವರಿಗೆ ರಾಜ್ಯಮಟ್ಟದ ಸಮಾಜಸೇವಾ ರತ್ನ ಪ್ರಶಸ್ತಿ ಅಬ್ಬೆ ತುಮುಕೂರು ಡಿ ಎಡ ಕಾಲೇಜು ಉಪನ್ಯಾಸಕರಾದ ಲಕ್ಮ ಮರಡ್ಡಿ ಗ್ರಾ ಮ ಪಂಚಾಯತ್ ಸದಸ್ಯರಾದ ಗೌತಮ ಕ್ರಾಂತಿ ಸಿದ್ರಾಮಪ್ಪ ಕಡ್ಡಿಮನಿ ತಾಯಮ್ಮ ದೋರನಹಳ್ಳಿ ಮಜುನಾಥ ಎಸ್ ಮೇತ್ರೆ ಸತ್ಯೆ ಮ್ಮ ಭಾವಿಮನಿ ವಕೀಲರು ಗೀತಾ ಜಾದವ ಯಾದಗಿರಿ ಶಿವಶಂಕರ ಸುರಪೂರ ಪ್ರಶಸ್ತಿ ಪ್ರದಾನ ಮಾಡಲಾಯಿತು ಸಮಾರಂಭಾವನ್ನು ರಾಜ್ಯಮಟ್ಟದ ಕರ್ನಾಟಕ ಸಾಹಿತ್ಯ ಸಾ ಪ್ರ ಸಮಿತಿ ಸಹಯೋಗದಲ್ಲಿ ಶಿಕ್ಷಕರ ಸಾಹಿತ್ಯ ಸಮ್ಮೇಳನದಲ್ಲಿ ಪ್ರಧಾನ ಮಾಡಿ ಮಾತಾನಾಡಿದವರು ರಾಜ್ಯದಲ್ಲಿ ಇವರು ಸಮಾಜಿಕ ಸೇವೆ ಗುರುತಿಸಿ ಶಿಕ್ಷಕರ ಸಾಹಿತ್ಯ ಸಮ್ಮೇಳನ ಹಾಗೂ ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಮಾಡಿಯಿರುವುದು ನಿಜಕ್ಕುಶ್ಲಾಘನೆ ಎಂದು ಗುಣಗಾನ ಮಾಡಿದರು ಬೆಂಗಳೂರನ ಕರ್ನಾಟಕ ಸಾಹಿತ್ಯ ಮತ್ತು ಸಾಂಸ್ಕೃತಿಕ ಪ್ರತಿಷ್ಠಾನ ಮತ್ತು ಸುವರ್ಣ ಕರ್ನಾಟಕ ಪ್ರೇಸ್ ಸೋಸಿಯೇಷನ ಸಹಯೋಗದಲ್ಲಿ ರಾಜ್ಯ ಮಟ್ಟದ ಶಿಕ್ಷಕರ ಸಾಹಿತ್ಯ ಸಮ್ಮೇಳನ ಪುಸ್ತಕ ಲೋಕಾರ್ಪಣೆ, ಸಾಧಕರಿಗೆ ಸನ್ಮಾನ ಮಾಡಿ ಅಧ್ಯಕ್ಷತೆ ವಹಿಸಿ ಮಾತಾನಾಡಿದರು ಮುಖ್ಯ ಅತಿಥಿಗಳು ಇಂದು ಸಂಜೆ ದಿನ ಪತ್ರಕೆ, ಸಂಪಾದಕರಾದ ಡಾ. ವೈ ಜಿ ಪದ್ಮ ನಾಗರಾಜ ಪರಿಶಿಷ್ಟ ಪಂಗಡ ಕಾಂಗ್ರೆಸ ರಾಜ್ಯ ಪ್ರಧಾನ ಕಾರ್ಯದರ್ಶಿ . ರಮೇಶ ದೊರೆ ಖ್ಯಾತ ಲೇಖಕರಾದ ಮಣ್ಣಿ ಮೋಹನ್ ರಾಜಕೀಯ ಮುಖಂಡರು ಸಮಾಜ ಸೇವಕ ರು ಕನ್ನಡ ಸಂಘ ಟ ಕರಾ ದ ಡಾ. ದೊಡ್ಡಪ್ಪ ಪೂಜಾರಿ ಹುಂಡೇಕಲ್ಲ ಯಾದಗಿರಿ ಖ್ಯಾತ ನಟ ನಿರೂಪಕ ಸೈಮಲ್ ಶಿವು ಮಹಿಳೆ ಮತ್ತು ಮಕ್ಕಳು ಹಕ್ಕುಗಳು ಹೋರಾಟಗಾರತಿ ಧನಲಕ್ಷ್ಮೀ ವೈ. ಎನ ಕನ್ನಡ ಉಪನ್ಯಾಸಕರಾದ ಬುದ್ಧ ಬಸವ ಗಾಂಧಿ ಸಾ ಡಾ. ರಾಮಲಿಂಗೇಶ್ವರ (ಸಿಸಿರಾ ) ಕನ್ನಡ ಸಾಹಿತ್ಯಗಳು ಡಾ. ಪಿ ವೈ ಇಮಾನ್ಯುಯಲ್,ಕರ್ನಾಟಕ ಸಾಹಿತ್ಯ ಸಾ ಪ್ರ ಅಧ್ಯಕ್ಷ ರಾದ ಡಾ. ಮಂಜುಳಾ ಪಾವಗಡ ಕ ಕಾ ನಿ ಪತ್ರಕರ್ತ ಸಂಘದ ಜಿಲ್ಲಾ ಅಧ್ಯಕ್ಷ ಈರಣ್ಣ ಹಾದಿಮನಿ ಜೇವರ್ಗಿ ತಾಲೂಕು ಪತ್ರಕರ್ತ ಸಂಘದ ಅಧ್ಯಕ್ಷ ಮರೆಪ್ಪ ಬೇಗಾರ್ ನಾಡಗೀತ ಪ್ರಕಾಶ್ ಸಾಗರ ಸ್ವಾಗತ ಎಂ ಪಿ ಮಂಜುನಾಥ ನಿರೂಪಣೆ ನಂದದೀಪ್ ಸೇರಿದಂತೆ ಅನೇಕರು. ಇದ್ದರು.

# ಕುಂಭದ್ರೋಹಣ ಮಳೆ ಜನಜೀವ ಅಸ್ತವ್ಯಸ್ಥ!

# ಮಳೆ ನಿಂತ ಮೇಲೆ ಸಚಿವ ದರ್ಶನಾಪುರ ಹಳ್ಳಿ ದರ್ಶನ-ಮಾಜಿ ಶಾಸಕ ಪಿ ರಾಜು ಆರೋಪ

**ಮಲ್ಲಮ್ಮ ನುಡಿ ವಾರ್ತೆ**



ಶಹಾಪುರ:ಕಳೆದ ನಾಲ್ಕು ತಿಂಗಳಿಂದಲೂ ಕರಾವಳಿ ಸೇರಿದಂತೆ ಉತ್ತರ ಕರ್ನಾಟಕದ ಭಾಗದ ಜಿಲ್ಲೆಗಲ್ಲೂ ಕುಂಭ್ರದ್ರೋಹಣ ಮಳೆಯಾಗಿ ಅತಿವೃಷ್ಟಿ ಹಾನಿಯಾಗಿದೆ, ಸೆ,26,ಮತ್ತು 27ರಂದು ಸುರಿದ ಈ ಮಳೆ ಜನರ ಬದುಕನ್ನೆ ಕೊಚ್ಚಿಕೊಂಡು ಹೋಗಿದೆ, ಪ್ರಸ್ತುತ ಸ್ಥಿತಿಯಲ್ಲಿ ಜಿಲ್ಲಾ ಉಸ್ತುವಾರಿ ಮಂತ್ರಿ ಶರಣಬಸ್ಸಪ್ಪಗೌಡ ದರ್ಶನಾಪುರ,ದರ್ಶನ ನೀಡದೆ ಕಲಬುರ್ಗಿಯಲ್ಲೆ ಉಳಿದುಕೊಂಡಿದ್ದು ನ್ಯಾಯವೇ? ಎಂದು ಕುಡಚಿ ಕ್ಷೇತ್ರದ ಮಾಜಿ ಶಾಸಕ ಪಿ,ರಾಜು ಪ್ರಶ್ನಿಸಿದರು, , ಅವರು ಬಿಜೆಪಿ ಮುಖಂಡರ ಮನೆಯಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದರು, ಭೀಮಾ ನದಿ ದಡದಲ್ಲಿ ಬರುವ ಅನೇಕ ಗ್ರಾಮಗಳಲ್ಲಿ ಜಲಾವೃತಗೊಂಡಿದ್ದರೂ ಸಚಿವರ ಖಾಸಿಗಿ ಕಾರ್ಯಕ್ರಮದಲ್ಲಿ ಬಿಜೀಯಾಗಿದ್ದರು, ಮಳೆ ನಿಂತ ಮೇಲೆ ಹಳ್ಳಿ ಸುತ್ತಿದರದೆನು? ಫಲ ಸಂತ್ರಸ್ತರ ದುಃಖ ಪರಿಹಾರವಾದೀತೆ? ಎನ್,ಡಿ,ಆರ್, ನೀಯಮವಳಿಯಂತೆ ಪರಿಹಾರ ನೀಡಬೇಕು ಎಂದು ಎನ್ನುವ ಕಾಂಗ್ರೆಸ್ ಸರ್ಕಾರ ಸ್ವಂತ ರಾಜ್ಯ ಸರ್ಕಾರದ ಅನುಧಾನ ನೀಡಲಿ ಎಂದ ಅವರು, ,ಸಂತ್ರಸ್ತರ ಹಾರೈಕೆ ಕೇಂದ್ರಗಳನ್ನು ಸ್ಥಾಪಿಸುವಲ್ಲಿ ಸರ್ಕಾರ ನಿರ್ಲದೋರಣೆ ತೋರುತ್ತಿದೆ, ಮನೆಯೊಳಗೆ ನೀರು ನುಗ್ಗಿದ ಮನೆಗಳಿಗೆ ಪುನರ್ ನಿರ್ಮಾಣಕ್ಕೆ ಸರ್ಕಾರ 5 ಲಕ್ಷ ರೂ, ಬಿಡುಗಡೆ ಮಾಡಬೇಕು, ರಾಜ್ಯ ಸರ್ಕಾರ ತಕ್ಷಣವೆ ಪ್ರತಿ ನೊಂದ ರೈತರಿಗೆ

> ಸಚಿವರು ನಗರ ಪ್ರದಕ್ಷಣೆ ಮಾಡಿ ತಾವು ಮಾಡುತ್ತಿರುವ ಕಾಮಗಾರಿಗಳನ್ನು ಸಚಿವ ದರ್ಶನಾಪುರವರು ತಾವೇ ವಿಕ್ಷಣೆ ಮಾಡಿತ್ತಿರುವದು ಬಿಟ್ಟರೆ ಯಾವುದೆ ಅಭಿವೃದ್ದಿ ಕಾಮಗಾರಿಗಳು ಇಂದು ಕಳೆಪೆಯಾಗಿ ಹಳ್ಳ ಹಿಡಿಯುತ್ತಿವೆ, ದಾರಾಕಾರ ಮಳೆಯಾದರೂ ಸಚಿವ ದರ್ಶಾನಾಪುರವರು ಯಾವ ಹಳ್ಳಿಗೆ ಹೋಗಿಲ್ಲ. ಕೇವಲ ಸಭೆಗಳಿಗೆ ಮೀಸಲಾದ ಇವರ ಕಾರ್ಯವೈಖರಿಗಳಿಂದ ಇಂದು ಯಾವ ಕಚೇರಿಗಳಲ್ಲಿ ಅಧಿಕಾರಿಗಳು ಕಾಣ ಸಿಗದೆ ಬಾಗಿಲು ಹಾಕಿಕೊಂಡಿರುತ್ತಾರೆ, ಇದರಿಂದ ಅಧಿಕಾರಿಗಳು ರಾಜಕಾರಣಿಗಳ ಕೈಗೊಂಬೆಯಾಗಿ ವರ್ತನೆ ಮಾಡುತ್ತಿದ್ದಾರೆ,

ಸಂತ್ರಸ್ಥರಿಗೆ 30 ಸಾವಿರ ನೀಡಬೇಕು ಎಂದು ಪಿ,ರಾಜು ಆಗ್ರಹ ಮಾಡಿದರು,ಶಿಘ್ರದಲ್ಲಿ ಸಂತ್ರಸ್ಥ ಕುಟಂಬಗಳಿಗೆ 10 ಸಾವಿರ ನೀಡಬೇಕು ಎಂದು ಅವರು ಒತ್ತಾಯ ಮಾಡಿದರು, ಈ ಸಂಧರ್ಭದಲ್ಲಿ ಬಿಜೆಪಿ ನಾಯಕ ಅಮೀನರಡ್ಡಿ ಯಾಳಗಿ ಯಾದಗಿರಿ ಜಿಲ್ಲಾ ಬಿಜೆಪಿ ಅಧ್ಯಕ್ಷರಾದ ಬಸವರಾಜಪ್ಪಗೌಡ ವಿಬೂತಿಹಳ್ಳಿ ಮಾತನಾಡಿ ನೊಂದವರ ಪರಿವಹಾರಕ್ಕೆ ಶಿಘ್ರ ಸರ್ಕಾರ ನೇರವಿಗೆ ಬರಬೇಕು ಎಂದು ಅವರು ಒತ್ತಾಯ ಮಾಡಿದರು, ಈ ಸಮಯದಲ್ಲಿ ಯಾದಗಿರಿ ಬಿಜೆಪಿ ಯುವ ಮುಖಂಡರಾದ ರಾಚನಗೌಡ ಕಂದಕೂರ,ಜಿಲ್ಲಾ ಕಾರ್ಯದರ್ಶಿ ಮೇಲಪ್ಪಗುಳಗಿ, ಚಂದ್ರು ಯಾಳಗಿ, ತಾಲುಕಾ ಅದ್ಯಕ್ಷರಾದ ತಿರುಪತಿ ಹತ್ತಿಕಟಗಿ, ಅಡಿವೆಪ್ಪಾ ಜಾಕಾ, ರಾಜುಗೌಡ ಗುರು ಕಾಮಾ ಸೇರಿದಂತೆ ಅನೇಕರು ಹಾರಿದ್ದರು,

# ಭಾಲ್ಕಿ-ಹುಮನಾಬಾದ್, ಬಸವಕಲ್ಯಾಣ ಮಾರ್ಗ ಬಂದ್



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಸೆ.29: ತಾಲ್ಲೂಕಿನ ದಾಡಗಿ ಸೇತುವೆ ಮೇಲಿಂದ ನೀರು ಹರಿಯುತ್ತಿರುವುದರಿಂದ ಭಾಲ್ಕಿ–ಹುಮನಾಬಾದ್, ಬಸವಕಲ್ಯಾಣ ಮಾರ್ಗ ಬಂದ್ ಆಗಿದೆ.

ಜನರ ಸುರಕ್ಷತೆಯ ದೃಷ್ಟಿಯಿಂದ ರಸ್ತೆಯ ಎರಡು ಕಡೆಗಳಲ್ಲಿ ಬ್ಯಾರಿ–ಕೇಡ್ ಅಳವಡಿಸಿ ಪೊಲೀಸರನ್ನು ನಿಯೋಜಿಸಲಾಗಿದೆ.


ಶನಿವಾರ ರಾತ್ರಿ ಹೆಚ್ಚಿನ ಪ್ರಮಾಣದಲ್ಲಿ ಮಳೆ ಸುರಿದಿರುವುದರಿಂದ ಕಾರಂಜಾ ಜಲಾಶಯಕ್ಕೆ ಸುಮಾರು 13 ಸಾವಿರ ಕ್ಯೂಸೆಕ್ ನೀರಿನ ಒಳಹರಿವು ಬಂದಿದೆ.

ಜಲಾಶಯದ ನೀರಿನ ಮಟ್ಟ ಕಾಪಾಡಲು ಭಾನುವಾರ ಸುಮಾರು ಹದಿಮೂರು ಸಾವಿರ ಕ್ಯೂಸೆಕ್ ನೀರು ಕಾರಂಜಾ ನದಿಗೆ ಬಿಡಲಾಗಿದೆ.

ಶನಿವಾರ 7 ಸಾವಿರ ಕ್ಯೂಸೆಕ್ ನೀರು ಹರಿಯಬಿಡಲಾಗಿತ್ತು.

ಹಾಗಾಗಿ, ಸೇತುವೆ ಮೇಲಿಂದ ನೀರು ಹರಿಯುತ್ತಿದೆ ಎಂದು ತಹಶೀಲ್ದಾರ್ ಮಲ್ಲಿಕಾರ್ಜುನ್ ವಡ್ಡನಕೇರಿ ತಿಳಿಸಿದ್ದಾರೆ.

ಕಳೆದ ಮೂರು ದಿನಗಳಿಂದ ಇಂಚೂರು, ಲಖನ ಗಾಂವ್ ಸೇರಿದಂತೆ ಇತರ ಸೇತುವೆಗಳ ಮೇಲಿಂದ ನೀರು ಹರಿಯುತ್ತಿರುವುದರಿಂದ ಮಹಾರಾಷ್ಟ್ರದ ನೀಲಂಗಾ, ಹುಲಸೂರು, ಮೆಹಕರ ಸೇರಿದಂತೆ ಇತರೆಡೆಯ ಗ್ರಾಮಗಳಿಗೆ ರಸ್ತೆ ಸಂಪರ್ಕ ಕಡಿತಗೊಂಡಿದೆ.




# ಸಿಎಂಗೆ ಕಲ್ಯಾಣ ಕರ್ನಾಟಕದ ಬಗ್ಗೆ ಕಾಳಜಿಯಿಲ್ಲ: ವಿಜಯೇಂದ್ರ ವಾಗ್ದಾಳಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಸೆ. 29 : ರಾಜ್ಯದ ಮುಖ್ಯಮಂತ್ರಿಗೆ ಕಲ್ಯಾಣ ಕರ್ನಾಟಕದ ಬಗ್ಗೆ ಕಾಳಜಿಯಿಲ್ಲ. ಈ ಭಾಗದಲ್ಲಿ ರೈತರ ಬೆಳೆಗಳು ಸಂಪೂರ್ಣವಾಗಿ ಸರ್ವನಾಶವಾಗಿದೆ. ಕಳೆದ ಒಂದು ತಿಂಗಳಿಂದ ಮಳೆಯಾಗಿ ಎಲ್ಲಾ ಬೆಳೆಗಳು ನಾಶವಾಗಿದೆ. ರೈತರ ವಿಚಾರದಲ್ಲಿ ತಾತ್ಸಾರ ಬೇಡ ಎಂದು ಬಿವೈ ವಿಜಯೇಂದ್ರ ಹೇಳಿಕೆದರು.

ಬೀದರ್ ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವ ಸಚಿವರು ಕಡಿದು ಕಟ್ಟೆಹಾಕುತ್ತಿದ್ದಿರಾ. ಸಿಎಂ ಸಿದ್ದರಾಮಯ್ಯ ಬೆಂಗಳೂರಿಗೆ ಸೀಮೀತರಾಗಿದ್ದಾರೆ. ಇಂಥಹ ಸಮಯದಲ್ಲಿ ಸಿಎಂ ಹಾಗೂ ಸಚಿವರ ಹುಡುಗಾಟ ಬೇಡ. ಸಿಎಂ, ಸಚಿವರು ಬರೀ ವಿಡಿಯೋ ಕಾನ್ಫರೆನ್ಸ್ ಗೆ ಮಾತ್ರ ಸೀಮಿತರಾಗಿದ್ದಾರೆ. ರಾಜ್ಯ ಸರ್ಕಾರದ ಜವಾಬ್ದಾರಿ ತಮ್ಮ ಮಾಡುತ್ತಿಲ್ಲ ಎಂದರು.

ಬಿಎಸ್ ಯಡಿಯೂರಪ್ಪ ಅವರು ಮನೆ ಕಳೆದುಕೊಂಡವರಿಗೆ ಕೇಂದ್ರದ ಕಡೆ ನೋಡದೆ ಪರಿಹಾರ ಕೊಟ್ಟಿದ್ದರು. ಇನ್ನು ತಡ ಮಾಡದೆ ನೀವು ಸಚಿವರು ಇಲ್ಲಿಗೆ ಧಾವಿಸಿ ಎಂದು ವಾಗ್ದಾಳಿ ನಡೆಸಿದರು.

ಬೀದರ್ ತಾಲೂಕಿನಲ್ಲಿ ಖಾಶೆಂಪುರ, ಮರ್ಜಾಪೂರ್, ಬುಧುರಾ ಗ್ರಾಮದಲ್ಲಿ ನೆರೆ ವೀಕ್ಷಣೆ ಮಾಡಿದ ವಿಜಯೇಂದ್ರ ಮುಂದೆ ರೈತರು ತಮ್ಮ ಅಳಲನ್ನು ತೊಡಿ–ಕೊಂಡರು. ವಿಜಯೇಂದ್ರ ಪರಿಹಾರ ಕೊಡಿಸುವುದಾಗಿ ಸಾಂತ್ವನ ಹೇಳಿದರು. ಜಿಲ್ಲೆಯಲ್ಲಿ ಬೆಳೆನಾಶದ ಬಗ್ಗೆ ಮಾಹಿತಿ ಪಡೆದ ವಿಜಯೇಂದ್ರ ಪರಿಹಾರದ ಬಗೆಗೂ ಅಧಿಕಾರಿಗಳೊಂದಿಗೆ ಚರ್ಚೆ ಮಾಡಿದರು. ಛಲವಾದಿ ನಾರಾಯಣಸ್ವಾಮಿ, ಮಾಜಿ ಸಚಿವ ಪ್ರಭು ಚೌಹಾಣ್, ಶಾಸಕ ಶೈಲೇಂದ್ರ ಬೆಲ್ದಾಳೆ ಸಾಥ್ ನೀಡಿದರು.

# ರಾಜ್ಯದ ಮುಖ್ಯಮಂತ್ರಿಗಳ ಪ್ರವಾಸ



ಕಲಬುರಗಿ,ಸೆ.29– ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ವಿಶೇಷ ವಿಮಾನದ ಮೂಲಕ ಸೆಪ್ಟೆಂಬರ್ 30 ರಂದು ಮಂಗಳವಾರ ಬೆಳಿಗ್ಗೆ 10.40 ಗಂಟೆಗೆ ಕಲಬುರಗಿಗೆ ಆಗಮಿಸಿ, ಅಧಿಕಾರಿಗಳೊಂದಿಗೆ ಚರ್ಚೆ/ ಸಭೆ ನಡೆಸುವರು.

ಅಂದು ಮಧ್ಯಾಹ್ನ 12.30 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಕಲಬುರಗಿ ಜಿಲ್ಲೆ ಸೇರಿದಂತೆ ಮಳೆಯಿಂದ ಹಾನಿಗೊಳಗಾದ ಪ್ರದೇಶಗಳ ವೈಮಾನಿಕ ಸಮೀಕ್ಷೆ ನಡೆಸುವರು. ನಂತರ ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಳೆಹಾನಿ ಪ್ರದೇಶಗಳಲ್ಲಿ ಕೈಗೊಂಡಿರುವ ಪರಿಹಾರ ಕಾರ್ಯಗಳ ಕುರಿತು ಪ್ರಗತಿ ಪರಿಶೀಲನೆ ನಡೆಸುವರು. ನಂತರ ಪತ್ರಿಕಾಗೋಷ್ಠಿ ನಡೆಸಿ, ಸಂಜೆ 4.25 ಗಂಟೆಗೆ ಕಲಬುರಗಿಯಿಂದ ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

# ಬೀದರ್ ಮಹಾಮಳೆ: ವೈಮಾನಿಕ ಸಮೀಕ್ಷೆ ನಡೆಸಲಿರುವ ಸಿಎಂ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಸೆ. 29: ಜಿಲ್ಲೆಯಲ್ಲಿ ಕಳೆದ ಒಂದು ವಾರದಿಂದ ಸುರಿಯುತ್ತಿರುವ ಧಾರಾಕಾರ ಮಳೆಯಿಂದ ಭಾರೀ ಪ್ರಮಾಣದ ಬೆಳೆ, ಮನೆ ಹಾನಿಯ ಜೊತೆಗೆ ಮೂಲಸೌಕರ್ಯಕ್ಕೂ ಹಾನಿ ಆಗಿದ್ದು, ವೈಮಾನಿಕ ಸಮೀಕ್ಷೆ ನಡೆಸಿ, ವಿಶೇಷ ಪ್ಯಾಕೇಜ್ ನೀಡುವಂತೆ ಮುಖ್ಯಮಂತ್ರಿಗಳಿಗೆ ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ ಖಂಡ್ರೆ ಮನವಿ ಮಾಡಿದ್ದಾರೆ. ಭಾನುವಾರ ರಾತ್ರಿ ಸಚಿವರ ಹೀಂಖಾನ್ ಜೊತೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಮನವಿ ಅರ್ಪಿಸಿದ ಬಳಿಕ ಮಾತನಾಡಿದ ಈಶ್ವರ ಖಂಡ್ರೆ, ತಮ್ಮ ಮನವಿಗೆ ಮುಖ್ಯಮಂತ್ರಿಗಳು ಸಕಾರಾತ್ಮಕವಾಗಿ ಸ್ಪಂದಿಸಿದ್ದು ಸೆ. 30 ರಂದು ವೈಮಾನಿಕ ಸಮೀಕ್ಷೆ ನಡೆಸುವ ಭರವಸೆ ನೀಡಿದ್ದಾರೆ ಎಂದರು. ಹವಾಮಾನ ಬದಲಾವಣೆ ಮತ್ತು ಜಾಗತಿಕ ತಾಪಮಾನ ಏರಿಕೆಯ ಪರಿಣಾಮವಾಗಿ ಋತುಮಾನಗಳಲ್ಲಿ ಏರುಪೇರಾಗುತ್ತಿದ್ದು, ಇದರ ಪರಿಣಾಮ ಗಡಿ ಜಿಲ್ಲೆ ಬೀದರ್ ಮೇಲೂ ಆಗುತ್ತಿದೆ. ಹೆಚ್ಚಿನ ಕೈಗಾರಿಕೆ, ವಾಣಿಜ್ಯ ಚಟುವಟಿಕೆ ಇಲ್ಲದ ನಮ್ಮ ಜಿಲ್ಲೆಯ ಶೇ.75ರಷ್ಟು ಜನರ ಬದುಕು ಕೃಷಿಯನ್ನೇ ಅವಲಂಬಿಸಿದ್ದು, ಈ ವರ್ಷ 4.31 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ನಡೆದಿದೆ.

ಆದರೆ, ಆಗಸ್ಟ್ ತಿಂಗಳಲ್ಲೇ ಸುರಿದ ಅನಿರೀಕ್ಷಿತ ಪ್ರಮಾಣದ ಮಳೆಯಿಂದ ಶೇ.25ರಷ್ಟು ಬೆಳೆ ನಷ್ಟವಾಗಿತ್ತು. ಈಗ ಸೆಪ್ಟೆಂಬರ್ ನಲ್ಲಿ ಮತ್ತೆ ವಿಪರೀತ ಮಳೆ ಸುರಿಯುತ್ತಿದ್ದು, ರಾಶಿಗೆ ಬಂದ ಹೆಸರು, ಉದ್ದು, ತೊಗರಿ, ಸೋಯಾ ಸೇರಿದಂತೆ ಎಲ್ಲ ಬೆಳೆ ಸಂಪೂರ್ಣ ಹಾನಿಯಾಗಿದೆ. ಇದರಿಂದ ನಮ್ಮ ಜಿಲ್ಲೆಯ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಈಶ್ವರ ಖಂಡ್ರೆ ಮುಖ್ಯಮಂತ್ರಿಗಳಿಗೆ ಮಾಹಿತಿ ನೀಡಿದರು.

ಒಂದು ವಾರದ ಅವಧಿಯಲ್ಲಿ ಒಂದು ತಿಂಗಳ ಮಳೆ ಬೀಳುತ್ತಿರುವ ಪರಿಣಾಮ, ಹಲವು ಸೇತುವೆಗಳು ಕುಸಿದು ಸಂಪರ್ಕ ಕಡಿತವಾಗಿದೆ. ವಿದ್ಯುತ್ ಕಂಬಗಳು ಧರೆಗುರುಳಿ ಅನೇಕ ಗ್ರಾಮಗಳು ವಿದ್ಯುತ್ ಇಲ್ಲದೆ ಅಂಧಕಾರದಲ್ಲಿ ಮುಳುಗಿವೆ. ಭಾರೀ ಮಳೆಗೆ ಶಾಲಾ ಕೊಠಡಿ, ಅಂಗನವಾಡಿ ಕಟ್ಟಡ, ಆಸ್ಪತ್ರೆ, ಸರ್ಕಾರಿ ಕಚೇರಿಗಳೂ ಸೋರುವಂತಾಗಿದೆ.

ಪ್ರವಾಹದಿಂದಾಗಿ ಫಲವತ್ತಾದ ಮಣ್ಣು ಕೊಚ್ಚಿಹೋಗಿದ್ದು, ಭೂಮಿ ಸವಳು ಜವಳಾಗಿದೆ. ರೈತರ ಬಗ್ಗೆ ಅಪಾರ ಕಾಳಜಿ ಹೊಂದಿರುವ ತಾವು, ಬೀದರ್ ಜಿಲ್ಲೆಯಲ್ಲಿ ವೈಮಾನಿಕ ಸಮೀಕ್ಷೆ ನಡೆಸಿ, ತುರ್ತು ಪರಿಹಾರ ಹಾಗೂ ವಿಶೇಷ ಪ್ಯಾಕೇಜ್ ಘೋಷಿಸಬೇಕು ಎಂದು ವಿನಂತಿ ಮಾಡಿದ್ದಾಗಿ ಇದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದೂ ತಿಳಿಸಿದರು.

# ಮಾದಕ ಮುಕ್ತ ಜಿಲ್ಲೆಯಾಗಲು ಎಲ್ಲರೂ ಶ್ರಮಿಸೋಣ:ಸಂಸದ ಸಾಗರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ,ಸೆ.29: ಬೀದರ ಜಿಲ್ಲೆಯನ್ನು ಮಾದಕ ಮುಕ್ತ ಜಿಲ್ಲೆಯಾಗಲು ಎಲ್ಲರೂ ಶ್ರಮಿಸೋಣ ಎಂದು ಸಂಸದ ಸಾಗರ ಖಂಡ್ರೆ ಅವರು ತಿಳಿಸಿದರು.

ಅವರು ಸೋಮವಾರ ನಗರದ ಪೂಜ್ಯ ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ರಾಷ್ಟ್ರೀಯ ಜೀವನೋಪಾಯ ಅಭಿಯಾನ – ಕರ್ನಾಟಕ ಹಾಗೂ ಜಿಲ್ಲಾ ಪಂಚಾಯತ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಮಾದಕ ಮುಕ್ತ ಕರ್ನಾಟಕ ಅಭಿಯಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಾದಕ ವಸ್ತುಗಳ ವ್ಯಸನ ಒಂದು ಬಹುದೊಡ್ಡ ಸಾಮಾಜಿಕ ಪಿಡುಗಾಗಿದೆ. ಆದ್ದರಿಂದ ಇದನ್ನು ಹೋಗಲಾಡಿಸಲು ನಾವೆಲ್ಲರೂ ಕೈಜೋಡಿಸಬೇಕು. ಇಂದಿನ ಯುವ ಪೀಳಿಗೆ ಮಾದಕ ವಸ್ತುಗಳಿಗೆ ಅಡಿಕ್ಟ್ ಆಗಿ ತಮ್ಮ ಭವಿಷ್ಯ ತಾವೇ ಹಾಳು ಮಾಡಿಕೊಳ್ಳುತ್ತಿದ್ದಾರೆ ಎಂದರು.

ಮಾದಕ ವಸ್ತುಗಳ ಸೇವನೆಯಿಂದ ಆಗುವ ದುಷ್ಪರಿಣಾಮದ ಬಗ್ಗೆ ಮನೆ–ಮನೆಗಳಲ್ಲಿ, ಶಾಲಾ–ಕಾಲೇಜುಗಳಲ್ಲಿ ತಿಳಿಸಬೇಕು ಮತ್ತು ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಮನೆಗಳಲ್ಲಿ ಪೋಷಕರು ಮಕ್ಕಳ ಬಗ್ಗೆ ವಿಶೇಷ ಗಮನ ವಹಿಸಬೇಕು ಹಾಗೂ ಅವರ ದೈನಂದಿನ ಚಟುವಟಿಕೆಗಳ ಬಗ್ಗೆ ನಿಗಾ ವಹಿಸಬೇಕು ಎಂದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ.ಗಿರೀಶ್ ಬದೋಲೆ ಮಾತನಾಡಿ, ಮಾದಕ ಮುಕ್ತ ಮಾಡಲು ನಾವು ಮನೆಯಿಂದಲೇ ಆರಂಭಿಸಬೇಕು. ಯುವ ಪೀಳಿಗೆಯನ್ನು ಮಾದಕ ವಸ್ತುಗಳಿಂದ ದೂರ ಇಟ್ಟರೆ, ಉತ್ತಮವಾದ ಸಮಾಜವನ್ನು ನಿರ್ಮಾಣ ಮಾಡಬಹುದು. ಈಗಾಗಲೇ ಜಿಲ್ಲೆಯಲ್ಲಿ ಆಗಸ್ಟ್ 1 ರಿಂದ ಸೆಪ್ಟೆಂಬರ್ 30 ವರೆಗೆ ಮಾದಕ ಮುಕ್ತ ಕರ್ನಾಟಕ ಅಭಿಯಾನದಡಿಯಲ್ಲಿ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಜನರಲ್ಲಿ ಅರಿವು ಮೂಡಿಸಲಾಗಿದೆ ಎಂದರು.

ಮನೋವೈದ್ಯ ತಜ್ಞರಾದ ರಾಘವೇಂದ್ರ ವಾಗೋಲೆ ಅವರು ಮಾದಕ ವಸ್ತುಗಳ ಸೇವನೆಯಿಂದ ಉಂಟಾಗುವ ದುಷ್ಪರಿಣಾಮದ ಬಗ್ಗೆ ವಿಶೇಷ ಉಪನ್ಯಾಸ ನೀಡಿದರು.

ಇದೇ ವೇಳೆ ಮಾದಕ ಮುಕ್ತದ ಧ್ಯೇಯ ಬೋಧನೆ ಹಾಗೂ ಕರ ಪತ್ರ ಬಿಡುಗಡೆ ಮಾಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ಸೂರ್ಯಕಾಂತ ಬೀರಾದರ, ಎನ್.ಆರ್.ಎಲ್.ಎಂ ಮ್ಯಾನೇಜರ್ ಪ್ರವೀಣ್ ಕುಮಾರ್, ಎನ್.ಆರ್.ಎಲ್.ಎಂ ಅಧಿಕಾರಿ ಸುಭಾಷ್ ಸೇರಿದಂತೆ ಸ್ವಸಹಾಯ ಸಂಘಗಳ ಮಹಿಳೆಯರು ಮತ್ತು ಇತರರು ಉಪಸ್ಥಿತರಿದ್ದರು.

# ಅತಿವೃಷ್ಟಿ ಬೆಳೆ ಹಾನಿ: ರೈತರ ಸಾಲ ಮನ್ನಾ ಮಾಡಿ, ವಿಶೇಷ ಪ್ಯಾಕೇಜ್ ಘೋಷಿಸಿ



ಕಲಬುರಗಿ:ಸೆ.29: ಅತಿವೃಷ್ಟಿ ಹಾಗೂ ನೆರೆಯಿಂದ ರೈತರ ಬದುಕು ತೀವ್ರ ಸಂಕಷ್ಟಕ್ಕೆ ಒಳಗಾಗಿದ್ದು, ಕೂಡಲೇ ರಾಜ್ಯ ಸರ್ಕಾರವು ರೈತರ ಸಾಲ ಮನ್ನಾ ಮಾಡುವ ಮೂಲಕ ಸಂಕಷ್ಟ ರೈತರಿಗಾಗಿ ವಿಶೇಷ ಪ್ಯಾಕೇಜ್ ಘೋಷಿಸಬೇಕು ಎಂದು ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ಅವರು ಒತ್ತಾಯಿಸಿದರು.

ನಗರದ ಕನ್ನಡ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಕುರಿತು ನಗರದಲ್ಲಿ ಸಭೆ ಮಾಡಲಾಗಿದ್ದು, ರೈತರ ಸಮಸ್ಯೆಗಳು ಕುರಿತು ಚರ್ಚಿಸಿ ಸರ್ಕಾರಕ್ಕೆ ರೈತರ ಹಕ್ಕುಗಳನ್ನು ಒತ್ತಾಯಿಸಲು ತೀರ್ಮಾನಿಸಲಾಗಿದೆ ಎಂದರು.

ಸಭೆಯಲ್ಲಿ ಅತಿವೃಷ್ಟಿ ಮಳೆ ಹಾನಿ ಪರಿಹಾರದ ಎನ್‌ಡಿಆರ್‌ಎಫ್ ಹಾಗೂ ಎಸ್‌ಟಿಆರ್‌ಎಫ್ ಮಾನದಂಡ ಬದಲಾಯಿಸಬೇಕು ವೈಜ್ಞಾನಿಕವಾಗಿ ಅತಿವೃಷ್ಟಿ ಪರಿಹಾರ ನಿಗದಿಗೊಳಿಸುವಂತೆ ಒತ್ತಾಯಿಸಲಾಗಿದೆ. ಕಲ್ಯಾಣ ಕರ್ನಾಟಕದ ಬಗ್ಗೆ ಸರ್ಕಾರ ಕೇವಲ ಮೊಸಳೆ ಕಣ್ಣೀರು ಸುರಿಸಬಾರದು. ಅತಿವೃಷ್ಟಿಯಿಂದ ಮತ್ತು ಭೀಮಾ ನದಿ ಪ್ರಭಾವದಿಂದ ಮನೆ ಕಳೆದುಕೊಂಡು ತನ್ನ ಜೀವನಕ್ಕೆ ಆಧಾರವಾಗಿದ್ದ ಬೆಳೆ ನೀರಿನಲ್ಲಿ ಕೊಚ್ಚಿ ಹೋಗಿ ರೈತ ಕಣ್ಣೀರಿನಲ್ಲಿ ಕೈ ತೊಳೆಯುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ರೈತ ಮಾಡಿದ ಸಾಲಕ್ಕೆ ಸಿಕ್ಕು ಸಾವು ಬದುಕಿನ ಮಧ್ಯೆ ಹೋರಾಟ ಮಾಡುತ್ತಿದ್ದಾರೆ. ರೈತರು ಉಳಿಯಲು ರೈತನ ಕೃಷಿ ಉಳಿಯಲು ರೈತರ ಸಂಪೂರ್ಣ ಸಾಲಮನ್ನಾ ಮಾಡುವಂತೆ, ರೈತರಿಗೆ ಸೂಕ್ತ ಪರಿಹಾರ ಒದಗಿಸಲು ಉನ್ನತ ಮಟದ ಸಮಿತಿ ರಚಿಸಿ ಸಮೀಕ್ಷೆ ಕೈಗೊಳ್ಳುವಂತೆ, ಸಂಕಷ್ಟಕ್ಕೆ ಒಳಗಾದ ರೈತರಿಗೆ ಸರ್ಕಾರದಿಂದ ವಿಶೇಷ ಪ್ಯಾಕೇಜ್ ಘೋಷಿಸಿ ಸೂಕ್ತ ಪರಿಹಾರ ನೀಡುವಂತೆ ಅವರು ಒತ್ತಾಯಿಸಿದರು.

ಭೀಮಾ ನದಿ ಪ್ರಭಾವದಿಂದಾಗಿ ಕಬ್ಬು ಸಂಪೂರ್ಣ ನೀರಲ್ಲಿ ಮುಳುಗಿ ರೈತನಿಗೆ ಬಹಳ ನಷ್ಟವಾಗಿರುತ್ತದೆ ಕೆಲವು ಅಧಿಕಾರಿಗಳು ಸರ್ಕಾರ–ಕ್ಕೆ ತಪ್ಪು ಮಾಹಿತಿ ಕೊಟ್ಟು ಕಬ್ಬು ಹಾಳಾಗುವುದಿಲ್ಲ ಎಂದು ಕಬ್ಬು ಬೆಳೆಗಾರರಿಗೆ ನಿರ್ಲಕ್ಷ್ಯ ಮಾಡುತ್ತಿದ್ದಾರೆ. ಆದರೆ ಕಬ್ಬು ಸಂಪೂರ್ಣ ನೀರಿನಲ್ಲಿ ಮುಳುಗಿರುವುದರಿಂದ ಕಬ್ಬು ಕೂಡ ಅತಿ ಹೆಚ್ಚು ಹಾಳಾಗಿದೆ. ಈ ಕುರಿತು ಅನುಮಾನ ಇದ್ದರೆ ಭೀಮಾ ನದಿ ಪಾತ್ರದ ರೈತರ ಜಮೀನಿಗೆ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಸಮೀಕ್ಷೆ ನಡೆಸಿ ಹಾಳಾಗಿರುವುದು ದೃಢಪಟ್ಟರೆ ಸೂಕ್ತ ಪರಿಹಾರ ಕಬ್ಬಿಗೂ ಕೂಡ ಕೂಡಲೇಬೇಕು ಎಂದು ಅವರು ಮುಖ್ಯಮಂತ್ರಿಗಳಿಗೆ ಆಗ್ರಹಿಸಿದರು.

ಜಿಲ್ಲಾಡಳಿತ, ರಾಜ್ಯದ ಮುಖ್ಯಮಂತ್ರಿ ಸಿದ್ಧರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ಜಿಲ್ಲೆಯ ಎಲ್ಲ ಶಾಸಕರು ರೈತರ ಬಗ್ಗೆ ಕಾಳಜಿ ವಹಿಸಿ ಸರ್ಕಾರದ ಮೇಲೆ ಒತ್ತಡ ಹಾಕಿ ರೈತರಿಗೆ ಸೂಕ್ತ ಪರಿಹಾರ ಒದಗಿಸಬೇಕು. ಇಲ್ಲವಾದರೆ ಜಿಲ್ಲೆಯ ರೈತರ ಪರಿಸ್ಥಿತಿ ಬೀದಿಗೆ ಬಂದಿದೆ. ಎಲ್ಲವನ್ನು ಬಿಟ್ಟು ರೈತರು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಸರ್ಕಾರದ ವಿರುದ್ಧ ಸತತ ಹೋರಾಟ ಮಾಡಬೇಕಾಗುತ್ತದೆ ಎಂದು ಅವರು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಕರಬಸಪ್ಪ ಉಜ್ಜಾ, ಬಸವರಾಜ್ ಪಾಟೀಲ್ ಅಂಕಲಗಿ, ಜಿಲ್ಲಾಧ್ಯಕ್ಷ ರಮೇಶ್ ಎಸ್. ಹೂಗಾರ್, ರೇವಣಸಿದ್ದಯ್ಯ ಮಠ, ಶರಣು ಸಾಹುಕಾರ್ ಬಿಲ್ಲಾಡು, ನಾಗೇಂದ್ರ ದೇಶಮುಖ್ ಬಿಲ್ಲಾಡ್, ರೇವಣಸಿದ್ದಯ್ಯ ಮಠ, ಶರಣು ಸಾಹುಕಾರ್,

ಬಸವರಾಜ್ ವಾಳಿ, ಲಕ್ಷ್ಮೀಪುತ್ರ ಮನಮಿ ಅಫಜಲಪುರ, ಸಂಗಣ್ಣ ಜಿ. ರೇಷ್ಮೆ, ಭಾಗಣ್ಣ ಕುಂಬಾರ್ ಅಫಜಲಪುರ, ಶಿವರಾಜ್ ಪಾಟೀಲ್ ಗೊಣಗಿ, ವೀರಣ್ಣ ಗಂಗಣಿ, ಸಂತು ತೆನ್ನಳ್ಳಿ, ಧರ್ಮು ಮಾಂಗ್, ರುಕ್ಮುದ್ದೀನ್ ಸಾಬ್ ಮುಲ್ಲಾ, ಜಗದೀಶ್ ಕೆನಹಳ್ಳಿ, ನಿಂಗಣ್ಣ ಕೆರಮಗಿ, ಬೀರಣ್ಣ ಹೊಸಮನಿ ಮುಂತಾದವರು ಉಪಸ್ಥಿತರಿದ್ದರು.

# ಮುಖ್ಯಮಂತ್ರಿ ಆಗಮನ: ಪೂರ್ವಭಾವಿ ಸಭೆ



ಕಲಬುರಗಿ, ಸೆ 29 : ಉತ್ತರ ಕರ್ನಾಟಕ ಭಾಗದಲ್ಲಿ ಮಳೆಯಿಂದ ಹಾನಿಗೊಳಗಾದ ಪ್ರದೇಶಗಳ ವೈಮಾನಿಕ ಸಮೀಕ್ಷೆಗಾಗಿ ನಾಳೆ ಮಂಗಳವಾರ (ಸೆ 30) ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಕಲಬುರಗಿಗೆ ಆಗಮಿಸುತ್ತಿರುವ ಹಿನ್ನಲೆಯಲ್ಲಿ ಇಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ವೈದ್ಯಕೀಯ ಶಿಕ್ಷಣ ಮತ್ತು ಕೌಶಾಲ್ಯಭಿವೃದ್ಧಿ ಸಚಿವ ಶರಣ್ ಪ್ರಕಾಶ್ ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ತಯಾರಿ ಕುರಿತು ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ಹಮ್ಮಿಕೊಳ್ಳಲಾಗಿತ್ತು.

ಮುಖ್ಯಮಂತ್ರಿಗಳ ಜೊತೆಯಲ್ಲಿ ಕೃಷಿ ಸಚಿವ ಚೆಲುವರಾಯಸ್ವಾಮಿ, ಕಂದಾಯ ಸಚಿವ ಕೃಷ್ಣಬೈರೇಗೌಡ ಸೇರಿದಂತೆ ಸಂಬಂಧಿತ ಸಚಿವರುಗಳು ಹಾಗೂ ಹಿರಿಯ ಅಧಿಕಾರಿಗಳು ಸಮೀಕ್ಷೆಯಲ್ಲಿ ಭಾಗವಹಿಸಲಿದ್ದಾರೆ.

ಬೀದರ್, ಕಲಬುರಗಿ, ಯಾದಗಿರಿ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಸಮೀಕ್ಷೆ ನಡೆಸಿದ ನಂತರ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಈ ಭಾಗದ ಜನಪ್ರತಿನಿಧಿಗಳು, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಸಿಇಓ ಗಳು ಸೇರಿದಂತೆ ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ.

ನಾಳಿನ ಸಭೆಯಲ್ಲಿ ಮುಖ್ಯಮಂತ್ರಿಗಳ ಗಮನಕ್ಕೆ ತರಬೇಕಾದ ಅಂಶಗಳ ಕುರಿತು ಚರ್ಚಿಸಲಾಯಿತು. ಇದೇ ಸಂದರ್ಭದಲ್ಲಿ ಅಧಿಕಾರಿಗಳಿಗೆ ಸೂಕ್ತ ದಾಖಲೆಗಳೊಂದಿಗೆ ಆಗಮಿಸಲು ಸಚಿವರು ಸೂಚಿಸಿದರು.

ಪ್ರತಿ ತಾಲ್ಲೂಕಿಗೆ

ಸಂಬಂಧಿಸಿದಂತೆ ಜಿಲ್ಲೆಯ ಎಲ್ಲಾ ಪ್ರವಾಹ ಪೀಡಿತ ತಾಲ್ಲೂಕಗಳ ಸಮಸ್ಯೆಗಳನ್ನು ದಾಖಲೆಗಳ ಸಮೇತ ತಕ್ಷಣವೆ ಒದಗಿಸಲು ವಿಡಿಯೋ ಕಾನ್ಫರೆನ್ಸ್ ಮೂಲಕ ತಿಳಿಸಲಾಯಿತು.

ಸಭೆಯಲ್ಲಿ ಶಾಸಕರಾದ ಅಲ್ಲಮಪ್ರಭು ಪಾಟೀಲ್, ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರು, ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್, ಜಿಲ್ಲಾ ಪಂಚಾಯತ್ ಸಿಇಓ ಭಂವರ್ ಸಿಂಗ್ ಮೀನಾ ಸೇರಿದಂತೆ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.